ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallmmanudi@gmail.com E-paper: www.mallmmanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy

VOLUME - 13 ಸಂಪುಟ-13 | ISSUE - 26 ಸಂಚಿಕೆ- 26 | PAGE- 8 ಪುಟ-8 | ಶನಿವಾರ 01.03.2025 | RS.2/- ಬೆಲೆ 2/-

## ಸಾಮಾಜಿಕ ನ್ಯಾಯದ ಹರಿಕಾರ ಡಾ.ಅಂಬೇಡ್ಕರ:ಸಚಿವ ಖಂಡ್ರೆ



ಹುಮನಾಬಾದ:ಫೆ.28:ಡಾ.ಬಿ.ಆರ್. ಅಂಬೇಡ್ಕರರು ಯಾವುದೇ ಒಂದು ಜಾತಿಗೆ ಸೀಮಿತರಲ್ಲ, ಸಾಮಾಜಿಕ ನ್ಯಾಯ ಕೊಟ್ಟ ಕೀರ್ತಿ ಬಾಬಾ ಸಾಹೇಬರಿಗೆ ಸಲ್ಲುತ್ತದೆ. ಮಹಾಪುರುಷರ ಮೂರ್ತಿ ನೊಡಿದ ತಕ್ಷಣ ಅವರಲ್ಲಿರುವ ಸ್ಪೂರ್ತಿ ಯುವಕರಲ್ಲಿಬರಬೇಕು.ಬಾಬಾ ಸಾಹೇಬರುಯಾವುದೆಕಷ್ಟಗಳಿಗೆ ಹೆದರದೆ ಪರಿಶ್ರಮ ಪಟ್ಟು ಎಲ್ಲಾ ರೀತಿಯ ವಿದ್ಯಾಭ್ಯಾಸ ಮಾಡಿ, ಇಡೀ ಜಗತ್ತಿನಲ್ಲಿಯೇ ಶ್ರೇಷ್ಠವಾಗಿರುವ ಸಂವಿಧಾನ ನೀಡಿದವರು ಎಂದು ಸಚಿವ ಈಶ್ವರ ಖಂಡ್ರೆ ತಿಳಿಸಿದರು.

ಅವರು ಕನಕಟ್ಟಾ ಗ್ರಾಮದಲ್ಲಿ ಡಾ.ಅಂಬೇಡ್ಕರರ ನೂತನ ಮೂರ್ತಿ ಅನಾವರಣಗೊಳಿಸಿ ಮಾತನಾಡಿ, ಶೋಷಿತರ ಪರವಾಗಿ ಸಿಡಿದೆದ್ದು. ಸಮಾಜವನ್ನು ಅಭಿವೃದ್ಧಿ ಪಡಿಸಿದ್ದಾರೆ, ರಾಜಕೀಯ ಸಮಾನತೆ, ಪ್ರಜಾಪ್ರಭುತ್ವ ನೀಡಿದ್ದಾರೆ,ಸಾಮಾಜಿಕನ್ಯಾಯ ನೀಡಿದ್ದಾರೆ ಎಂದರು, ಗುಣ ಮಟ್ಟದ ಶಿಕ್ಷಣ ನೀಡಿದ್ದಾಗ ಜಾತಿಯಪದ್ದತಿ ನಾಶವಾಗುತ್ತದೆ ಎಂದರು.

ದೇಶದಲ್ಲಿ ಕೊಮುವಾದಿ ಶಕ್ತಿಗಳು ಕುಣಿಯುತ್ತಿವೆ. ಜಾತಿ ಜಾತಿ ಮಧ್ಯೆ ಜಗಳ ಹಚ್ಚುವ ಕೆಲಸ ಮಾಡುತ್ತಿವೆ ಎಂದು ಕಳವಳವನ್ನು ಸಚಿವರು ವ್ಯಕ್ತಪಡಿಸಿದರು.

ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಅನ್ಯಾಯವಾಗುತ್ತಿದೆ, ಆರ್ಥಿಕ ನೀತಿಯಲ್ಲಿ ತೆ-ೂಂದರೆಯಾಗುತ್ತಿದೆ. ಬೀದರ ಜಿಲ್ಲೆಗೆ 500 ಕೋಟಿ ಅನುದಾನ ನೀಡಿದ್ದೆವೆ. ಸಾಕಷ್ಟು ಅಭಿವೃದ್ಧಿ ಮಾಡಲಾಗುತ್ತಿದೆ ಎಂದರು.

ಸಾನಿಧ್ಯವಹಿಸಿದ್ದ ಗಂಗಾಧರ ಶ್ರೀಗಳು ಮಾತನಾಡಿ, ರಾಜಶೇಖರ ಪಾಟೀಲ ರವರು ನೂತನವಾಗಿ ಸ್ಥಾಪನೆಯಾಗಿರುವ ಡಾ.ಅಂಬೇಡ್ಕರ ಮೂರ್ತಿಗೆ ಸ್ವಯಂ ಅನುದಾನ ನೀಡುವ ಮೂಲಕ ಧರ್ಮ ಮೆಚ್ಚುವ

(2ನೇ ಪುಟ ನೋಡಿ)

## ಬೇಸಿಗೆಯಲ್ಲಿ ಲೋಡ್ ಶೆಡ್ಡಿಂಗ್ ಇಲ್ಲ




ಮಲ್ಲಮ್ಮ ನುಡಿ ವಾರ್ತೆ
ಬೆಂಗಳೂರು:ಫೆ.28:ಬೇಸಿಗೆಯಲ್ಲಿ 19,000 ಮೆಗಾ ವ್ಯಾಟ್‌ನಷ್ಟು ವಿದ್ಯುತ್ ಬೇಡಿಕೆಯನ್ನು ಈಡೇರಿಸಲು ಇಂಧನ ಇಲಾಖೆ ಸಿದ್ಧವಾಗಿದ್ದು, ಯಾವುದೇ ಸಂದರ್ಭದಲ್ಲೂ ಲೋಡ್ ಶೆಡ್ಡಿಂಗ್ ಮಾಡುವುದಿಲ್ಲ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ಹೇಳಿದ್ದಾರೆ.

ಬೇಸಿಗೆಯಲ್ಲಿ ವಿದ್ಯುತ್ ಪೂರೈಕೆಗೆ ಸಂಬಂಧಿಸಿದಂತೆ ಎಸ್ಕಾಂಗಳ ಅಧ್ಯಕ್ಷರು ಸೇರಿದಂತೆ ಇಂಧನ ಇಲಾಖೆ ಹಿರಿಯ ಅಧಿಕಾರಿಗಳೊಂದಿಗಿನ ಸಭೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೇಸಿಗೆಯಲ್ಲಿ ರೈತರ ಕೃಷಿ ಪಂಪ್ ಸೆಟ್‌ಗಳಿಗೆ ದಿನ 7 ಗಂಟೆ ಮತ್ತು ಇತರ ಉದ್ದೇಶಗಳಿಗೆ ದಿನದ 24 ಗಂಟೆ ವಿದ್ಯುತ್ ಪೂರೈಸುವ ವಾಗ್ದಾನವನ್ನು ಈಡೇರಿಸಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ಬೇಡಿಕೆ ಇರುವಷ್ಟು ವಿದ್ಯುತ್ ಲಭ್ಯವಿದೆ. ಸ್ಥಳೀಯವಾಗಿ ತಾಂತ್ರಿಕ ಕಾರಣಗಳಿಂದ ವಿದ್ಯುತ್ ಪೂರೈಕೆ ಸ್ಥಗಿತಗೊಳ್ಳಬಹುದೇ ಹೊರತು ಲೋಡ್ ಶೆಡ್ಡಿಂಗ್ ಮಾಡುವ ಸಂದರ್ಭ ಉದ್ಭವವಾಗುವುದಿಲ್ಲ. ವಿದ್ಯುತ್ ಬೇಡಿಕೆ ಹೆಚ್ಚುತ್ತಿದೆ ಎಂದರೆ ರಾಜ್ಯವು ಅಭಿವೃದ್ಧಿ ಪಥದಲ್ಲಿ ಮುಂದುವರಿಯುತ್ತಿದೆ. ಹೆಚ್ಚಿನ ಅಭಿವೃದ್ಧಿ ಕೆಲಸಗಳು ನಡೆಯುತ್ತಿವೆ ಎಂದು ಅರ್ಥ ಎಂದು ತಿಳಿಸಿದರು.

ಪಂಪ್ಡ್ ಸ್ಟೋರೇಜ್, ಬ್ಯಾಟರಿ ಸ್ಟೋರೇಜ್:

ರಾಜ್ಯದಲ್ಲಿ ಬೇಡಿಕೆಗಿಂತ ಹೆಚ್ಚು ವಿದ್ಯುತ್ ಉತ್ಪಾದನೆ ಆದರೂ ಸಂಗ್ರಹಣೆಗೆ ಅವಕಾಶ ಇಲ್ಲ. ಹೀಗಾಗಿ, ಶರಾವತಿ ಪಂಪ್ಡ್ ಸ್ಟೋರೇಜ್ ಮೂಲಕ 2000 ಮೆ.ವ್ಯಾ. ವಾರಾಹಿ ಪಂಪ್ಡ್ ಸ್ಟೋರೇಜ್ ಮೂಲಕ 1600 ಮೆ.ವ್ಯಾ. ಪಾವಗಡದಲ್ಲಿ 1000 ಮೆ.ವ್ಯಾ.ಸಾಮರ್ಥ್ಯ ಹಾಗೂ ರ‍್ಯಾಪ್ಟೆಯಲ್ಲಿ 2000 ಮೆ.ವ್ಯಾ.ಸಾಮರ್ಥ್ಯದ ಬ್ಯಾಟರಿ ಸ್ಟೋರೇಜ್ ಯೋಜನೆಗಳನ್ನು ಅನುಷ್ಠಾನಗೊಳಿಸಲು ತೀರ್ಮಾನಿಸಿದೆ. ಇದರಿಂದ ರಾಜ್ಯದಲ್ಲಿ ವಿದ್ಯುತ್ ಕೊರತೆ-ಯಾಗದಂತೆ ನೋಡಿಕೊಳ್ಳಬಹುದು ಎಂದರು.

ವಿದ್ಯುತ್ ಉತ್ಪಾದನೆ ವಿವರ:

ಫೆಬ್ರವರಿ 27ರ ಮಾಹಿತಿ ಪ್ರಕಾರ, ಕೆಪಿಸಿಎಲ್ ನ ಉಷ್ಣ ವಿದ್ಯುತ್ ಸ್ಥಾವರಗಳಲ್ಲಿ 3,300 ಮೆ.ವ್ಯಾ., ಜಲ ವಿದ್ಯುತ್ ಘಟಕಗಳಲ್ಲಿ 2000 ಮೆ.ವ್ಯಾ. ವಿದ್ಯುತ್ ಉತ್ಪಾದನೆಯಾಗಿದೆ. ಅದೇ ರೀತಿ ಯುಪಿಸಿಎಲ್ ನಿಂದ 1,26 ಮೆ.ವ್ಯಾ., ಸೋಲಾರ್ ಮೂಲಕ 6,655 ಮೆ.ವ್ಯಾ., ಪವನ ಮೂಲಕ 1940 ಮೆ.ವ್ಯಾ. ವಿದ್ಯುತ್ ಉತ್ಪಾದನೆ ಮಾಡಲಾಗಿದೆ. ಇದಲ್ಲದೆ, ಸಿಜಿಎಸ್ (ಸೆಂಟ್ರಲ್ ಜೆನರೇಟಿಂಗ್ ಸ್ಟೇಷನ್ಸ್)ನಿಂದ 6,183 ಮೆ.ವ್ಯಾ. ವಿದ್ಯುತ್ ಬಂದಿದ್ದರೆ, ಕೇಂದ್ರ ಗ್ರಿಡ್ ನಿಂದ 600 ಮೆಗಾವ್ಯಾಟ್ ವಿದ್ಯುತ್ ಖರೀದಿಸಲಾಗಿದೆ. ಪಂಜಾಬ್ ಮತ್ತು ಉತ್ತರಪ್ರದೇಶದಿಂದ ವಿನಿಮಯ ಆಧಾರದ ಮೇಲೆ 700 ಮೆಗಾ ವ್ಯಾಟ್ ವಿದ್ಯುತ್ ಪಡೆಯಲಾಗಿದೆ" ಎಂದು ತಿಳಿಸಿದರು.

ಇದಲ್ಲದೆ ವಿದ್ಯುತ್ ಬೇಡಿಕೆ ಪೂರೈಸಲು ಶನಿವಾರ (ಮಾ.1) ಕೂಡ್ಗಿಯಿದ ಹೆಚ್ಚುವರಿಯಾಗಿ 310 ಮೆಗಾವ್ಯಾಟ್ ವಿದ್ಯುತ್ ಪಡೆಯಲಾಗುತ್ತದೆ. ಜತೆಗೆ ಬೇಡಿಕೆ ಆಧರಿಸಿ ವಿನಿಮಯ ಆಧಾರದ ಮೇಲೆ ಉತ್ತರ ಪ್ರದೇಶದಿಂದ ದಿನಕ್ಕೆ 100ರಿಂದ 1,275 ಮೆ.ವ್ಯಾ. ಮತ್ತು ಪಂಜಾಬ್‌ನಿಂದ 300 ಮೆ.ವ್ಯಾ. ವಿದ್ಯುತ್ ತೆಗೆದುಕೊಳ್ಳಲಾಗುವುದು. ಅಲ್ಲದೆ, ಜೂನ್ ಮೊದಲ ವಾರದವರೆಗೆ

(2ನೇ ಪುಟ ನೋಡಿ)

## ಲಾರಿಗೆ ಕಾರು ಡಿಕ್ಕಿ:ಚಾಲಕ ಸ್ಥಳದಲ್ಲೇ ಸಾವು

ಮಲ್ಲಮ್ಮ ನುಡಿ ವಾರ್ತೆ
ಯಾದಗಿರಿ,ಫೆ.28: ಜಿಲ್ಲೆಯ ವಡಗೇರಾ ತಾಲ್ಲೂಕಿನ ತಡಿಬಿಡಿ ಗ್ರಾಮದಿಂದ ಅನತಿ ದೂರದಲ್ಲಿ ಲಾರಿ ಮತ್ತು ಕಾರಿನ ನಡುವೆ ಭೀಕರ ಅಪಘಾತವಾಗಿ ಕಾರು ಚಾಲಕ ಬಸಲಿಂಗಪ್ಪ (ಸೂರಿ) (27) ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ನಡೆದಿದೆ. ಇಂದು ಬೆಳಿಗ್ಗೆ ಸುಮಾರು 7 ಗಂಟೆಯ ಸಮಯದಲ್ಲಿ ಯಾದಗಿರಿ ಕಡೆಯಿಂದ ಸುರಪುರದ ಕಡೆಗೆ ಹೊರಟಿದ್ದ ಕಾರು ಖಾನಾಪೂರ ಗ್ರಾಮವನ್ನು ದಾಟಿ ತಡಿಬಿಡಿ ಗ್ರಾಮವು ಅನತಿ ದೂರದಲ್ಲಿರುವಾಗ ಎದುರಿಗೆ ಒಮ್ಮೆಲೆ ಕಾರಿಗೆ ಎಮ್ಮೆ ಅಡ್ಡ ಬಂದ ಕಾರಣ ಎಮ್ಮೆಗೆ ಡಿಕ್ಕಿ ಹೊಡೆಯುವುದನ್ನು ತಪ್ಪಿಸಲು ಕಾರು ಚಾಲಕ ಕಾರನ್ನು ಬಲಕ್ಕೆ ತಿರುಗಿಸಿದಾಗ ಎದುರಿಗೆ ಬಂದ ಲಾರಿಗೆ ನೇರವಾಗಿ ಡಿಕ್ಕಿ ಹೊಡೆದ ಪರಿಣಾಮ ಕಾರು ಲಾರಿಯ ಒಳಗಡೆ ನುಗ್ಗಿ ನಜ್ಜುಗುಜ್ಜಾಗಿದೆ. ಈ ಘಟನೆಯಲ್ಲಿ ಶಹಾಪುರ ತಾಲ್ಲೂಕಿನ ಕನ್ನೆಕೌಳುರ ಗ್ರಾಮದ ಬಸಲಿಂಗಪ್ಪ (ಸೂರಿ) ಮುಕುಂದಪ್ಪ ಪೂಜಾರಿ (27) ಎಂಬ ಕಾರು ಚಾಲಕ ಸ್ಥಳದಲ್ಲೇ ಮೃತಪಟ್ಟಿದ್ದಾನೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ವಡಗೇರಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪಿಎಸ್‌ಐ ಮೆಹಬೂಬ ಅಲಿ ತನಿಖೆ ಕೈಗೊಂಡಿದ್ದಾರೆ.

## ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಕ್ರಮ ವಹಿಸಿ:ಸಚಿವ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ
ಬೀದರ: ಫೆ.28: ಜಿಲ್ಲೆಯ 867 ಜನವಸತಿ ಪ್ರದೇಶಗಳಲ್ಲಿ ಎಲ್ಲಿಯೂ ನೀರಿನ ಸಮಸ್ಯೆ ಆಗದಂತೆ ಅಧಿಕಾರಿಗಳು ಮುಂಜಾಗೃತಾ ಕ್ರಮ ವಹಿಸುವಂತೆ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ತಿಳಿಸಿದರು.

ಜಿಲ್ಲಾ ಪಂಚಾಯತ ಸಭಾಭವನದಲ್ಲಿಂದು ಜರುಗಿದ ತ್ರೈಮಾಸಿಕ ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಾ, ನೀರಿನ ಎಲ್ಲ ಕಾಮಗಾರಿಗಳನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸಿ, ಸಧ್ಯ ಬೇಸಿಗೆಯಲ್ಲಿ ಎಲ್ಲಿಯೂ ನೀರಿನ ಸಮಸ್ಯೆ ಆಗದಂತೆ ಕ್ರಮ ವಹಿಸುವಂತೆ ಸಚಿವ ಖಂಡ್ರೆ ಸೂಚನೆ ನೀಡಿದರು.

ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆಯಡಿ ಈಗಾಗಲೇ 632 ಕಾಮಗಾರಿಗಳು ಪೂರ್ಣಗೊಂಡಿರುವ ಬಗ್ಗೆ ಅಧಿಕಾರಿಗಳಾದ ಮಾಹಿತಿ ಪಡೆದರು. ಶಾಶ್ವತ ನೀರಿನ ವಲಯ ಬಳಸಿ ನೀರು ಸರಬರಾಜು ಯೋಜನೆ ಕೈಗೊಳ್ಳುವಂತೆ ಸಚಿವರು ಸೂಚಿಸಿದರು. ಜಿಲ್ಲೆಯಲ್ಲಿ ಸಾರ್ವಜನಿಕರು ಆರೋಗ್ಯ ಕಾಪಾಡುವ ಹಿತದೃಷ್ಟಿಯಿಂದ ವೈದ್ಯಾಧಿಕಾರಿಗಳು ಪ್ರಮಾಣಿಕ ಸೇವೆ ಸಲ್ಲಿಸುವಂತೆ ಸಚಿವರು ಸೂಚಿಸಿದರು. ಈವರೆಗೆ ಬಾಣಂತಿಯರು ಮರಣ ಹೊಂದಿರುವ ಬಗ್ಗೆ ಮಾಹಿತಿ ಪಡೆದ ಸಚಿವರು ಜಿಲ್ಲೆಯಲ್ಲಿ ಗರ್ಭಿಣಿ ಹಾಗೂ ಹೆರಿಗೆ ಪ್ರಕರಣಗಳಲ್ಲಿ ಸೂಕ್ತ ಔಷಧೋಪಚಾರ ಹಾಗೂ ಚಿಕಿತ್ಸೆ ನೀಡುವಂತೆ ಜಿಲ್ಲಾ ಆರೋಗ್ಯಾಧಿಕಾರಿ ಡಾ.ನಿರುಗಡೆ ಅವರಿಗೆ ಸೂಚಿಸಿದರು. ಬ್ರಿಮ್ಸ್‌ನಲ್ಲಿ ಅವ್ಯವಸ್ಥೆ ಸರಿಪಡಿಸಲು ಡಿ.ಎಚ್.ಓ., ಜಿಲ್ಲಾ ಶಸ್ತ್ರಚಿಕಿತ್ಸಕ ಹಾಗೂ ಬ್ರಿಮ್ಸ್ ನಿರ್ದೇಶಕರು ಚರ್ಚಿಸಿ ಸಹಕಾರದಿಂದ ಸಾರ್ವಜನಿಕರ ಆರೋಗ್ಯ ಸುಧಾರಣೆಗೆ ಕ್ರಮ ವಹಿಸುವಂತೆ ತಿಳಿಸಿದರು. ಮಾರ್ಚ ಒಳಗಾಗಿ ಕ್ಯಾಟಲ್ಯಾಬ್ ಆರಂಭಿಸುವಂತೆ ಸೂಚಿಸಿದರು. ಡಯಾಲಿಸಿಸ್ ರೋಗಿಗಳಿಗೆ ಬ್ರಿಮ್ಸ್‌ನಲ್ಲಿ ಕಾಯುವ ಸ್ಥಿತಿ ಬಗ್ಗೆ ಸಾಕಷ್ಟು ದೂರುಗಳು ಬರುತ್ತಿದ್ದು, ಇನ್ನೆರಡು ಡಯಾಲೇಸಿಸ್ ಯಂತ್ರ ಬೇಕಿದ್ದಲ್ಲಿ ಕೆಕೆಆರ್‌ಡಿಬಿ ಅನುದಾನದಡಿ ನೀಡಲಾಗುವುದು. ಆದರೆ ಡಯಾಲೇಸಿಸ್ ರೋಗಿಗಳಿಗೆ ಸಮಸ್ಯೆಯಾಗದಂತೆ ವೈದ್ಯರು 3 ಶಿಫ್ಟ್‌ಗಳಲ್ಲಿ ಚಿಕಿತ್ಸೆ ನೀಡುವಂತೆ ಸಚಿವರು ಸೂಚಿಸಿದರು. ಅಲ್ಲದೇ 10 ದಿನದೊಳಗೆ ಕ್ರಮ ವಹಿಸದಿದ್ದರೆ ಶಿಸ್ತು ಕ್ರಮ ಕೈಗೊಳ್ಳುವ ಬಗ್ಗೆಯೂ ತಿಳಿಸಿದರು.

(2ನೇ ಪುಟ ನೋಡಿ)

## ಮಾಜಿ ಸಿಎಂ ಯಡಿಯೂರಪ್ಪ ವಿರುದ್ಧ ಪೋಕ್ಸೋ ಕೇಸು: ಮಾ. 15ರಂದು ವಿಚಾರಣೆ



ಮಲ್ಲಮ್ಮ ನುಡಿ ವಾರ್ತೆ
ಬೆಂಗಳೂರು:ಫೆ.28: ಮಾಜಿ ಮುಖ್ಯಮಂತ್ರಿ ಮತ್ತು ಬಿಜೆಪಿ ಹಿರಿಯ ನಾಯಕ ಬಿ.ಎಸ್. ಯಡಿಯೂರಪ್ಪ ವಿರುದ್ಧದ ಪೋಕ್ಸೋ ಪ್ರಕರಣಕ್ಕೆ ಸಂಬಂಧಿಸಿದಂತೆ ತಮ್ಮ ಮುಂದೆ ವಿಚಾರಣೆಗೆ ಹಾಜರಾಗುವಂತೆ ಬೆಂಗಳೂರಿನ 1ನೇ ತ್ವರಿತಗತಿ ನ್ಯಾಯಾಲಯ ಸೂಚಿಸಿ ಸಮನ್ಸ್ ಜಾರಿ ಮಾಡಿದೆ. ಯಡಿಯೂರಪ್ಪ ಅವರ ಜೊತೆ ಸಹ-ಆರೋಪಿಗಳಾದ ವೈ.ಎಂ. ಅರುಣಾ, ರುದ್ರೇಶ ಮತ್ತು ಮರುಳಸಿದ್ಧಯ್ಯ ಜಿ.ಮರಿಸ್ವಾಮಿ ಅವರಿಗೆ ಸಹ ಸಮನ್ಸ್ ಜಾರಿ ಮಾಡಿ ಮಾರ್ಚ್ 15ರಂದು ವಿಚಾರಣೆ ನಿಗದಿಪಡಿಸಿದೆ.

ಪೋಕ್ಸೋ ಪ್ರಕರಣದಲ್ಲಿ ಇತ್ತೀಚೆಗೆ ಮಾಜಿ ಸಿಎಂ ಯಡಿಯೂರಪ್ಪ ಅವರಿಗೆ ಹೈಕೋರ್ಟ್ ನಿರೀಕ್ಷಣಾ ಜಾಮೀನು ನೀಡಿತ್ತು. ಬಿ.ಎಸ್. ಯಡಿಯೂರಪ್ಪ ಅವರಿಗೆ ದೊಡ್ಡ ರಿಲೀಫ್ ನೀಡಿದ ಹೈಕೋರ್ಟ್, ಯಡಿಯೂರಪ್ಪ ಅವರನ್ನು ಬಂಧಿಸದಂತೆ ಸೂಚಿಸಿತ್ತು. ವಿಚಾರಣೆಗೆ ಮೊದಲು ಹಾಜರಾತಿಯಿಂದ ವಿನಾಯಿತಿ ನೀಡಲಾಗಿತ್ತು. ಪ್ರಕರಣ ರದ್ದತಿ ಕೋರಿ

(2ನೇ ಪುಟ ನೋಡಿ)

## ರಾಯಚೂರಿನಲ್ಲಿ ಹೆಚ್ಚಾದ ಹಕ್ಕಿ ಜ್ವರದ ಭೀತಿ :ಹೈ ಅಲರ್ಟ್ ಆದ ಜಿಲ್ಲಾಡಳಿತ

ಮಲ್ಲಮ್ಮ ನುಡಿ ವಾರ್ತೆ
ರಾಯಚೂರು:ಫೆ.28: ರಾಜ್ಯದಲ್ಲಿ ಈಗ ಹಕ್ಕಿ ಜ್ವ-ರದ ಭೀತಿ ಹೆಚ್ಚಾಗುತ್ತಿದೆ. ಆಂಧ್ರಪ್ರದೇಶ ಹಾಗೂ ತೆಲಂಗಾಣದ ಗಡಿಯಲ್ಲಿರುವ ರಾಯಚೂರು ಜಿಲ್ಲೆಯಲ್ಲೂ ಆತಂಕ ಹೆಚ್ಚಾಗಿದೆ. ಜಿಲ್ಲೆಯಲ್ಲಿ ಹಕ್ಕಿಗಳು ನಿಗೂಢವಾಗಿ ಸಾವನ್ನಪ್ಪುತ್ತಿದ್ದು, ಹಕ್ಕಿ ಜ್ವರ ಶಂಕೆ ಭಯ ಹುಟ್ಟಿಸಿದೆ. ಹಕ್ಕಿಗಳ ನಿಗೂಢ ಸಾವಿನ ಬೆನ್ನಲ್ಲೇ ಇದೀಗ ಜಿಲ್ಲಾಡಳಿತ ಅಲರ್ಟ್ ಆಗಿದೆ. ಇದುವರೆಗೂ ಜಿಲ್ಲೆಯಲ್ಲಿ 30ಕ್ಕೂ ಹೆಚ್ಚು ವಿವಿಧ ಪಕ್ಷಿಗಳು ಸಾವನ್ನಪ್ಪಿವೆ. ಮಾನ್ವಿ ಪಟ್ಟಣ, ರಬಣಕಲ್ ಸೇರಿ ಹಲವೆಡೆ ಪ್ರತಿದಿನ ಪಕ್ಷಿಗಳು ಸಾವನ್ನಪ್ಪುತ್ತಿವೆ. ಪಾರಿವಾಳ, ಕೊಕ್ಕರೆ, ಕಾಗೆ, ಕಿಂಗ್ ಫಿಶರ್, ಸುವರ್ಣಪಕ್ಷಿ ಸೇರಿ ವಿವಿಧ ಪ್ರಭೇದದ ಪಕ್ಷಿಗಳು ನಿಗೂಢವಾಗಿ ಪ್ರಾಣ ಬಿಡುತ್ತಿವೆ.

(2ನೇ ಪುಟ ನೋಡಿ)

## ಅಧಿಕಾರಿಗಳು ಸಂಘಟಿತರಾಗಿ ಕಾರ್ಯನಿರ್ವಹಿಸಿದಲ್ಲಿ ಮಾತ್ರ ಬಾಲ್ಯ ವಿವಾಹ ತಡೆಯಲು ಸಾಧ್ಯ:ನಾಗಣಗೌಡ ಕೆ.

ಮಲ್ಲಮ್ಮ ನುಡಿ ವಾರ್ತೆ
ಕಲಬುರಗಿ,ಫೆ.28: ರಾಜ್ಯದಲ್ಲಿ ಸಾಮಾಜಿಕ ಪಿಡುಗಾಗಿರುವ ಬಾಲ್ಯವಿವಾಹ ತಡೆಯಬೇಕೆಂದರೆ ಮಕ್ಕಳ ಸಂಬಂಧಿತ ಎಲ್ಲಾ ಇಲಾಖೆಗಳ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸುವುದು ತುಂಬಾ ಅವಶ್ಯಕವಾಗಿದೆ ಎಂದರು ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ಆಯೋಗದ ಅಧ್ಯಕ್ಷ ನಾಗಣಗೌಡ ಕೆ. ಹೇಳಿದರು.

ಶುಕ್ರವಾರ ಇಲ್ಲಿನ ಗುಲಬರ್ಗಾ ವಿಶ್ವವಿದ್ಯಾಲಯದ ಮಹಾತ್ಮಗಾಂಧಿ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ಆಯೋಗವು ಮಕ್ಕಳ ರಕ್ಷಣಾ ನಿರ್ದೇಶನಾಲಯ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮಕ್ಕಳ ಸಹಾಯವಾಣಿ-1098, ಗುಲಬರ್ಗಾ ವಿಶ್ವವಿದ್ಯಾಲಯ ಸಂಯುಕ್ತಾಶ್ರಯದಲ್ಲಿ ಕಲಬುರಗಿ ವಿಭಾಗದ 7 ಜಿಲ್ಲೆಗಳ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳಿಗೆ ಕಲ್ಯಾಣ ಕರ್ನಾಟಕದಲ್ಲಿ ಮಕ್ಕಳ ಸ್ಥಿತಿ ಗತಿ, ಶಾಲೆಯಿಂದ ಹೊರಗುಳಿದ ಮಕ್ಕಳು, ಮಕ್ಕಳ ಭಿಕ್ಷಾಟನೆ ಹಾಗೂ ಅನಧಿಕೃತ ಕೋಚಿಂಗ್ ಸೆಂಟರ್‌ಗಳ ಕುರಿತು ಆಯೋಜಿಸಿದ



ವಿಭಾಗ ಮಟ್ಟದ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಬಾಲ್ಯವಿವಾಹ ತಡೆಯುವುದು ಕೇವಲ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಪೊಲೀಸ್ ಇಲಾಖೆಗೆ ಗುತ್ತಿಗೆ ಕೊಟ್ಟಿಲ್ಲ. ಬಾಲ್ಯ ವಿವಾಹ ತಡೆಯಲು ಸರ್ಕಾರ ಸೂಚಿಸಿದ ಪ್ರತಿಯೊಬ್ಬ ಅಧಿಕಾರಿ ಸಕ್ರಿಯವಾಗಿ ಭಾಗವಹಿಸಬೇಕಿದೆ. ಬಾಲ್ಯ ವಿವಾಹ ನಿಲ್ಲಿಸಲು ಹೋದಾಗ ಸಮಾಜ ಮತ್ತು ಸಮುದಾಯ ವಿರೋಧ ಎದುರಾಗಬಹುದು. ಅಂಗನವಾಡಿ ಕಾರ್ಯಕರ್ತೆ, ಆಶಾ ಕಾರ್ಯಕರ್ತೆ, ಶಿಕ್ಷಕರು, ವಿ.ಎ., ಪಿ.ಡಿ.ಓ ಗಳಿಗೆ ಮಾಹಿತಿ ಇಲ್ಲದೆ ಹಳ್ಳಿಯಲ್ಲಿ ಬಾಲ್ಯವಿವಾಹ ನಡೆಯುವುದಿಲ್ಲ. ಹೀಗಾಗಿ ಮುಂಚಿತವಾಗಿ ಪೋಷಕರನ್ನು ಸಮಾಲೋಚಿಸಿ ಕಾಯ್ದೆ ಬಗ್ಗೆ ಅರಿವು ನೀಡಿದಲ್ಲಿ ಇದನ್ನು ತಡೆಯಬಹುದಾಗಿದೆ. ಇಲ್ಲದೆ ಹೋದಲ್ಲಿ ಬಾಲಕನಿಗೆ ಅದು ಜೈಲ್ ಮ್ಯಾರೇಜ್ ಆಗುತ್ತದೆ ಎಂದರು.

ಇಂದು ಎಲ್ಲಾ ವಲಯದಲ್ಲಿ ಮಕ್ಕಳ ಮೇಲೆ ಅತ್ಯಾಚಾರ, ದೌರ್ಜನ್ಯ ಕಾಣುತ್ತಿದ್ದೇವೆ. ರಕ್ಷಕರೆ ಭಕ್ಷಕರಾಗುತ್ತಿರುವುದು ಸಮಾಜ ತಲೆ ತಗ್ಗಿಸುವ ವಿಚಾರವಾಗಿದೆ. ನಿರ್ಭಯಾ ಪ್ರಕರಣದ ನಂತರ ಮಕ್ಕಳ ರಕ್ಷಣೆ ನಿಟ್ಟಿನಲ್ಲಿ ಅನೇಕ ಕಾನೂನು ಕಾಯ್ದೆಗಳು ಬಂದಿವೆ. ಮಕ್ಕಳು ರಾಷ್ಟ್ರದ ಆಸ್ತಿಯಾಗಿದ್ದು, ಅವರ ಸಂರಕ್ಷಣೆ ಜವಾಬ್ದಾರಿ ಪ್ರತಿಯೊಬ್ಬ ನಾಗರಿಕನ ಮೇಲಿದೆ ಎಂದು ಪ್ರತಿಪಾದಿಸಿದರು.

ಹಳ್ಳಿಯಲ್ಲಿ ಕಣ್ಗಾವಲು ಸಮಿತಿ ಚುರುಕಾಗಿ ಕಾರ್ಯನಿರ್ವಹಿಸಲಿ:

ಇನ್ನು ಗ್ರಾಮ ಪಂಚಾಯತ್, ಹಳ್ಳಿ ಮಟ್ಟದಲ್ಲಿ ಮಹಿಳೆಯರ ಮತ್ತು ಮಕ್ಕಳ ಕಣ್ಗಾವಲು ಸಮಿತಿ ಕಾರ್ಯಾ ಚಟುವಟಿಕೆ ತೀವ್ರಗೊಳಿಸುವ ಅಗತ್ಯವಿದ್ದು, ಗ್ರಾಮ ಆಡಳಿತಾಧಿಕಾರಿಗಳು, ಕಂದಾಯ ನಿರೀಕ್ಷಕರಿಗೆ ಡಿ.ಸಿ. ಅವರು ಹೆಚ್ಚಿನ ಜವಾಬ್ದಾರಿ ನೀಡಬೇಕು ಎಂದು ನಾಗನಗೌಡ ಕೆ.ಒತ್ತಿಹೇಳಿದರು. ಮಕ್ಕಳೊಂದಿಗೆ

(2ನೇ ಪುಟ ನೋಡಿ)

## ಬಿಸಿಗಾಳಿ: ಮುಂಜಾಗ್ರತಾ ಕ್ರಮಕ್ಕೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ
ಬಾಗಲಕೋಟೆ,ಫೆ.28-ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ವರದಿ ಪ್ರಕಾರ ಜಿಲ್ಲೆಯಲ್ಲಿ ಬಿಸಿಗಾಳಿಯ ಪರಿಸ್ಥಿತಿ ಉಂಟಾಗುವ ಸಾಧ್ಯತೆಗಳಿವೆ. ಈ ಹಿನ್ನೆಲೆಯಲ್ಲಿ, ನಾಗರಿಕರು ಮಧ್ಯಾಹ್ನ 12 ರಿಂದ 3 ಗಂಟೆಯ ನಡುವೆ ಬಿಸಿಲಿನಲ್ಲಿ ಹೋಗುವುದನ್ನು ತಪ್ಪಿಸಬೇಕು. ಸಾಕಷ್ಟು ನೀರು ಕುಡಿಯುವದರ ಜೊತೆಗೆ ಹಗುರವಾದ ಹತ್ತಿಬಟ್ಟೆ ಧರಿಸುವುದು, ಟೋಪಿ, ಛತ್ರಿ, ಕನ್ನಡಕ ಬಳಸಿ ಮತ್ತು ಶ್ರಮದಾಯಕ ಚಟುವಟಿಕೆಗಳಿಂದ ದೂರವಿರುವಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷೆ ಜಾನಕಿ ಕೆ.ಎಂ ತಿಳಿಸಿದ್ದಾರೆ. ನಿಲ್ಲಿಸಿದ ವಾಹನದಲ್ಲಿ ಮಕ್ಕಳನ್ನು ಅಥವಾ ಸಾಕು ಪ್ರಾಣಿಗಳನ್ನು ಬಿಡಬೇಡಿ. ಮೂರ್ಛೆ ಅಥವಾ ಅನಾರೋಗ್ಯ ಕಾಣಿಸಿದರೆ ತಕ್ಷಣ ವೈದ್ಯರನ್ನು ಸಂಪರ್ಕಿಸಬೇಕು. ಓಆರ್.ಎಸ್, ಮನೆಯಲ್ಲಿ ತಂಪಾಗಿರಿಸಿದ ಲಸ್ಸಿ, ಮಜ್ಜಿಗೆ, ನಿಂಬೆ ನೀರು ಸೇರಿದಂತೆ ತಂಪು ಪಾನೀಯ ಹೆಚ್ಚಾಗಿ ಸೇವಿಸಬೇಕು. ಪ್ರಾಣಿಗಳಿಗೆ ನೆರಳು ಮತ್ತು ನೀರು ಒದಗಿಸಿ, ಅವುಗಳಿಗೆ ಸಾಕಷ್ಟು ನೀರು ಕುಡಿಯಲು ನೀಡಬೇಕು. ನಿಮ್ಮ ಮನೆಯನ್ನು ತಂಪಾಗಿ ಇರಿಸಿ, ಪರದೆಗಳು, ಶಟರ್‌ಗಳು ಅಥವಾ ಸನ್‌ಶೇಡ್‌ಗಳನ್ನು ಬಳಸಿ ಮತ್ತು ರಾತ್ರಿಯಲ್ಲಿ ಕಿಟಕಿಗಳನ್ನು ತೆರೆಯಬೇಕು.

ಬಿಸಿಗಾಳಿಯಿಂದ ಸಾರ್ವಜನಿಕರಿಗೆ ಯಾವುದೇ ತೊಂದರೆಗಳು ಕಂಡುಬಂದಲ್ಲಿ ತುರ್ತು ಸಹಾಯಕ್ಕಾಗಿ ಜಿಲ್ಲಾ ವಿಪತ್ತು ನಿರ್ವಹಣಾ ಕೇಂದ್ರದ ದೂರವಾಣಿ ಸಂಖ್ಯೆ 08354-236240ಗೆ ಸಂಪರ್ಕಿಸುವಂತೆ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಒಂದನೇ ಪುಟದಿಂದ

## ಹರಿಕಾರ ಡಾ.ಅಂಬೇಡ್ಕರ:ಸಚಿವ ಖಂಡ್ರೆ

ಕಾರ್ಯ ಮಾಡಿದ್ದಾರೆ, ಎಲ್ಲರೂ ಡಾ.ಅಂಬೇಡ್ಕರ ಆದರ್ಶಗಳನ್ನು ಅಳವಡಿಸಿಕೊಂಡು ಆರೋಗ್ಯ ಪೂರ್ಣ ಸಮಾಜ ನಿರ್ಮಾಣ ಮಾಡಲು ಮುಂದಾಗಬೇಕಿದೆ, ಪಾಟೀಲರವರ ಜನೋಪಕಾರಿ ಕಾರ್ಯಗಳು ಮುಂದುವರಿಯಲಿ,ಅವರ ಭವಿಷ್ಯ ಉತ್ತಮವಾಗಿ ಬೆಳೆಯಲಿ ಎಂದು ಶುಭ ಹಾರೈಸಿದರು.ಬೆಲ್ದಾಳ ಶರಣರು ಮಾತನಾಡಿ, ಡಾ.ಅಂಬೇಡ್ಕರ್ ರವರ ಮೂರ್ತಿಯನ್ನು ಪ್ರತಿಯೊಬ್ಬರು ಗೌರವಿಸಬೇಕು, ಪ್ರತಿಯೊಂದು ಹಕ್ಕನ್ನು ನೀಡಿದವರು ಬಾಬಾ ಸಾಹೇಬರು ಎಂಬುವುದನ್ನು ಅರ್ಥಮಾಡಿಕೊಳ್ಳಬೇಕು. ಒಂದು ಸಮುದಾಯಕ್ಕೆ ಮಾತ್ರ ಬಾಬಾ ಸಾಹೇಬ್ ರವರನ್ನು ಸೀಮಿತಗೊಳಿಸಬೇಡಿ ಎಂದರು. ಇಡಿ ದೇಶದ ಜನ ಪೂಜೆ ಮಾಡಬೇಕು ಎಂದು ಕರೆ ನೀಡಿದರು.ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಮಾಜಿ ಸಚಿವ ರಾಜಶೇಖರ ಪಾಟೀಲರು ಮಾತನಾಡಿ,ಕನಕಟ್ಟಾ ಗ್ರಾಮದ ಮೊಮ್ಮಗನಾಗಿ ಡಾ.ಬಾಬಾ ಸಾಹೇಬರ ಪುತ್ಥಳಿನೀಡಿರುವುದು ತಮಗೆ ಹೆಮ್ಮೆ ಅನಿಸುತ್ತಿದೆ. ಇಡೀ ದೇಶದ ಆಡಳಿತ ಡಾ,ಅಂಬೇಡ್ಕರು ಬರೆದ ಸಂವಿಧಾನದ ಮೇಲೆ ನಡೆಯುತ್ತಿದೆ. ಬಾಬಾ ಸಾಹೇಬರು ಬರೆದಿರುವ ಸಂವಿಧಾನದಿಂದಲೇ ಇಡಿ ದೇಶದ ಜನರು ವಿವಿಧ ಹುದ್ದೆಗಳಲ್ಲಿದ್ದಾರೆ. ಪ್ರತಿಯೊಬ್ಬರು ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಬೇಕು. ತಮ್ಮ ತಮ್ಮ ಮಕ್ಕಳಿಗೆ ವಿದ್ಯಾವಂತರಾಗಿ ಮಾಡಬೇಕು ಆಗ ಮಾತ್ರ ಡಾ.ಅಂಬೇಡ್ಕರರಿಗೆ ನಿಜವಾಗಿ ಗೌರವ ನೀಡಿದಂತಾಗುತ್ತದೆ. ಶಿಕ್ಷಣದಿಂದ ಮಾತ್ರ ಪರಿವರ್ತನೆ ಸಾಧ್ಯ ಎಂಬುದನ್ನು ಎಲ್ಲರೂ ಅರಿಯಬೇಕು, ಆಗ ಮಾತ್ರ ಬಾಳು ಬಂಗಾರವಾಗುತ್ತದೆ ಎಂದರು.ಕಲಬುರ್ಗಿಯ ಸಂಘಾನಂದಭಂತೆ , ಹಾಲಹಳ್ಳಿ ಭಂತೆ ದೇವನಪ್ರಿಯೆ, ಸಚಿವ ರಹಿಂ ಖಾನ್, ವಿಧಾನ ಪರಿಷತ್ ಸದಸ್ಯರಾದ ಭೀಮರಾವ ಪಾಟೀಲ, ಡಾ. ಚಂದ್ರಶೇಖರ ಪಾಟೀಲ, ಅಭಿಷೇಕ ಪಾಟೀಲ, ವೀರಣ್ಣ ಪಾಟೀಲ, ರೇವಣಸಿದ್ದಪ್ಪಾ ಪಾಟೀಲ, ಲಕ್ಷ್ಮಣ ರಾವ ಬುಳ್ಳಾ, ಮಾರುತಿರಾವ ಬೌದ್ದೆ, ಪ್ರಭು ತಾಳಮಡಗಿ,ಸುರೇಶ ಘಾಂಗ್ರೆ, ಬಾಬು ಟೈಗರ, ವೀರಪ್ಪ ಧುಮ್ಮನಸೂರ, ಅಫ್ಸರ್ ಮಿಯಾ ಹಾಗೂ ಇತರರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

## ಸಮಸ್ಯೆಯಾಗದಂತೆ ಕ್ರಮ ವಹಿಸಿ:ಸಚಿವ ಖಂಡ್ರೆ

ಕ್ಯಾನ್ಸರ್ ಪೀಡಿತ ರೋಗಿಗಳು ಜಿಲ್ಲೆಯ ಹೊರಗೆ ಕಿಮೋಥೆರೆಪಿ ಪಡೆಯುತ್ತಿರುವ ಬಗ್ಗೆ ಗಮನಕ್ಕೆ ಬಂದಿರುವ ಬಗ್ಗೆ ಸಚಿವರು ಪ್ರಸ್ತಾಪಿಸಿದರು. ಬ್ರಿಮ್ಸ್‌ನಲ್ಲಿ ಈಗಾಗಲೇ ಡೇಕೇರ್ ಕೀಮೋ ಕೇಂದ್ರ ಆರಂಭಗೊಂಡಿರುವ ಬಗ್ಗೆ ಹೆಚ್ಚಿನ ಪ್ರಚಾರ ನೀಡುವಂತೆ

ಡಾ.ನಿರಗುಡೆ ಅವರಿಗೆ ಸೂಚಿಸಿದರು. ಬ್ರಿಮ್ಸ್‌ನ ವಾರ್ಡನಲ್ಲಿ ಈವರೆಗೆ 96 ಜನ ಕೀಮೋ ಥೆರೆಪಿ ಪಡೆಯುತ್ತಿರುವ ಬಗ್ಗೆ ಸಚಿವರ ಗಮನಕ್ಕೆ ತರಲಾಯಿತು.ರಾಜ್ಯ ಹಾಗೂ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಅಪಘಾತಗಳು ಹೆಚ್ಚುತ್ತಿರುವ ಬಗ್ಗೆ ಕಳವಳ ವ್ಯಪ್ತಪಡಿಸಿದ ಸಚಿವರು ಈ ಕುರಿತು ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಹಾಗೂ ಪೊಲೀಸ್ ಇಲಾಖೆ ಮುಂಜಾಗ್ರತಾ ಕ್ರಮ ಕೈಗೊಳ್ಳುವಂತೆ ಸೂಚಿಸಿದರು. ಜಿಲ್ಲೆಯಲ್ಲಿ ವರ್ಷಕ್ಕೆ 300 ಅಪಘಾತಗಳು ಆಗುತ್ತಿರುವ ಬಗ್ಗೆ ಆರ್.ಟಿ.ಓ. ಸಚಿವರ ಗಮನಕ್ಕೆ ತಂದರು. ಕುಡಿದು ವಾಹನ ಚಲಾಯಿಸುವವರ ಎಷ್ಟು ಪರವಾನಿಗೆ ರದ್ದು ಮಾಡಿದ್ದಿರಿ ಎಂದು ಸಚಿವರು ಕೇಳಿದರು. ಜಿಲ್ಲೆಯ ಎಲ್ಲ ವಾಹನಗಳಿಗೆ ರೇಡಿಯಂ ಸೈಕಲ್ ಕಡ್ಡಾಯವಾಗಿ ಅಂಟಿಸುವಂತೆ ಸೂಚಿಸಿದರು. ಈಲ್ಲೆಯ ಎಲ್ಲ ಪ್ರಮುಖ ರಸ್ತೆಗಳಲ್ಲಿ, ವೃತ್ತಗಳಲ್ಲಿ ಉತ್ತಮ ಸಿಸಿ ಟಿವಿ ಅಳವಡಿಸುವಂತೆ ಪೊಲೀಸ್ ಅಧಿಕಾರಿಗಳಿಗೆ ಸೂಚಿಸಿದರು.ನೌಬಾದ್, ನಿಲಂಗಾ ರಸ್ತೆ ಹಾಗೂ ಬೀದರ್ ಹುಮನಾಬಾದ್ ರಾಷ್ಟ್ರೀಯ ಹೆದ್ದಾರಿಯಲ್ಲಿ ಹಲವೆಡೆ ತಗ್ಗುಗಳು ಹಾಗೂ ಉಬ್ಬುಗಳು ಕಂಡು ಬಂದಿದ್ದು ಅಪಘಾತ ಸಂಭವಿಸಬಹುದಾಗಿದೆ, ತಕ್ಷಣ ರಿಪೇರಿ ಮಾಡುವಂತೆ ರಾಷ್ಟ್ರೀಯ ಹೆದ್ದಾರಿ ಇಂಜಿನೀಯರಗೆ ಸಚಿವರು ಸೂಚಿಸಿದರು.ಜಿಲ್ಲೆಯಲ್ಲಿ ವಿವಿಧ ಇಲಾಖೆಗಳ ವ್ಯಾಪ್ತಿಗೊಳಪಡುವ ವಸತಿ ನಿಲಯಗಳು, ವಸತಿ ಶಾಲೆಗಳಿಗೆ ಕಟ್ಟಡ ಅಥವಾ ನಿವೇಶನ ಕೊರತೆ ಇರುವ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ವರದಿ ನೀಡಬೇಕು. ಹಿಂದುಳಿದ, ಅಲ್ಪಸಂಖ್ಯಾತರ, ಸಮಾಜ ಕಲ್ಯಾಣ ಪರಿಶಿಷ್ಟ ಪಂಗಡ ಅಭಿವೃದ್ಧಿ ಹಾಗೂ ಇತರೇ ಇಲಾಖೆಗಳು ಮುಂಬರುವ ಸಾಲಿನಲ್ಲಿ ಯಾವುದೇ ವಿದ್ಯಾರ್ಥಿಗೆ ಶಿಕ್ಷಣಕ್ಕೆ ಅನಾನುಕೂಲವಾಗದಂತೆ ವಸತಿ ನಿಲಯಕ್ಕೆ ಪ್ರಾವೇಶ ದೊರಕುವ ನಿಟ್ಟಿನಲ್ಲಿ ಜಿಲ್ಲೆಗೆ ಅಗತ್ಯವಿರುವ ವಸತಿ ನಿಲಯದ ನಿವೇಶನ ಹಾಗೂ ಕಟ್ಟಡಗಳ ವಿವರವನ್ನು ನೀಡಿದಲ್ಲಿ ಮುಂಬರುವ ಕ್ಯಾಬಿನೆಟ್‌ನಲ್ಲಿ ಚರ್ಚಿಸುವುದಾಗಿ ಸಚಿವರು ತಿಳಿಸಿದರು. ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಆಹಾರ ಕುರಿತು ದೂರುಗಳು ಕೇಳಿ ಬಂದಿದ್ದು ಅಧಿಕಾರಿಗಳು ಹಾಗೂ ವಾರ್ಡನ ತಕ್ಷಣ ಕ್ರಮ ಕೈಗೊಳ್ಳುವಂತೆ ಸಚಿವರು ತಿಳಿಸಿದರು. ಜಿಲ್ಲೆಯಲ್ಲಿ ಬಾಕಿಯಿರುವ ಎಲ್ಲ ಅಂಗನವಾಡಿ ಕಟ್ಟಡಗಳನ್ನು ನಿಗದಿತ ಕಾಲಮಿತಿಯಲ್ಲಿ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಯಿತು.

ಜಿಲ್ಲೆಯ ಎಸ್.ಎಸ್.ಎಲ್.ಸಿ. ಫಲಿತಾಂಶವನ್ನು ಹಾಗೂ ಸ್ಥಾನವನ್ನು ಹೆಚ್ಚಿಸಲು ಶಿಕ್ಷಣ ಇಲಾಖೆ ಅಧಿಕಾರಿಗಳು ಹೆಚ್ಚಿನ ಕ್ರಮ ವಹಿಸಬೇಕೆಂದು ಸೂಚಿಸಿದರು.ಹೊರ ಜಿಲ್ಲೆಯ ಮೀನುಗಾರರು ಸ್ಥಳೀಯ ಜಲಾಶಯಗಳಲ್ಲಿ ಮೀನುಗಾರಿಕೆ ನಡೆಸುತ್ತಿದ್ದು, ಈ ಬಗ್ಗೆ ಅಧಿಕಾರಿಗಳು ಕ್ರಮ ವಹಿಸುವಂತೆ ಹಾಗೂ ಸ್ಥಳೀಯ ಮೀನುಗಾರರ ಸಂಘ ನಿರ್ಮಿಸಿ ಸ್ಥಳೀಯರಿಗೆ ಅನುಕುಲವಾಗುವಂತೆ ಕ್ರಮ ವಹಿಸುವಂತೆ ಸಚಿವರು ಸೂಚಿಸಿದರು.

ಇದೇ ಸಂದರ್ಭದಲ್ಲಿ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸಲಾಯಿತು.ಈ ಸಭೆಯಲ್ಲಿ ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ್, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ಎಂ.ರೇವಣ್ಣ, ಯುವಜನ ಸೇವೆ ಇಲಾಖೆ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಿ.ರಂದೀಪ, ಬೀದರ ದಕ್ಷಿಣ ಶಾಸಕರಾದ ಡಾ.ಶೈಲೇಂದ್ರ ಬೆಲ್ದಾಳೆ, ಹುಮನಾಬಾದ ಶಾಸಕರಾದ ಡಾ.ಸಿದ್ಧಲಿಂಗ ಪಾಟೀಲ, ಬಸವಕಲ್ಯಾಣ ಶಾಸಕರಾದ ಶರಣು ಸಲಗರ, ವಿಧಾನ ಪರಿಷತ್ ಸದಸ್ಯರಾದ ಭೀಮರಾವ ಪಾಟೀಲ, ಡಾ.ಚಂದ್ರಶೇಖರ ಪಾಟೀಲ, ನಗರಸಭೆ ಅಧ್ಯಕ್ಷರಾದ ಎಂ.ಡಿ.ಗೌಸ್, ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ, ಜಿಲ್ಲಾ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಾದ ಎಂ.ಎಂ.ವಾನತಿ ಸೇರಿದಂತೆ ಜಿಲ್ಲಾ ಹಾಗೂ ತಾಲ್ಲೂಕ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಲೋಡ್ ಶೆಡ್ಡಿಂಗ್ ಇಲ್ಲ

ಪ್ರತಿನಿತ್ಯ 1000 ಮೆ.ವ್ಯಾ. ವಿದ್ಯುತ್ ಖರೀದಿಸಲಾಗುವುದು" ಎಂದು ಮಾಹಿತಿ ನೀಡಿದರು.

ಲಿಂಕ್‌ಲೈನ್ ಮೂಲಕ ಬೇಡಿಕೆ ಈಡೇರಿಸಲು ಕ್ರಮ

ರಾಜ್ಯದ ಕೆಲವು ಸಬ್ ಸ್ಟೇಷನ್ ಗಳ ವ್ಯಾಪ್ತಿಯಲ್ಲಿ ವಿದ್ಯುತ್ ಬೇಡಿಕೆ ಹೆಚ್ಚಾಗಿ ಓವರ್ ಲೋಡ್ ಆಗುತ್ತಿದೆ. ಇನ್ನು ಕೆಲವು ಉಪ ಕೇಂದ್ರಗಳ ವ್ಯಾಪ್ತಿಯಲ್ಲಿ ಬೇಡಿಕೆಗಿಂತ ಹೆಚ್ಚು ವಿದ್ಯುತ್ ಲಭ್ಯವಿದ್ದು, ಅಂಡರ್ ಲೋಡ್ ಆಗುತ್ತಿದೆ. ಈ ಸಮಸ್ಯೆ ತಪ್ಪಿಸಲು ಅಂಡರ್ ಲೋಡ್ ಇರುವ ಉಪಕೇಂದ್ರಗಳಿಂದ ಓವರ್ ಲೋಡ್ ಇರುವ ಉಪಕೇಂದ್ರಗಳಿಗೆ ವಿದ್ಯುತ್ ಒದಗಿಸಲು ಲಿಂಕ್ ಲೈನ್ ವ್ಯವಸ್ಥೆಗೆ ಆದ್ಯತೆ ನೀಡಲಾಗುತ್ತಿದೆ. ಈಗಾಗಲೇ ಕೆಲವು ಕಡೆ ಲಿಂಕ್ ಲೈನ್ ಕಲ್ಪಿಸುವ ಪ್ರಕ್ರಿಯೆ ಪೂರ್ಣಗೊಂಡಿದೆ ಎಂದು ಹೇಳಿದರು.

ರಾಜ್ಯದಲ್ಲಿ ಸಾಕಷ್ಟು ವಿದ್ಯುತ್ ಲಭ್ಯವಿದ್ದರೂ ಅದರ ಪ್ರಸರಣ ಮತ್ತು ವಿತರಣೆಯೇ ಸಮಸ್ಯೆಯಾಗಿದೆ. ಇದನ್ನು ತಪ್ಪಿಸಲು ಸಬ್ ಸ್ಟೇಷನ್ ಗಳ ಸಂಖ್ಯೆ ಹೆಚ್ಚಿಸಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ 100 ಹೊಸ ಸಬ್ ಸ್ಟೇಷನ್ ಗಳನ್ನು ಸ್ಥಾಪಿಸಲು ನಿರ್ಧರಿಸಲಾಗಿದೆ. ಮುಂದಿನ ಎರಡು ವರ್ಷದಲ್ಲಿ ಪ್ರಸರಣ ಮತ್ತು ವಿತರಣೆಯಲ್ಲಿ ಇರುವ ಸಮಸ್ಯೆಗಳನ್ನು ಬಹುತೇಕ ಬಗೆಹರಿಸಲು ಕ್ರಮ ವಹಿಸಲಾಗುತ್ತಿದೆ ಎಂದು ತಿಳಿಸಿದರು.

ಸಿಂಗಲ್ ಫೇಸ್ ನಲ್ಲಿ ಐಪಿ ಸೆಟ್ ಹಾಕಬೇಡಿ

ಗೃಹ ಬಳಕೆಗೆ ದಿನದ 24 ಗಂಟೆಯೂ ವಿದ್ಯುತ್ ಪೂರೈಸಬೇಕು ಎಂಬ ಉದ್ದೇಶದಿಂದ ಸಿಂಗಲ್ ಫೇಸ್ ವಿದ್ಯುತ್ ಒದಗಿಸಲು ರಾಜ್ಯ ಸರ್ಕಾರ ನಿರಂತರ ಜ್ಯೋತಿ ಯೋಜನೆ ಜಾರಿಗೆ ತಂದಿದೆ. ಅಲ್ಲದೆ, ತೋಟದ ಮನೆಗಳಲ್ಲಿ ವಾಸಿಸುವವರು ಅನುಕೂಲಕ್ಕಾಗಿ ರಾತ್ರಿ ವೇಳೆ ಸಿಂಗಲ್ ಫೇಸ್ ವಿದ್ಯುತ್ ಪೂರೈಸಲಾಗುತ್ತಿದೆ. ಆದರೆ, ಸಿಂಗಲ್ ಫೇಸ್ ವಿದ್ಯುತ್ ಪೂರೈಸುವ ಸಂದರ್ಭದಲ್ಲಿ ರೈತರು ಕನ್ವರ್ಟರ್‌ಗಳನ್ನು ಬಳಸಿ ಕೃಷಿ ಪಂಪ್‌ಸೆಟ್‌ಗಳನ್ನು ಬಳಸುತ್ತಿದ್ದಾರೆ. ಇದರಿಂದ ಟ್ರಿಪ್ ಆಗಿ ಇಡೀ ಪ್ರದೇಶದಲ್ಲೇ ವಿದ್ಯುತ್ ಪೂರೈಕೆ ಸ್ಥಗಿತಗೊಂಡು ಜನರು ತೊಂದರೆಗೊಳಗಾಗುತ್ತಾರೆ. ಆದ್ದರಿಂದ ಯಾವುದೇ ಕಾರಣಕ್ಕೂ ಸಿಂಗಲ್ ಫೇಸ್ ವಿದ್ಯುತ್ ಪೂರೈಕೆಗೆ ಕನ್ವರ್ಟರ್ ಅಳವಡಿಸಿ ಐಪಿ ಸೆಟ್ ಗಳನ್ನು ಬಳಸಬಾರದು ಎಂದು ಕೆ.ಜೆ.ಜಾರ್ಜ್ ಮನವಿ ಮಾಡಿದರು.

### ಬಾಲ್ಯ ವಿವಾಹ ತಡೆಯಲು ಸಾಧ್ಯ:ನಾಗಣಗೌಡ ಕೆ.

ಚೆಲ್ಲಾಟ ಆಯೋಗ ಸಹಿಸಲ್ಲ: ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸಂಬೆ ಮಾತನಾಡಿ, ಕಲ್ಯಾಣ ಕರ್ನಾಟಕ ಪ್ರದೇಶದ 6 ಲಕ್ಷ ಸೇರಿ ರಾಜ್ಯದಾದ್ಯಂತ 26 ಲಕ್ಷ ಶಾಲಾ ಮಕ್ಕಳ ಶಿಕ್ಷಣ ಇಲಾಖೆಯ ಸ್ಯಾಟ್ಸ್ ನಲಿಲ ಆಧಾರ್ ಮೌಲ್ಯಕರಣ ಇಲ್ಲದಿರುವುದಕ್ಕೆ ಅವರಿಗೆ ವಿದ್ಯಾರ್ಥಿ ವೇತನ ಪಾವತಿಯಾಗುತ್ತಿಲ್ಲ. ಕೂಡಲೆ ಇದನ್ನು ಸರಿಪಡಿಸಿ ಎಂದು ಶಿಕ್ಷಣ ಇಲಾಖೆಯ ಕಾರ್ಯದರ್ಶಿಗಳು ಡಿ.ಡಿ.ಪಿ.ಐ.ಗಳಿಗೆ ಕಳೆದ ಜನವರಿ 21 ರಂದು ಪತ್ರ ಬರೆದಿದ್ದಾರೆ. ಪತ್ರ ಬರೆದು ತಿಂಗಳಾದರು ಸಮಸ್ಯೆ ನೀಗಿಲ್ಲ. ಮೂಲಭೂತ ಹಕ್ಕಾದ ಶಿಕ್ಷಣ ಪಡೆಯಲು ಮಕ್ಕಳಿಗೆ ಇಷ್ಟೊಂದು ತೊಂದರೆ ಎಂದರೆ ಹೇಗೆ ಎಂದು ಪ್ರಶ್ನಿಸಿದರು.1929 ರಲ್ಲಿಯೇ ಬಾಲ್ಯ ವಿವಾಹ ನಿಷೇಧ ಕಾಯ್ದೆ ದೇಶದಲ್ಲಿ ಜಾರಿಯಲ್ಲಿದ್ದರೂ ಇಂದಿಗೂ ಬಾಲ್ಯ ವಿವಾಹ ಪ್ರಕರಣ ನಿಯಂತ್ರಣಕ್ಕೆ ಬರುತ್ತಿಲ್ಲ. ಪ್ರಕರಣ ಸಾರ್ವಜನಿಕವಾಗಿ ಬೆಳಕಿಗೆ ಬಂದ ನಂತರ ಆಯೋಗ ಹೇಳಿದ ಮೇಲೆ ಪ್ರಕರಣ ದಾಖಲಿಸುವುದಾದರೆ ಅಧಿಕಾರಿಗಳಿಗೆ ನೈತಿಕ ಜವಾಬ್ದಾರಿ ಇಲ್ವಾ ಎನ್ನುವ ಪ್ರಶ್ನೆ ಮೂಡುತ್ತದೆ. ಮಕ್ಕಳ ವಿಷಯದಲ್ಲಿ ಚೆಲ್ಲಾಟವನ್ನು ಆಯೋಗ ಸಹಿಸಲ್ಲ ಎಂದ ಎಚ್ಚರಿಕೆಯ ಮಾತುಗಳನ್ನಾಡಿದರು. ಮಕ್ಕಳಿಗೆ ಮನೆ ನಂತರ ಶಾಲೆ ಅತ್ಯಂತ ಸುರಕ್ಷಿತ ಸ್ಥಳ ಎಂದು ನಾವು ಭಾವಿಸಿದ್ದೇವೆ. ಅದರೆ ಶಿಕ್ಷಕರು, ಮುಖ್ಯ ಗುರುಗಳು, ವಾಹನ ಚಾಲಕರು, ಜವಾನ್ ಹೀಗೆ ಶಾಲಾ ಸಿಬ್ಬಂದಿಗಳಿಂದಲೆ ರಾಜ್ಯದಾದ್ಯಂತ 3,800 ಮಕ್ಕಳ ಮೇಲೆ ಅತ್ಯಾಚಾರ ಪ್ರಕರಣಗಳು ದಾಖಲಾಗಿವೆ. ರಕ್ಷಕರೇ ಭಕ್ಷಕರಾದರೆ ಮಕ್ಕಳು ಎಲ್ಲಿಗೆ ಹೋಗಬೇಕು. ನೊಂದವರಿಗೆ ನ್ಯಾಯ ಒದಗಿಸುವ ಕೆಲಸ ಜವಾಬ್ದಾರಿಯುತ ಅಧಿಕಾರಿಗಳು ಮಾಡಬೇಕಿದೆ. ಇಲ್ಲದೆ ಹೋದರೆ ಇದು ಆತ್ಮ ವಂಚನೆ ಮಾಡಿದಂತಾಗುತ್ತದೆ ಎಂದರು.ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಮಾತನಾಡಿ, ಸ್ವಾತಂತ್ರ್ಯ ಬಂದು ಅಮೃತ ಮಹೋತ್ಸವದ ಈ ಕಾಲದಲ್ಲಿಯೂ ಬಾಲ್ಯ ವಿವಾಹದಂತ ಸಾಮಾಜಿಕ ಪಿಡುಗು ಇನ್ನು ನಿರ್ಮೂಲನೆಯಾಗದಿರುವುದು ದುರ್ದೈವದ ಸಂಗತಿ. ಮಕ್ಕಳ ಹಕ್ಕುಗಳು ಕುರಿತು ಜನಸಮುದಾಯಕ್ಕೆ ಅರಿವು ಮೂಡಿಸುವ ಕೆಲಸ ಅಧಿಕಾರಿಗಳು ಮಾಡಬೇಕು ಎಂದರು.

ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ ಮಾತನಾಡಿ ಜಿಲ್ಲೆಯಲ್ಲಿ ಮಕ್ಕಳ ಡ್ರಾಪ್ ಔಟ್ ತಡೆಯಲು ಸರ್ವ ಪ್ರಯತ್ನ ನಡೆದಿದೆ. ಇಲ್ಲಿನ ಕಾರ್ಮಿಕರು ಉದ್ಯೋಗ ಅರಸಿ ಮುಂಬೈ, ಪುಣೆ, ಬೆಂಗಳೂರಿಗೆ ಮಕ್ಕಳನ್ನು ಕರೆದುಕೊಂಡು ಗುಳೆ ಹೋಗುತ್ತಿದ್ದು, ಇದು ನಮಗೆ ಸವಾಲಾಗಿ ಪರಿಣಮಿಸಿದೆ. ಶ್ರಾವಣ ಮಾಸದಲ್ಲಿ ಮಧ್ಯಾಹ್ನದ ಬಿಸಿಯೂಟಕ್ಕೂ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಬರಲ್ಲ. ಆರ್.ಬಿ.ಎಸ್.ಕೆ ಯೋಜನೆಯಡಿ ಪ್ರತಿಯೊಂದು ಶಾಲೆಗೆ ವೈದ್ಯ ತಂಡ ಭೇಟಿ ನೀಡಿ ಮಕ್ಕಳ ಆರೋಗ್ಯ ತಪಾಸಣೆ ನಿಯಮಿತವಾಗಿ ಮಾಡಲಾಗುತ್ತಿದ್ದು, ಹಳ್ಳಿ ಹಂತದಲ್ಲಿ ಕಣ್ಗಾವಲು ಸಮಿತಿ ರಚಿಸಲಾಗುವುದು ಎಂದರು.

ಆಯೋಗದ ಸದಸ್ಯೆ ಅಪರ್ಣಾ ಎಮ್.ಕೊಳ್ಳಾ ಪ್ರಸ್ತಾವಿಕವಾಗಿ ಮಾತನಾಡಿ, ಕಲ್ಯಾಣ ಕರ್ನಾಟಕ ಭಾಗದಲ್ಲಿ 62 ಸಾವಿರ ಮಕ್ಕಳು ಶಾಲೆಯಿಂದ ಹೊರಗುಳಿದ್ದಾರೆ ಎಂದು 7–8 ತಿಂಗಳ ಹಿಂದೆ ಸುದ್ದಿ ಮಾಧ್ಯಮದಲ್ಲಿ ವರದಿಯಾಗುತ್ತು. ಇತ್ತೀಚಿನ ಆರ್.ಡಿ.ಪಿ.ಆರ್. ಇಲಾಖೆ ಸರ್ವೆ ಪ್ರಕಾರ ಪ್ರತಿ ಜಿಲ್ಲೆಯಲ್ಲಿ 6–7 ಸಾವಿರ ಮಕ್ಕಳು ಶಾಲೆಯಿಂದ ವಿಮುಖರಾಗಿರುವ ಸಂಗತಿ ಹೊರಬಂತು. ಇನ್ನು ಶಿಕ್ಷಣ ಇಲಾಖೆಯ ಅಂಕಿ–ಸಂಖ್ಯೆ ಇದಕ್ಕು ವಿಭಿನ್ನ. ಸರ್ಕಾರದ ಇಲಾಖೆಗಳ ಅಧಿಕಾರಿಗಳ ಮಧ್ಯೆ ಸಮನ್ವಯತೆ ಇಲ್ಲದಿದ್ದರೆ ಮಕ್ಕಳ ರಕ್ಷಣೆ ಹೇಗೆ ಸಾಧ್ಯ ಎಂದು ಪ್ರಶ್ನಿಸಿದರು.ಪ್ರದೇಶದಲ್ಲಿ 10 ಬಾಲ್ಯ ವಿವಾಹದ ವರದಿಯಾದರೆ ಅದರಲ್ಲಿ 8 ಮಕ್ಕಳು ಸರ್ಕಾರಿ ಶಾಲೆಯಿಂದ ಡ್ರಾಪ್ ಔಟ್ ಆದ ಮಕ್ಕಳೆ ಸಿಗುತ್ತಾ–ರೆ. ಸರ್ಕಾರಿ ಶಾಲೆಯಲ್ಲಿ ಪ್ರವೇಶಾತಿ ಪಡೆದು ಅಲ್ಲಿ ಗೈರಾಗಿ ಕೋಚಿಂಗ್ ಸೆಂಟರ್ ಸೇರಿಕೊಳ್ಳುತ್ತಾರೆ. ಹಾಸ್ಟೆಲ್ ನಲ್ಲಿ ಮಕ್ಕಳ ಪ್ರವೇಶಾತಿಗೂ ಬಯೋ ಮೆಟ್ರಿಕ್ ಹಾಜರಾತಿಯಲ್ಲಿಯೂ ತುಂಬಾ ವ್ಯತ್ಯಾಸ ಕಂಡುಬರುತ್ತಿದೆ. ಹಾಗಾದರೆ ಮಕ್ಕಳು ಎಲ್ಲಿ ಹೋಗುತ್ತಾರೆ? ಏನು ಮಾಡುತ್ತಾರೆ? ಎಂಬುದನ್ನು ಪೋಷಕರಾದವರು ನಾವು ಅವಲೋಕನ ಮಾಡಬೇಕಿದೆ ಎಂದರು.ನಂತರ ನಡೆದ ಮಧ್ಯಾಹ್ನ ಅವಧಿಯ ಸೆಷನ್ಸ್‌ನಲ್ಲಿ ಬೆಂಗಳೂರು ಸಿ.ಐ.ಡಿ.ಯ ಎಸ್.ಜೆ.ಪಿ.ಯು ರೋಹಿತ್ ಸಿ.ಜಿ ಅವರು ಪೋಕ್ಸೋ ಕಾಯ್ದೆ, ಬಾಲ ನ್ಯಾಯ ಕಾಯ್ದೆ, ಮಕ್ಕಳ ಭಿಕ್ಷಾಟನೆ, ಅನಧಿಕೃತ ಕೋಚಿಂಗ್ ಸೆಂಟರ್ ಗಳ ಕುರಿತು ಉಪನ್ಯಾಸ ನೀಡಿದರು. ಕಲಬುರಗಿ ದಕ್ಷಿಣ ವಲಯದ ಸಿ.ಆರ್.ಸಿ ಪ್ರಕಾಶ ರಾಠೋಡ ಅವರು ಶಾಲೆಯಿಂದ ಹೊರಗುಳಿದ ಮಕ್ಕಳು ಮತ್ತು ಆರ್.ಟಿ.ಇ ಕಾಯ್ದೆ ವಿಷಯದ ಕುರಿತು ಮಾತನಾಡಿದರು. ಕಾರ್ಯಾಗಾರದಲ್ಲಿ ಆಯೋಗದ ಸದಸ್ಯ ಕಾರ್ಯದರ್ಶಿ ವಾಸಂತಿ ಉಪ್ಪಾರ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ವಿಶ್ವರಾಧ್ಯ ಕೆ. ಇಜೇರಿ, ಗುಲಬರ್ಗಾ ವಿ.ವಿ. ಕುಲಸಚಿವ ಪ್ರೊ. ರಮೇಶ ಲಂಡನಕರ್, ನಗರ ಪೊಲೀಸ್ ಉತ್ತರ ವಿಭಾಗದ ಎ.ಸಿ.ಪಿ ಚಂದ್ರಶೇಖರ, ರಾಯಚೂರು ಉಪನಿರ್ದೇಶಕ ನವೀನ್ ಯು. ಸೇರಿದಂತೆ ಕಲಬುರಗಿ ವಿಭಾಗದ ಬೀದರ, ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳ ಮಕ್ಕಳ ಸಂಬಂಧಿತ ಇಲಾಖೆ ಮತ್ತು ಸಂಸ್ಥೆಗಳ ಸುಮಾರು 300 ಜನ ಪ್ರತಿನಿಧಿಗಳು ಭಾಗವಹಿಸಿದ್ದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಜಕುಮಾರ ರಾಠೋಡ ಅವರು ಸ್ವಾಗತಿಸಿದರು.


**FORM IV**

**STATEMENT ABOUT OWNERSHIP AND OTHER PARTICULARS ABOUT NEWSPAPER MALLAMMANUDI REGIONAL KANNADA DAILY NEWSPAPER,BIDAR.**

1. Place of publication : BIDAR-(KARNATAKA)
2. Periodicity of its publication : DAILY
3. Printer's Name : Metropolitan Media company ltd
   Nationality : INDIAN

Address : Metropolitan Media company ltd Plot No.224,in Sy.No 41/2, 41/B & 42, Kapnoor 2nd stage, industrial Area,Kalburagi-585104

4. Publisher's Name : RAMESH REDDY
   Nationality : INDIAN
   Address : Sy.No. 466, TMC No.22-405,First Floor, Gada Complex Opp. Inspection Bungalow, Humnabad-585330
5. Editor's Name : RAMESH REDDY
   Nationality : INDIAN
   Address : Sy.No. 466, TMC No.22-405,First Floor, Gada Complex Opp. Inspection Bungalow, Humnabad-585330

Names and addresses of Individuals who own the Newspaper and partners or Shareholders holding More than one per cent of the total capital. -NA-

I RAMESH REDDY, hereby declare that the particulars given above are true to the best of my knowledge and belief.

Sd/-

Date :28/02/2025
Place : Bidar

RAMESH REDDY
Publisher


## ಪೋಕ್ಸೋ ಕೇಸು: ಮಾ. 15ರಂದು ವಿಚಾರಣೆ

ಅವರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ್ದ ಹೈಕೋರ್ಟ್ ಧಾರವಾಡ ಪೀಠ, ನಿರೀಕ್ಷಣಾ ಜಾಮೀನು ನೀಡಿತ್ತು. ಆದರೆ, ಪ್ರಕರಣ ರದ್ದು ಮಾಡಲು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಪೀಠ ನಿರಾಕರಿಸಿತ್ತು. ಹೀಗಾಗಿ ಯಡಿಯೂರಪ್ಪ ಬಂಧನದಿಂದ ಪಾರಾದರೂ ವಿಚಾರಣೆ ಎದುರಿಸಲೇಬೇಕಾಗಿದೆ. ಆದ್ದರಿಂದ ಇದೀಗ ಬೆಂಗಳೂರಿನ ನ್ಯಾಯಾಲಯ ವಿಚಾರಣೆಗೆ ದಿನ ನಿಗದಿಪಡಿಸಿದೆ.

ಏನಿದು ಪ್ರಕರಣ ಬಿ ಎಸ್ ಯಡಿಯೂರಪ್ಪ ಅವರ ಬಳಿ ಸಹಾಯ ಕೋರಿ ತಾಯಿ ಮತ್ತು ಅವರ ಅಪ್ರಾಪ್ತ ವಯಸ್ಸಿನ ಮಗಳು ಬೆಂಗಳೂರಿನ ಡಾಲರ್ಸ್ ಕಾಲೊನಿಯಲ್ಲಿರುವ ಅವರ ನಿವಾಸಕ್ಕೆ ಬಂದಿದ್ದಾದ ಬಾಲಕಿಯನ್ನು ಕೋಣೆಗೆ ಕರೆದೊಯ್ದು ಲೈಂಗಿಕ ದೌರ್ಜನ್ಯ ನಡೆಸಿದ್ದರು ಎಂಬ ಆರೋಪ ಕೇಳಿಬಂದಿತ್ತು. ಈ ಸಂಬಂಧ ಬಾಲಕಿಯ ತಾಯಿ ಸದಾಶಿವನಗರ ಠಾಣೆಗೆ ದೂರು ನೀಡಿದ್ದರು. ಬಳಿಕ ಯಡಿಯೂರಪ್ಪ ವಿರುದ್ಧ ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣೆ (ಕಔಅಖಔ) ಕಾಯ್ದೆಯಡಿ ಬೆಂಗಳೂರಿನ ಸದಾಶಿವನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿತ್ತು.

## ಹೈ ಅಲರ್ಟ್ ಆದ ಜಿಲ್ಲಾಡಳಿತ

ಪಕ್ಕದ ಆಂಧ್ರಪ್ರದೇಶ ತೆಲಂಗಾಣದಲ್ಲಿ ಕಾಣಿಸಿಕೊಂಡ ಹಕ್ಕಿ ಜ್ವರ ಜಿಲ್ಲೆಗೂ ಹರಡಿರುವ ಶಂಕೆ ವ್ಯಕ್ತವಾಗಿದ್ದು, ಜನರಲ್ಲಿ ಆತಂಕ ಹೆಚ್ಚಾಗಿದೆ.

ಮಾನ್ವಿ ತಾಲೂಕಿನಲ್ಲಿ ಪಕ್ಷಿಗಳು ನಿಗೂಢವಾಗಿ ಸಾವನ್ನಪ್ಪುತ್ತಿರುವ ಹಿನ್ನೆಲೆಯಲ್ಲಿ ಜಿಲ್ಲಾಡಳಿತ, ಪಶುಸಂಗೋಪನೆ ಇಲಾಖೆ ಎಚ್ಚೆತ್ತುಕೊಂಡಿವೆ. ತೆಲಂಗಾಣ, ಆಂಧ್ರಪ್ರದೇಶ ಗಡಿಭಾಗದಲ್ಲಿ ಹೈಅಲರ್ಟ್ ಆಗಿದೆ. ರ್‍ಯಾಪಿಡ್ ರೆಸ್ಪಾನ್ಸ್ ಟೀಂ ರಚನೆ ಮಾಡಲಾಗಿದೆ. ತೆಲಂಗಾಣ ಹಾಗೂ ಆಂಧ್ರಪ್ರದೇಶ ಗಡಿಯಿಂದ ಕೋಳಿ, ಕೋಳಿ ಉತ್ಪನ್ನ ಬರದಂತೆ ತಡೆಯಲು ಚೆಕ್ ಪೋಸ್ಟ್ನಲ್ಲಿ ಪರಿಶೀಲನೆ ಮಾಡಲಾಗುತ್ತಿದೆ.

# ಕಲ್ಲು ಗಣಿಗಾರಿಕೆ ನಿಲ್ಲಿಸಲು ಶಾಸಕ ಪ್ರಭು ಚವ್ಹಾಣ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಫೆ.28:ತಾಲೂಕಿನ ಚಿಮ್ಮೇಗಾಂವಗ್ರಾಮಪಂಚಾಯತ್ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಕಲ್ಲುಗಣಿಗಾರಿಕೆಯಿಂದ ರೈತರು ಮತ್ತು ಸಾರ್ವಜನಿಕರು ಸಾಕಷ್ಟು ತೊಂದರೆ ಅನುಭವಿಸುತ್ತಿರುವ ಬಗ್ಗೆ ದೂರುಗಳು ಬರುತ್ತಿದ್ದು, ಕೂಡಲೇ ಗಣಿಗಾರಿಕೆಯನ್ನು ನಿಲ್ಲಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಆಗ್ರಹಿಸಿದ್ದಾರೆ.



ಗಣಿ ಮತ್ತು ಭೂವಿಜ್ಞಾನಗಳ ಇಲಾಖೆಯ ಹಿರಿಯ ಭೂವಿಜ್ಞಾನಿಗಳಿಗೆ ಪತ್ರ ಬರೆದಿರುವ ಶಾಸಕರು, ಮೇಘನಾ ಕನ್ಸಟ್ರಕ್ಷನ್ಸ್ ಎಂಬ ಸಂಸ್ಥೆಯವರು ಕಲ್ಲುಗಣಿಗಾರಿ–ಕೆ ನಡೆಸುತ್ತಿದ್ದು, ಇಲ್ಲಿಂದ ಹೊರಬರುತ್ತಿರುವ ವಿಪರೀತ ಧೂಳಿನಿಂದಾಗಿ ಸುತ್ತನಲ್ಲಿ ಕೃಷಿ ಮಾಡಿಕೊಂಡು ಬದುಕುತ್ತಿರುವ ರೈತರಿಗೆ ಮಾರಕವಾಗಿ ಪರಿಣಮಿಸಿದೆ. ದೊಡ್ಡ ಪ್ರಮಾಣದ ಯಂತ್ರಗಳನ್ನು ಬಳಸುತ್ತಿರುವುದರಿಂದ ಬೆಳೆಗಳು ಧೂಳಿನಿಂದ ಆವರಿಸಿ ಬೆಳೆನಷ್ಟವಾಗುತ್ತಿದೆ. ಗಣಿಗಾರಿಕೆ ಆರಂಭವಾದಾಗಿನಿಂದ ಆದಾಯ ಸಿಗದೇ ನಮಗೆ ಅನ್ಯಾಯವಾಗುತ್ತಿದೆ ಎಂದು ಬಹಳಷ್ಟು ರೈತರು ನನ್ನ ಬಳಿಗೆ ಬಂದು ಸಮಸ್ಯೆ ತೊಡಿಕೊಳ್ಳುತ್ತಿದ್ದಾರೆ ಎಂದಿದ್ದಾರೆ.

ಹತ್ತಿರದಲ್ಲೇ ಔರಾದ–ಉದಗೀರ ಹೆದ್ದಾರಿಯಿದೆ. ಈ ಮಾರ್ಗದಲ್ಲಿ ಸಾಕಷ್ಟು ವಾಹನಗಳು ಓಡಾಡುತ್ತವೆ. ಗಣಿಯಿಂದ ಹೊರಬರುವ ಧೂಳು ರಸ್ತೆಯ ಮೇಲೆ ಆವರಿಸುವುದರಿಂದ ವಾಹನ ಸವಾರರ ಕಣ್ಣುಗಳಲ್ಲಿ ಧೂಳು ಬಿದ್ದು, ಸಂಚರಿಸಲು ಪರದಾಡುವ ಪರಿಸ್ಥಿತಿಯಿದೆ. ಈ ರಸ್ತೆಯ ಮೂಲಕ ಬಹಳಷ್ಟು ವಿದ್ಯಾರ್ಥಿಗಳು ಶಾಲಾ–ಕಾಲೇಜುಗಳಿಗೆ ಹೋಗುವುದರಿಂದ ಮಕ್ಕಳಿಗೂ ಕೂಡ ಸಮಸ್ಯೆಯಾಗುತ್ತಿದೆ ಎಂದು ಸ್ಥಳೀಯರು ನೋವುಗಳನ್ನು ಹಂಚಿಕೊಳ್ಳುತ್ತಿದ್ದಾರೆ. ಈ ಕುರಿತು ಗ್ರಾಮ ಪಂಚಾಯಿತಿಯಲ್ಲಿ ಠರಾವು ಪಾಸ್ ಮಾಡಲಾಗಿದೆ. ಸಾಕಷ್ಟು ಬಾರಿ ನೋಟಿಸ್ ಕೊಡಲಾಗಿದೆ. ಆದರೂ ಯಾವುದೇ ಪ್ರಯೋಜನವಾಗಿಲ್ಲವೆಂದು ಜನತೆ ಹೇಳುತ್ತಿದ್ದಾರೆ.

ಸಾರ್ವಜನಿಕರ ಹಿತದೃಷ್ಟಿಯಿಂದ ಚಿಮ್ಮೇಗಾಂವ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಕಲ್ಲು ಗಣಿಗಾರಿಕೆಯನ್ನು ತುರ್ತಾಗಿ ನಿಲ್ಲಿಸಿ, ರೈತರು ಮತ್ತು ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ಶಾಸಕರು ತಿಳಿಸಿದ್ದಾರೆ.

## ಇಂದಿನಿಂದ ದ್ವಿತೀಯ ಪಿಯುಸಿ ಪರೀಕ್ಷೆ: ಬಾಗಲಕೋಟೆ ಜಿಲ್ಲೆಯಲ್ಲಿ 26427 ಪರೀಕ್ಷಾರ್ಥಿಗಳು

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.28–ಜಿಲ್ಲೆಯಲ್ಲಿ ಮಾರ್ಚ 1 ರಿಂದ 20 ವರೆಗೆ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ ನಡೆಯಲಿದ್ದು, ಪರೀಕ್ಷೆ ಸೂಸುತ್ರವಾಗಿ ನಡೆಸಲು ಎಲ್ಲ ರೀತಿಯ ಕ್ರಮಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ತಿಳಿಸಿದ್ದಾರೆ.

ಜಿಲ್ಲೆಯ 162 ಕಾಲೇಜುಗಳ ವಿದ್ಯಾರ್ಥಿಗಳಿಗೆ ಬಾಗಲಕೋಟೆ 9, ಗುಳೇದಗುಡ್ಡ 1, ಬಾದಾಮಿ 3, ಹುನಗುಂದ 4, ಇಲಕಲ್ಲ 3, ಬೀಳಗಿ 4, ಮುಧೋಳ 5, ಜಮಖಂಡಿ 6 ಹಾಗೂ ರಬಕವಿ ಬನಹಟ್ಟಿ 6 ಸೇರಿದಂತೆ ಒಟ್ಟು 41 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಜಿಲ್ಲೆಯಲ್ಲಿ ಒಟ್ಟು 26427 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಇದರಲ್ಲಿ 24573 ಹೊಸ, 678 ಬಾಹ್ಯ ಮತ್ತು 1176 ಪುನರಾವರ್ತಿತ ಅಭ್ಯರ್ಥಿಗಳು ಇದ್ದಾರೆ ಎಂದು ತಿಳಿಸಿದ್ದಾರೆ.

ಪರೀಕ್ಷಾ ಕೇಂದ್ರಕ್ಕೆ 43 ಮುಖ್ಯ ಅಧೀಕ್ಷಕರು, 41 ಉಪ ಮುಖ್ಯ ಅಧೀಕ್ಷಕರು, 86 ಸ್ಥಾನಿಕ ಜಾಗೃತ ದಳದ ಸದಸ್ಯರು, 24 ಮಾರ್ಗಾಧಿಕಾರಿಗಳು ಹಾಗೂ 1091 ಕೊಠಡಿ ಮೇಲ್ವಿಚಾರಕರನ್ನು ನೇಮಕ ಮಾಡಲಾಗಿದೆ. ಪ್ರತಿಯೊಂದು ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು, ಸಹ ಮುಖ್ಯ ಅಧೀಕ್ಷಕರು ಹಾಗೂ ಇತರೆ ಸಿಬ್ಬಂದಿ ವರ್ಗದವರು ತಮ್ಮ ಕರ್ತವ್ಯವನ್ನು ಜವಾಬ್ದಾರಿಯಿಂದ ಮಾಡುವುದರ ಜೊತೆಗೆ ಯಾವುದೇ ದುರಾಚರಣೆ ನಡೆಯದಂತೆ ಜಾಗೃತಿ ವಹಿಸಲು ಸೂಚನೆ ನೀಡಲಾಗಿದೆ ಎಂದು ಡಿಸಿ ತಿಳಿಸಿದ್ದಾರೆ.

ಪರೀಕ್ಷಾ ಕೇಂದ್ರದಲ್ಲಿನ ಮುಖ್ಯ ಅಧೀಕ್ಷಕರನ್ನು ಹೊರತುಪಡಿಸಿ ಇತರೆ ಅಧಿಕಾರಿಗಳು, ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಪರೀಕ್ಷಾ ಕೇಂದ್ರಕ್ಕೆ ಮೊಬೈಲ್ ಫೋನ್, ಇ–ಕ್ಯಾಮರಾ, ಲ್ಯಾಪಟಾಪ್ ತರುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ. ಪರೀಕ್ಷಾ ಕೇಂದ್ರಗಳಲ್ಲಿ ಅಕ್ರಮ ಚಟುವಟಿಕೆಗಳು ನಡೆಯದಂತೆ ಹೆಚ್ಚಿನ ಜವಾಬ್ದಾರಿ ವಹಿಸಿಕೊಂಡು ಯಾವುದೇ ರೀತಿಯ ಅಹಿತಕರ ಘಟನೆಗಳು ಪರೀಕ್ಷೆಯಲ್ಲಿ ಸಂಭವಿಸದಂತೆ ಮುಂಜಾಗ್ರತಾ ಕ್ರಮಕೈಗೊಳ್ಳಲು ಸೂಚನೆ ನೀಡಲಾಗಿದೆ.

ಪರೀಕ್ಷಾ ವಿಷಯದ ಉಪನ್ಯಾಸಕರು ಪರೀಕ್ಷಾ ದಿನದಂದು ಪರೀಕ್ಷಾ ಕೇಂದ್ರದಲ್ಲಿ ಇರದಂತೆ ಕ್ರಮಕೈಗೊಳ್ಳಲಾಗಿದೆ. ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಆದೇಶಿಸಲಾಗಿದೆ. ಅಲ್ಲದೇ ಪರೀಕ್ಷಾ ಅವಧಿಯಲ್ಲಿ ಪರೀಕ್ಷಾ ಕೇಂದ್ರದ ಸುತ್ತ ಮುತ್ತಲಿನ ಝರಾಕ್ಸ ಅಂಗಡಿಗಳನ್ನು ಮುಚ್ಚತಕ್ಕದ್ದು ಎಂದು ಆದೇಶದಲ್ಲಿ ತಿಳಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

**ಪರೀಕ್ಷಾ ವೇಳಾಪಟ್ಟಿ**

ಪರೀಕ್ಷೆಗಳು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆವರೆಗೆ ನಡೆಯಲಿವೆ. ಮಾರ್ಚ 1 ರಂದು ಕನ್ನಡ, 3 ರಂದು ಗಣಿತ, ಶಿಕ್ಷಣ ಶಾಸ್ತ್ರ, ತರ್ಕಶಾಸ್ತ್ರ, ವ್ಯವಹಾರ ಅಧ್ಯಯನ, 5 ರಂದು ರಾಜ್ಯಶಾಸ್ತ್ರ, ಸಂಖ್ಯಾಶಾಸ್ತ್ರ, 7 ರಂದು ಇತಿಹಾಸ, ಭೌತಶಾಸ್ತ್ರ, 10 ರಂದು ಐಚ್ಛಿಕ ಕನ್ನಡ, ಲೆಕ್ಕಶಾಸ್ತ್ರ, 12 ರಂದು ರಸಾಯನಶಾಸ್ತ್ರ, 13 ರಂದು ಅರ್ಥಶಾಸ್ತ್ರ, 15 ರಂದು ಇಂಗ್ಲೀಷ, 17 ರಂದು ಭೂಗೋಳಶಾಸ್ತ್ರ, 18 ರಂದು ಜೀವಶಾಸ್ತ್ರ, ಸಮಾಜಶಾಸ್ತ್ರ, ಗಣಕ ವಿಜ್ಞಾನ, 20 ರಂದು ಹಿಂದಿ ವಿಷಯ ಪರೀಕ್ಷೆಗಳು ನಡೆಯಲಿವೆ.



ಬಸವಕಲ್ಯಾಣ :- ಇಲ್ಲಿನ ಶರಣ ಉರಿಲಿಂಗ ಪೆದ್ದಿ ಶಾಖಾ ಮಠ ತ್ರಿಪೂರಾಂತದಲ್ಲಿ ಮಹಾಶಿವರಾತ್ರಿ ಹಬ್ಬದ ನಿಮಿತ್ತವಾಗಿ ಸಾಮೂಹಿಕ ಇಷ್ಟಲಿಂಗ ಪೂಜೆಯನ್ನು ಉರಿಲಿಂಗ ಪೆದ್ದಿ ಮಠದ ಪೀಠಾಧಿಪತಿಗಳ ಪೂಜ್ಯ ಶ್ರೀ ಪಂಚಾಕ್ಷರಿ ಸ್ವಾಮೀಜಿಗಳ ದಿವ್ಯ ನೇತೃತ್ವದಲ್ಲಿ ಶ್ರೀ ಮಹಾಲಿಂಗ ದೇವರು ಸಾಮೂಹಿಕ ಇಷ್ಟಲಿಂಗ ಇಷ್ಟಲಿಂಗ ಪೂಜೆ ನಡೆಯಿತು. ಈ ಸಂದರ್ಭದಲ್ಲಿ ಅನೇಕ ಭಕ್ತರು ಪಾಲ್ಗೊಂಡಿದ್ದರು.

## ವೈಜ್ಞಾನಿಕ ಮನೋಭಾವ ಬೆಳೆಸಿಕೊಳ್ಳಿ : ಡಿ.ಎಚ್ ನಾಯಕ್




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಇಂದಿನ ದಿನಗಳಲ್ಲಿ ವಿಜ್ಞಾನಸಾಕಷ್ಟುಪ್ರಗತಿಸಾಧಿಸಿದ್ದು, ಪ್ರತಿಯೊಬ್ಬರು ವೈಜ್ಞಾನಿಕವಾಗಿ ಚಿಂತಿಸುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಕೊಪ್ಪಳದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ.ಡಿ.ಎಚ್.ನಾಯಕ್ ಕರೆ ನೀಡಿದರು.

ಕಾಲೇಜಿನ ಸಭಾಂಗಣದಲ್ಲಿ ಶುಕ್ರವಾರ ರಾಷ್ಟ್ರೀಯಬ ವಿಜ್ಞಾನ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಭೌತ ವಿಜ್ಞಾನಿ ಸರ್ ಸಿ ವಿ ರಾಮನ್ ಇವರು ರಾಮನ್ ಎಫೆಕ್ಟ್ ಎಂಬ ಪ್ರಬಂಧವನ್ನು ಮಂಡಿಸಿದ ಈ ಸವಿ ನೆನಪಿಗಾಗಿ ರಾಷ್ಟ್ರೀಯ ವಿಜ್ಞಾನ ದಿನಾಚರಣೆಯನ್ನು ಆಚರಿಸಲಾಗುವುದು ಎಂದು ವಿವರಿಸಿದರು.

ಸಮಾರಂಭದಲ್ಲಿ ಕಾಲೇಜಿನ ವಿದ್ಯಾರ್ಥಿ ಹಾಗೂ ಸಿಬ್ಬಂದಿಗೆ ಪ್ರತಿಜ್ಞಾವಿಧಿ ಬೋಧಿಸಿದರು. ರಸಾಯನ ಶಾಸ್ತ್ರ ವಿಭಾಗದ ಹಿರಿಯ ಪ್ರಾಧ್ಯಾಪಕ ವೈ.ಬಿ. ಅಂಗಡಿ, ಭೌತಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕ ಸಿದ್ದಲಿಂಗೇಶ್ , ದೈಹಿಕ ನಿರ್ದೇಶಕ ಮಂಜುನಾಥ್ ಅರೆಂಟನೂರ್, ಕನ್ನಡ ವಿಭಾಗದ ಡಾ. ಭಾಗ್ಯಜ್ಯೋತಿ, ಅರ್ಥಶಾಸ್ತ್ರ ವಿಭಾಗದ ಸಂತೋಷಕುಮಾರಿ, ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರು ಹಾಗೂ ಆಂತರಿಕ ಗುಣಮಟ್ಟ ಮತ್ತು ಭರವಸೆ ಕೋಶದ ಸಂಯೋಜಕರಾದ ಡಾ.ಟಿ.ವಿ.ವಾರುಣಿ ಸೇರಿದಂತೆ ಕಾಲೇಜಿನ ವಿದ್ಯಾರ್ಥಿಗಳು, ಬೋಧಕ-ಬೋಧಕೇತರ ಸಿಬ್ಬಂದಿ ಇದ್ದರು.

## ಬಸವಕಲ್ಯಾಣದಲ್ಲಿ ರಂಭಾಪುರಿ ಜಗದ್ಗುರುಗಳ ದಸರಾ ದರ್ಬಾರ್ ಸ್ವಾಗತ ಸಮಿತಿ ಅಧ್ಯಕ್ಷರಾಗಿ ಸಚಿವರಾದ ಈಶ್ವರ. ಬಿ. ಖಂಡ್ರೆ ಆಯ್ಕೆ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ : – 2025 ರ ಸಪ್ಟೆಂಬರ್ 22 ರಿಂದ ಅಕ್ಟೋಬರ್ 2ರವರೆಗೆ ನಗರದಲ್ಲಿ ಜರುಗಲಿರುವ ಶ್ರೀಮದ್ ರಂಭಾಪುರಿ ಜಗದ್ಗುರುಗಳ ದಸರಾ ದರ್ಬಾರ್ ಕಾರ್ಯಕ್ರಮದ ನಿಮಿತ್ಯ ಭಾಲ್ಕಿ ಪಟ್ಟಣದ ಈಶ್ವರ ಭೀಮಣ್ಣ ಖಂಡ್ರೆ ಅವರ ನಿವಾಸದಲ್ಲಿ ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರ ಪಾವನ ಸಾನಿಧ್ಯದಲ್ಲಿ ಪೂರ್ವಭಾವಿ ಸಭೆ ಜರುಗಿತು.

ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ. ಖಂಡ್ರೆ ಅವರನ್ನು ಸ್ವಾಗತ ಸುಮಿತಿಯ ಅಧ್ಯಕ್ಷರನ್ನಾಗಿ ಸರ್ವಾನುಮತದಿಂದ ಆಯ್ಕೆವಾಡಲಾಯಿತು. ಈ ಕುರಿತು ಮಾತನಾಡಿ ಪ್ರತಿವರ್ಷದಂತೆ ಲೋಕ ಕಲ್ಯಾಣಕ್ಕಾಗಿ ಶ್ರೀಮದ್ ರಂಭಾಪುರಿ ಜಗದ್ಗುರುಗಳ ದಸರಾ ದರ್ಬಾರ್ ಸಮಾರಂಭ ನಮ್ಮ ಜಿಲ್ಲೆಯಲ್ಲಿಯೇ ಮೊದಲ ಸಲ ಬಸವಕಲ್ಯಾಣದಲ್ಲಿ ಜರುಗುತ್ತಿರುವುದು ಇತಿಹಾಸಕ್ಕೆ ಸಾಕ್ಷಿಯಾಗಲಿದೆ. ಹೀಗಾಗಿ ಶ್ರೀ ಜಗದ್ಗುರು ಮಹಾಸನ್ನಿಧಿಯವರ ಹಾಗೂ ಪೂಜ್ಯರ ಸಲಹೆಯಂತೆ ಅದ್ದೂರಿ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ಎಲ್ಲ ರೀತಿಯ ಸಹಾಯ – ಸಹಕಾರ ನೀಡುವುದಾಗಿ ನುಡಿದರು.

ಸಂಸ್ಥಾನ ಗವಿಮಠದ ತಿಪುರಾಂತಿನ ಪೂಜ್ಯ ಶ್ರೀ ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ನೇತೃತ್ವವಹಿಸಿದ್ದರು. ಶಾಸಕರಾದ ಶರಣುಸಲಗರ ಮಾತನಾಡಿದರು.

ಸಂಸದರಾದ ಸಾಗರ ಖಂಡ್ರೆ, ಬಸವೇಶ್ವರ ದೇವಸ್ಥಾನ ವಿಶ್ವಸ್ಥ ಸಮಿತಿ ಅಧ್ಯಕ್ಷ ಶಶಿಕಾಂತ ದುರ್ಗೆ, ಸದ್ಬೋದನಾ ಸಂಸ್ಥೆ ತಾಲೂಕ ಘಟಕದ ಅಧ್ಯಕ್ಷರಾದ ಬಸವರಾಜ ಸ್ವಾಮಿ. ತ್ರಿಪೂರಾಂತ, ಸಂಸ್ಥೆ ಮಹಿಳಾ ಘಟಕದ ಅಧ್ಯಕ್ಷೆ ಕಲ್ಪನಾ ಶೀಲವಂತ, ಕಸಾಪ ಅಧ್ಯಕ್ಷ ಶಾಂತಲಿಂಗ ಮಠಪತಿ, ಪ್ರಮುರಾದ ರಾಜಕುಮಾರ ಬಿರಾದಾರ ಸಿರಗಾಪೂರ, ಮೇಘರಾಜ ನಾಗರಾಳೆ ಹಾರಕೂಡ, ಚಂದ್ರಶೇಖರ ಬಿರಾದಾರ, ಸುನೀಲ ಪಾಟೀಲ, ಸೋಮಶೇಖರ ವಸ್ತ್ರದ, ಎ. ಜಿ. ಪಾಟೀಲ, ಪ್ರಭು ಪಾಟೀಲ, ಮಲ್ಲಿಕಾರ್ಜುನ ನಂದಿ, ರಾಮಚಂದ್ರ ಹುಡುಗೆ, ಇಂದ್ರಸೇನ ಬಿರಾದಾರ, ರಮೇಶ ರಾಜೋಳೆ, ವೀರಣ್ಣ ಶೀಲವಂತ, ಪ್ರೊ. ದಯಾನಂದ ಶೀಲವಂತ, ಪ್ರೊ. ಸೂರ್ಯಕಾಂತ ಶೀಲವಂತ, ಪ್ರೊ. ರುದ್ರೇಶ್ವರ ಗೋರ್ಟಾ, ಡಾ. ರಾಚಯ್ಯ ಮಠಪತಿ, ಪ್ರೊ. ಬಸವರಾಜ ಸೇರಿ, ದಿಲೀಪಕುಮಾರ ಸ್ವಾಮಿ, ಸಿದ್ರಾಮ ಕವಳೆ, ಶರಣು ಪವಾಡಶೆಟ್ಟಿ, ಮುಂತಾದವರು ಸಭೆಯಲ್ಲಿ ಭಾಗವಹಿಸಿದ್ದರು.


### ಇಟಗಾ: ಅದ್ದೂರಿಯಾಗಿ ಜರುಗಿದ ಶ್ರೀ ಗುರು ಭದ್ರೇಶ್ವರನ ರಥೋತ್ಸವ

## ಧರ್ಮಸಭೆಗಳಿಂದ ಮನಕುಲದ ಏಳಿಗೆ ಸಾಧ್ಯ ಶಿವಸಿದ್ದ ಸೋಮೇಶ್ವರ ಶಿವಾಚಾರ್ಯ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ನಮ್ಮ ಸಂಸ್ಕೃತಿ, ಆಚಾರ, ವಿಚಾರಗಳನ್ನು ಬೋಧಿಸುವಂತಹ ಧರ್ಮ ಸಭೆಗಳು ಹೆಚ್ಚು ನಡೆಯುವುದರಿಂದ ಮನುಕುಲ ಏಳಿಗೆ ಸಾಧ್ಯ ಎಂದು ಶ್ರೀಶ್ರೀಶ್ರೀಷ.ಬ್ರ.ಮಹರ್ಷಿ ಧರ್ಮಶ್ರೀ ತಪೋರತ್ನ ಶಿವಸಿದ್ದ ಸೋಮೇಶ್ವರ ಶಿವಾಚಾರ್ಯರು ಹೇಳಿದರು. ತಾಲೂಕಿನ ಇಟಗಾ ಗ್ರಾಮದ ಶಿವಸಿದ್ಧ ಯೋಗಾಶ್ರಮ ಶಾಖಾ ಮುಕ್ತಿ ಮಠ ಸುಕ್ಷೇತ್ರ ಇಟಗಾ ಗ್ರಾಮದಲ್ಲಿ ಶ್ರೀ ಗುರು ಭದ್ರೇಶ್ವರ 48ನೇ ಜಾತ್ರಾ ಮಹೋತ್ಸವ ಹಾಗೂ ರಥೋತ್ಸವ ಅಂಗವಾಗಿ ಆಯೋಜಿಸಿದ್ದ ಧರ್ಮ ಸಭೆಯಲ್ಲಿ ಅವರು ಆಶೀರ್ವಚನ ನೀಡಿದರು. 'ಇಂದಿನ ಜನ ಮಾನಸದಲ್ಲಿ ಭಕ್ತಿ ಮಾರ್ಗ ಕಡಿಮೆಯಾಗುತ್ತಿವೆ. ಮಠ-ಮಂದಿರಗಳು ನಮ್ಮ ಸಂಸ್ಕೃತಿ, ಧರ್ಮ ಬೋಧನೆ ನೀಡುವ ಕೇಂದ್ರಗಳಾಗಿದ್ದು, ನಿರಂತರವಾಗಿ ಇಂತಹ ಧರ್ಮ ಸಭೆಗಳನ್ನು ನಡೆಸುವ ಮೂಲಕ ಮಾನವ ಕುಲ ಉದ್ಧಾರಕ್ಕಾಗಿ ಎಲ್ಲರೂ ತೊಡಗಿಕೊಳ್ಳಬೇಕು, ನಮ್ಮ ಯುವ ಪೀಳಿಗೆಗೆ ನಮ್ಮ ಧರ್ಮಚಾರಣೆ, ಸಂಸ್ಕಾರಯುತ ಜೀವನದಿಂದ ದೂರಾಗುತ್ತಿದ್ದು, ಜಾತ್ರೆ, ದೇವಸ್ಥಾನಗಳಲ್ಲಿ ನಡೆಯುವ ಧರ್ಮ ಜಾಗೃತಿ ಕಾರ್ಯಕ್ರಮಗಳಲ್ಲಿ ಭಾಗವಹಿಸಿದಾಗ ನಮ್ಮ ಸಂಸ್ಕೃತಿ, ಧರ್ಮದ ಅರಿವು ಮೂಡಲು ಸಾಧ್ಯ ಎಂದು ಹೇಳಿದರು. ನಂತರ ಸಂಜೆ 6 ಘಂ-ಟೆಗೆ ಶ್ರೀ ಗುರು ಭದ್ರೇಶ್ವರನ ರಥೋತ್ಸವ ಅದ್ದೂ-ರಿಯಾಗಿ ಜರುಗಿತು. ಈ ಸಂದರ್ಭದಲ್ಲಿ ಪೂಜಶ್ರೀ ಮ.ನಿ.ಪ್ರ. ಚಿಕ್ಕ ಗುರು ನಂಜೇಶ್ವರ ಸ್ವಾಮಿಗಳು ವಿರಕ್ತಮಠ ಭರತನೂರ್, ಷ.ಬ್ರ. ಶಂಭುಲಿಂಗ ಶಿವಾಚಾರ್ಯರು ಹಿರೇಮುನ್ನಳ್ಳಿ, ಪೂಜ್ಯಶ್ರೀ ಪ್ರಭಯ್ಯಸ್ವಾಮಿಗಳು ಬೆನಕನಹಳ್ಳಿ, ಸಿದ್ದಯ್ಯ ಈಶ್ವರಯ್ಯ ದೇವರು ಶ್ರೀ ಚನ್ನಮಲ್ಲೇಶ್ವರ ವಿರಕ್ತಮಠ, ಮಲ್ಲಯ್ಯ ಶಾಸ್ತ್ರಿ ಐನಾಪುರ್, ಸಂಗಮೇಶ್ ಶಾಸ್ತ್ರಿಗಳು ಮಾಶಾಳ, ಶಾಂತವೀರಯ್ಯಾ ಸ್ವಾಮಿಗಳು ನಾವದಗಿ, ಗ್ರಾಮ ಪಂಚಾಯತ್ ಅಧ್ಯಕ್ಷೆ ತೆಂಗೆಮ್ಮಾ ಶಾಂತವೀರ, ಉಪಾಧ್ಯಕ್ಷೆ ಲಕ್ಷ್ಮೀ ನಾಗರಾಜ್, ಸೌಭಾಗ್ಯ ಯಮುನಪ್ಪ, ರಮೇಶ ಪಡಶೆಟ್ಟಿ, ನಾಗಶೆಟ್ಟಿ ಕಾಳಗಿ, ಆನಂದಸಾಗರ ನಾರಾಯಣಪುರ್, ಪರಿಸರವಾದಿ ಶೈಲೇಂದ್ರ ಕಾವಡಿ ಸಮಾಜ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ, ರೇವಪ್ಪಾ ಪಾಟೀಲ್, ವೀರಶೆಟ್ಟಿ ಮಾಲಿ ಪಾಟೀಲ್, ಬಸವರಾಜ ಪೋ.ಪಾಟೀಲ್, ರಾಜಶೇಖರ ಪೂಜಾರಿ, ರಾಜಣ್ಣಾ ಹುಡಗಿಕ್ಕರ್, ಬಸವರಾಜ ಪಾಟೀಲ್, ಗೌರೀಶ್ ಪೋ ಪಾಟೀಲ್, ಗೋವಿಂದರೆಡ್ಡಿ ಕಾಂಬಳೆವಾಡಿ, ನೀಲಕಂಠರಾವ ಇಸ್ಲಾಂಪುರ್, ಅಣ್ಣೇಪ್ಪ ಇಸ್ಲಾಂಪುರ್, ಚಂದ್ರಕಾಂತ ನಾರಾಯಣಪುರ್, ಉಮೇಶ್ ಚಿಟಗುಪ್ಪ ಸೇರಿದಂತೆ ಅಪಾರ ಭಕ್ತಾದಿಗಳು ಉಪಸ್ಥಿತರಿದ್ದರು.




### ಹತ್ತು ದಿನಗಳ ಉದ್ಯಮಶೀಲತಾಭಿವೃದ್ಧಿ

## ತರಬೇತಿ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಫೆಬ್ರವರಿ 28, : ಯಾದಗಿರಿ ಜಿಲ್ಲೆಯಲ್ಲಿ ಹತ್ತು ದಿನಗಳ ಉದ್ಯಮಶೀಲತಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಯಾದಗಿರಿ ಸಿಡಾಕ್ ಜಂಟಿ ನಿರ್ದೇಶಕರು ಜಿ.ಯು. ಹುಂಡೆದ್ ಅವರು ತಿಳಿಸಿದ್ದಾರೆ. ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ, ಕರ್ನಾಟಕ ಸರ್ಕಾರ ಇವರ ಪ್ರಾಯೋಜಕತ್ವದಲ್ಲಿ ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್), ಧಾರವಾಡ ಇವರು ಸ್ವಯಂ ಉದ್ಯೋಗ ಪ್ರಾರಂಭಿಸಲು ಆಸಕ್ತಿಯುಳ್ಳ ಪುರುಷ ಮತ್ತು ಮಹಿಳೆಯರುಗಳಿಗೆ ಯಾದಗಿರಿದಲ್ಲಿ ಹತ್ತು ದಿನಗಳ ಉದ್ಯಮಶೀಲತಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಮಾರ್ಚ್ ಮೊದಲನೇಯ ವಾರ ಏರ್ಪಡಿಸಲಾಗಿದೆ.

ಕಾರ್ಯಕ್ರಮದಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಅನುಸರಿಸಬೇಕಾದ ಕ್ರಮಗಳು, ಸರ್ಕಾರದ ಸ್ವಂತ ಉದ್ಯೋಗ ಯೋಜನೆಗಳು, ಬ್ಯಾಂಕಿನ ವ್ಯವಹಾರ, ಉದ್ಯಮಗಳನ್ನು ಪ್ರಾರಂಭಿಸಲು ಸರ್ಕಾರದ ಯೋಜನೆಗಳು ಮತ್ತು ಇತ್ಯಾದಿ ವಿಷಯಗಳ ಕುರಿತು ಮಾಹಿತಿಯನ್ನು ನೀಡಲಾಗುವುದು, ಯಾದಗಿರಿ ಜಿಲ್ಲೆಯ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಭಾಗವಹಿಸಬಹುದು. ಇದಕ್ಕೆ ಅಭ್ಯರ್ಥಿಗಳು 18 ರಿಂದ 40 ವರ್ಷ ಒಳಗಿರಬೇಕು, ಏಳನೇ ತರಗತಿಯಿಂದ ಎಸ್.ಎಸ್.ಎಲ್.ಸಿ ವರೆಗೆ ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಸಕ್ತರಿರುವರು 2025ರ ಮಾರ್ಚ್ 5ರ ಒಳಗೆ ಮೊಬೈಲ್ ಸಂಖ್ಯೆ 9535154904, 7022155160 ಇಲ್ಲಿಗೆ ಸಂಪರ್ಕಿಸಿ ತಮ್ಮ ಹೆಸರುವನ್ನು ನೊಂದಾಯಿಸಿ ಕೊಂಡು ಕಾರ್ಯಕ್ರಮಕ್ಕೆ ಹಾಜರಾಗಬಹುದಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾ.03ರಂದು ವಿವಿಧ ಜಯಂತಿಗಳ ಪೂರ್ವಭಾವಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಫೆ 28-ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಮಾ.03ರಂದು ಶ್ರೀ ರೇಣುಕಾಚಾರ್ಯ, ಶ್ರೀ ಯೋಗಿನಾರಾಯಣ ಯತೀಂದ್ರರ (ಕೈವಾರ ತಾತಯ್ಯ) ಹಾಗೂ ಶ್ರೀ ಅಗ್ನಿ ಬನ್ನಿರಾಯ ಜಯಂತಿಯ ಪೂರ್ವಭಾವಿ ಸಭೆಗಳು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರ ಅಧ್ಯಕ್ಷತೆಯಲ್ಲಿ ನಡೆಯಲಿವೆ.

## ಜಗತ್ತಿನ ಅನಿವಾರ್ಯತೆಗಳಿಗೆ ಪರಿಹಾರ ಕಲ್ಪಿಸುವುದೇ ವಿಜ್ಞಾನ: ಸುರೇಶ ಮುಸ್ತರ್ಗಿ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್: ಇಂದಿನ ಯುವ ಸಮುದಾಯದಲ್ಲಿ ವೈಜ್ಞಾನಿಕ ಮನೋಭಾವವನ್ನು ಮೂಡಿಸುವ, ಬೆಳೆಸುವ ಅಗತ್ಯತೆ ಇದ್ದು, ವಿಜ್ಞಾನಕ್ಕೆ ಸಂಬಂಧಿಸಿದ ಇಂಥ ಕಾರ್ಯಕ್ರಮಗಳು ಅದಕ್ಕೆ ಪೂರಕವಾಗಿರುತ್ತದೆ ಎಂದು ಶಾಲೆಯ ಅಧ್ಯಕ್ಷರಾದ ಸುರೇಶ ಮುಸ್ತರ್ಗಿ ಅಭಿಪ್ರಾಯಪಟ್ಟರು. ಶುಕ್ರವಾರ ರಾಷ್ಟ್ರೀಯ ವಿಜ್ಞಾನ ದಿನದ ಅಂಗವಾಗಿ ಪಟ್ಟಣದ ಸ್ಮಾರ್ಟ್ ಕಿಡ್ಸ್ ಇಂಗ್ಲಿಷ್ ಮೀಡಿಯಂ ಸ್ಕೂಲ್‌ನಲ್ಲಿ ರಾಷ್ಟ್ರೀಯ ವಿಜ್ಞಾನ ದಿನಾಚರಣೆಯನ್ನು ಶಾಲೆಯ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಒಂದು ದಿನದ ವಿಜ್ಞಾನ ತರಬೇತಿಯ ಸಮಾರೋಪ ಹಾಗೂ ವಿಜ್ಞಾನ ವಸ್ತುಪ್ರದರ್ಶನವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು. ಶಾಲಾ ವಿದ್ಯಾರ್ಥಿಗಳು ಭವಿಷ್ಯದಲ್ಲಿ ವಿಜ್ಞಾನ, ತಂತ್ರಜ್ಞಾನ ಮತ್ತು ಸಂಶೋಧನಾ ಕ್ಷೇತ್ರಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳಲು ಇಂಥ ವಿಜ್ಞಾನ ತರಬೇತಿ ಶಿಬಿರಗಳನ್ನು ಪ್ರೇರಣೆಯನ್ನ ನೀಡುತ್ತವೆ ಎಂದು ತಿಳಿಸಿದರು. ಇಂದಿನ ದಿನಮಾನಕ್ಕೆ ಹೊಸ ಹೊಸ ಆವಿಷ್ಕಾರಗಳು ತುಂಬಾ ಅವಶ್ಯವಾಗಿವೆ, ಜಗತ್ತಿನ ಅನಿವಾರ್ಯತೆಗಳಿಗೆ ಪರಿಹಾರ ಕಲ್ಪಿಸುವುದೇ ವಿಜ್ಞಾನ, ಇದರ ಮಹತ್ವವನ್ನು ಸಾರುವುದೇ ರಾಷ್ಟ್ರೀಯ ವಿಜ್ಞಾನ ದಿನಾಚರಣೆ-ಯ ಉದ್ದೇಶ ಎಂದು ಹೇಳಿದರು. ಹಡಗಿನ ಮೂಲಕ ವಿದೇಶಯಾತ್ರೆ ಕೈಗೊಳ್ಳುತ್ತಿದ್ದ ವೇಳೆ ಸಮುದ್ರದ ನೀರಿನ ನೀಲಿ ಬಣ್ಣ ಸರ್.ಸಿ.ವಿ.ರಾಮನ್ ಅವರ ಗಮನ ಸೆಳೆದು, ಸಮುದ್ರದ ನೀರಿನ ಬಣ್ಣ ಏಕೆ ನೀಲಿ ಬಣ್ಣದಾಗಿರುತ್ತದೆ? ಎಂಬ ಕುತೂಹಲ ಅವರನ್ನು ಕಾಡಿತು. ಹೀಗಾಗಿ, ಈ ನಿಟ್ಟಿನಲ್ಲಿ ಅವರು ಕೈಗೊಂಡ ಅನ್ವೇಷಣೆಯ ಫಲವಾಗಿ ರಾಮನ್ ಎಫೆಕ್ಟ್ ಜಗತ್ತಿನ ಗಮನ ಸೆಳೆಯಿತು. ಮುಂದೆ ಈ ಸಂಶೋಧನೆಗಾಗಿ ಅವರನ್ನು ನೋಬೆಲ್ ಪ್ರಶಸ್ತಿ ಹುಡುಕಿಕೊಂಡು ಬಂದಿತು. ಇಂಥದ್ದೊಂದು ಅದ್ಭುತ ಸಾಧನೆಗೆ ಅವರಲ್ಲಿದ್ದ ಕುತೂಹಲವೇ ಕಾರಣ ಎಂಬುದನ್ನು ವಿದ್ಯಾರ್ಥಿಗಳು ಮನದಟ್ಟು ಮಾಡಿಕೊಳ್ಳಬೇಕಿದೆ ಎಂದರು. ಉಪಾಧ್ಯಕ್ಷ ನಾಗೇಶ್ ತುಲಾಜೆ, ಕಾರ್ಯದರ್ಶಿ ವೀರೇಂದ್ರ ಸಂಗಬಟ್ಟೆ, ಸದಸ್ಯರಾದ ಅಶೋಕ್ ಮುಗಲಿ, ಪಿಯಸ್ ಜೋಸೆಫ್, ಮುಖ್ಯಗುರು ಸಿಸಿ ಪಿಯಾಸ್ ಹಾಗೂ ಶಾಲೆಯ ಎಲ್ಲಾ ವಿದ್ಯಾರ್ಥಿಗಳು ಇದ್ದರು.

## ಆರ್.ಸಿ.ಎಂ ಸೇವಾ ಕಾರ್ಯಕ್ರಮಕ್ಕೆ ಬಿ. ಸೋಮನಾಥ ಚಾಲನೆ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 27 :- ದೇಶದ ಬಗ್ಗೆ ಕಾಳಜಿಯ ಹಿನ್ನೆಲೆಯಲ್ಲಿ ಆರ್.ಸಿ.ಎಂ ಮುಖ್ಯಸ್ಥ ತ್ರಿಲೋಕ್ ಚಂದ್ ಚಾಬ್ರಾ ಅವರು ದೇಶದಾದ್ಯಂತ ಆರ್.ಸಿ.ಎಂ ಸೇವಾ ಅಭಿಯಾನವನ್ನು ಆರಂಭಿಸಿದ್ದಾರೆ. ಈ ಅಭಿಯಾನದಡಿ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಸೇವಾ ಅಭಿಯಾನ ಕಾರ್ಯಕ್ರಮ ಆಯೋಜನೆ ಮಾಡಲಾಗುತ್ತಿದೆ ಎಂದು ಬೀದರ ತಾಲ್ಲೂಕ ಪಂಚಾಯತ್ ಸಾಮಾಜಿಕ ನ್ಯಾಯ ಸಮಿತಿಯ ಮಾಜಿ ಅಧ್ಯಕ್ಷ ಬಿ. ಸೋಮನಾಥ ಹೇಳಿದರು.

ಅವರು ಗುರುವಾರ ನಗರದ ಹಂಗರಗಿ ಫಂಷನ್ ಹಾಲ್ ಕಾಂಪ್ಲೆಕ್ಸ್ ನಲ್ಲಿರುವ ಆರ್.ಸಿ.ಎಂ ಅಂಗಡಿಯಲ್ಲಿ ನಡೆದ ಆರ್.ಸಿ.ಎಂ ಸೇವಾ ಅಭಿಯಾನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಅಭಿಯಾನದಲ್ಲಿ ಆರೋಗ್ಯ, ಪರಿಸರ, ಶಿಕ್ಷಣ, ವೆಸನ ಮುಕ್ತ, ರಕ್ತದಾನ ಸೇರಿದಂತೆ ವಿವಿಧ ಜಾಗೃತಿ ಕಾರ್ಯಕ್ರಮಗಳು ನಡೆಯಲಿವೆ. ಈ ಅಭಿಯಾನದ ಯಶಸ್ವಿಗೆ ಎಲ್ಲರ ಸಹಕಾರ ಅಗತ್ಯವಾಗಿದೆ ಎಂದ ಅವರು ಮುಂದಿನ ದಿನಗಳ ಬೀದರ ಜಿಲ್ಲೆ ಆರ್.ಸಿ.ಎಂ ಸದಸ್ಯರ ಸಂಖ್ಯೆ ಲಕ್ಷಾಂತರಕ್ಕೆ ಹೆಚ್ಚಾಳವಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಆರ್.ಸಿ.ಎಂ ಹಿರಿಯ ಸೇವಕ ವೈಜೀನಾಥ ಮೂಲಗೆ ಮಾತನಾಡಿ, ಆರ್.ಸಿ.ಎಂ ಸಂಸ್ಥೆಯು ಎರಡು ಸಾವಿರನೇ ಇಸವಿಯಲ್ಲಿ ಆರಂಭವಾಗಿದ್ದು. ಈ ವರ್ಷ ಸಂಸ್ಥೆಯು ರಜತ ಮಹೋತ್ಸವ ಆಚರಿಸಿಕೊಳ್ಳುತ್ತಿದೆ. ಈ ಹಿನ್ನೆಲೆಯಲ್ಲಿ ಈ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಪ್ರತಿವಾರ ಈ ಅಭಿಯಾನದಡಿ ಕಾರ್ಯಕ್ರಮ ಆಯೋಜನೆ ಮಾಡಲಾಗುವುದು ಎಂದರು.

ಈ ಸಂದರ್ಭದಲ್ಲಿ ರಮೇಶ್ ಮಡಿವಾಳ, ಸಂಜುಕುಮಾರ್ ಪಾಟೀಲ್, ಚಂದ್ರಕಾಂತ ಕಾರ್ಬಾರಿ, ಬಾಬುರಾವ, ವೀರಶೆಟ್ಟಿ ಕೋಟೆ, ಬಸವರಾಜ್ ದೋಣೆ, ಮಹಾಂತೇಶ್ ಹಿರೇಮಠ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಪತಂಜಲಿ ಶಾಲೆಯಲ್ಲಿ ವಿಜ್ಞಾನ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 28 : ಇಲ್ಲಿಯ ಕೆ.ಇ.ಬಿ. ಕಾಲೊನಿಯ ಗಣೇಶ್ವರ ಚಾರಿಟಬಲ್ ಟ್ರಸ್ಟ್ ಸಂಚಾಲಿತ ಪತಂಜಲಿ ಪಬ್ಲಿಕ್ ಶಾಲೆಯಲ್ಲಿ ಶುಕ್ರವಾರ ರಾಷ್ಟ್ರೀಯ ವಿಜ್ಞಾನ ದಿನ ಆಚರಿಸಲಾಯಿತು.

ಸಸಿಗೆ ನೀರೆರೆದು ಕಾರ್ಯಕ್ರಮ ಉದ್ಘಾಟಿಸಿದ ಶಾಲೆಯ ಅಧ್ಯಕ್ಷೆ ಉಷಾ ಮಾರುತಿ ಮೇತ್ರೆ ಮಾತನಾಡಿ, ವಿದ್ಯಾರ್ಥಿಗಳು ವಿಜ್ಞಾನದ ಬಗ್ಗೆ ಆಸಕ್ತಿ ಬೆಳೆಸಿಕೊಳ್ಳಬೇಕು ಎಂದು ಹೇಳಿದರು. ವಿದ್ಯಾರ್ಥಿಗಳು ಸ್ವತಃ ಸಿದ್ಧಪಡಿಸಿ ಪ್ರದರ್ಶನಕ್ಕೆ ಇಟ್ಟಿದ್ದ ಚಂದ್ರಯಾನ 3, ಶ್ವಾಸಕೋಶ ಕ್ರಿಯೆ, ನೀರಿನ ಚಕ್ರ, ನೀರು ಶುದ್ಧೀಕರಣ ಪ್ರಕ್ರಿಯೆ, ಕೇದಾರನಾಥ ದೇವಸ್ಥಾನ ಮೊದಲಾದ ಮಾದರಿಗಳು ಗಮನ ಸೆಳೆದವು.


ಪ್ರಮುಖರಾದ ರಾಹುಲ್ ಮಿಶ್ರಾ, ಸುರೇಂದ್ರ ರೊಡ್ಡೆ, ಮುಖ್ಯಶಿಕ್ಷಕಿ ಸುಪ್ರಿಯ ಕುಲಕರ್ಣಿ, ಶಾರದಾ, ಜ್ಯಾಂತಿಕರ್, ಶಿವಮಂಗಲಾ ಪಾಟೀಲ, ಅನಿತಾ ಕಾಂಬಳೆ, ಪೂಜಾ ಕೋಳಿ, ಪವಿತ್ರಾ ಸ್ವಾಮಿ ಇದ್ದರು.

ವನಿತಾ ಕುಲಕರ್ಣಿ ನಿರೂಪಿಸಿದರು. ಶಾಲೆಯ ಆಡಳಿತಾಧಿಕಾರಿ ಬಸವರಾಜ ಜಿ. ಮುಗುಟಾಪುರೆ ಸ್ವಾಗತಿಸಿದರು. ಶ್ರುತಿ ತಲಾರಿ ವಂದಿಸಿದರು. ಶಾಲೆಯ ಬೋಧಕ, ಬೋಧ-ಕೇತರ ಸಿಬ್ಬಂದಿ, ಪಾಲಕರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ವಿದ್ಯಾರ್ಥಿಗಳಿಗೆ ಸಾಧಕರು ಆದರ್ಶರಾಗಲಿ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 28 : ವಿದ್ಯಾರ್ಥಿಗಳಿಗೆ ಎ.ಪಿ.ಜೆ. ಅಬ್ದುಲ್ ಕಲಾಂ, ಜಗದೀಶ್ ಚಂದ್ರ ಬೋಸ್, ಸುಧಾ ಮೂರ್ತಿ ಅವರಂಥ ಸಾಧಕರು ಆದರ್ಶರಾಗಬೇಕೇ ಹೊರತು ಚಿತ್ರನಟರಲ್ಲ ಎಂದು ಶಾಲಾ ಶಿಕ್ಷಣ ಇಲಾಖೆಯ ವಿಜ್ಞಾನ ಸಂಪನ್ಮೂಲ ವ್ಯಕ್ತಿ ಗುಂಡಪ್ಪ ಹುಡಗಿ ಹೇಳಿದರು.




ಇಲ್ಲಿಯ ಪ್ರತಾಪನಗರದ ಜನಸೇವಾ ಶಿಶು ಮಂದಿರ, ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಪ್ರೊ. ಬಿ.ಜಿ. ಮೂಲಿಮನಿ ಫೌಂಡೇಷನ್ ಸಹಯೋಗದಲ್ಲಿ ರಾಷ್ಟ್ರೀಯ ವಿಜ್ಞಾನ ದಿನಾಚರಣೆ ನಿಮಿತ್ತ ಆಯೋಜಿಸಿರುವ ಎರಡು ದಿನಗಳ ವಿಜ್ಞಾನ ವಸ್ತು ಪ್ರದರ್ಶನವನ್ನು ಶುಕ್ರವಾರ ಉದ್ಘಾಟಿಸಿ ಅವರು ಮಾತನಾಡಿದರು.

ಮನೆ, ಮನೆಗೆ ಪತ್ರಿಕೆ ತಲುಪಿಸುತ್ತಿದ್ದ ಕಲಾಂ ಕಠಿಣ ಪರಿಶ್ರಮದಿಂದ ದೊಡ್ಡ ವಿಜ್ಞಾನಿಯಾದರು. ದೇಶದ ರಾಷ್ಟ್ರಪತಿಯೂ ಆದರು. ಹೀಗಾಗಿ ವಿದ್ಯಾರ್ಥಿಗಳು ಸಾಧಿಸುವ ಛಲ ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು.

ವಿದ್ಯಾಭಾರತಿ ಜಿಲ್ಲಾ ಘಟಕದ ಅಧ್ಯಕ್ಷ ವೈಜಿನಾಥ ಸಜ್ಜನಶೆಟ್ಟಿ ಮಾತನಾಡಿ, ವಿದ್ಯಾರ್ಥಿಗಳು ವಿಜ್ಞಾನದ ಬಗ್ಗೆ ಒಲವು ಹೊಂದಬೇಕು. ಹೊಸ ಆವಿಷ್ಕಾರಕ್ಕೆ ಮುಂದಾಗಬೇಕು. ಎಷ್ಟೇ ಸಲ ಸೋತರೂ ಯಶಸ್ಸು ಸಿಗುವವರೆಗೆ ವಿರಮಿಸಬಾರದು ಎಂದು ಸಾವಿರ ಬಾರಿ ಸೋತು ಯಶ ಕಂಡ ವಿಜ್ಞಾನಿ ಥಾಮಸ್ ಎಡಿಸನ್ ಸಾಧನೆ ಉದಾಹರಿಸಿ ಹೇಳಿದರು.

ಜನಸೇವಾ ಪ್ರತಿಷ್ಠಾನದ ಕಾರ್ಯದರ್ಶಿ ರೇವಣಸಿದ್ದಪ್ಪ ಜಲಾದೆ ಮಾತನಾಡಿ, ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವ ಬೆಳೆಸಲು ವಸ್ತು ಪ್ರದರ್ಶನ ಆಯೋಜಿಸಲಾಗಿದೆ. ವಿದ್ಯಾರ್ಥಿಗಳು ಉತ್ಸಾಹದೊಂದಿಗೆ ಪ್ರದರ್ಶನದಲ್ಲಿ ಪಾಲ್ಗೊಂಡಿದ್ದಾರೆ. ಸ್ವತಃ ತಯಾರಿಸಿದ ವಿಜ್ಞಾನಕ್ಕೆ ಸಂಬಂಧಿಸಿದ ಮಾದರಿಗಳನ್ನು ಪ್ರದರ್ಶನಕ್ಕೆ ಇಟ್ಟಿದ್ದಾರೆ ಎಂದು ತಿಳಿಸಿದರು.

ಪ್ರತಿಷ್ಠಾನದ ಸದಸ್ಯ ಬಿ.ಎಸ್. ಕುದರೆ ಮಾತನಾಡಿದರು. ಜನಸೇವಾ ಪ್ರತಿಷ್ಠಾನದ ಅಧ್ಯಕ್ಷ ಬಸವರಾಜ ಸ್ವಾಮಿ, ಬಿ.ಜಿ. ಮೂಲಿಮನಿ ಫೌಂಡೇಷನ್ ಅಧ್ಯಕ್ಷ ಶಿವಲಿಂಗಪ್ಪ ಜಲಾದೆ, ಪ್ರಾಥಮಿಕ ಶಾಲೆ ಮುಖ್ಯಶಿಕ್ಷಕಿ ನೀಲಮ್ಮ ಚಾಮರೆಡ್ಡಿ, ಪ್ರೌಢಶಾಲೆ ಮುಖ್ಯಶಿಕ್ಷಕ ರಾಹುಲ್ ಮೆಟೆಕರ್, ವಿಜ್ಞಾನ ವಿಷಯ ಪ್ರಮುಖ ಸತೀಶಕುಮಾರ ಚಿಮ್ಮಾ ಮತ್ತಿತರರು ಇದ್ದರು.

ರೇಣುಕಾ ಬ್ಯಾಗಿರೆ ನಿರೂಪಿಸಿದರು. ಪ್ರಿಯಾಂಕಾ ವಂದಿಸಿದರು.

# ರೇಣುಕಾಚಾರ್ಯ ಜಯಂತಿ: ಪೂರ್ವಭಾವಿ ಸಭೆ ನಾಳೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 28 :ಜಗದ್ಗುರು ರೇಣುಕಾಚಾರ್ಯರ ಜಯಂತಿ ಆಚರಣೆ ಕುರಿತು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಹಾಗೂ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಆಚರಣೆ ಸಮಿತಿ ವತಿಯಿಂದ ಇಲ್ಲಿಯ ಪಾಪನಾಶ ಮಂದಿರದಲ್ಲಿ ಮಾ. 2 ರಂದು ಬೆಳಿಗ್ಗೆ 11.30ಕ್ಕೆ ಪೂರ್ವಭಾವಿ ಸಿದ್ಧತಾ ಸಭೆ ಕರೆಯಲಾಗಿದೆ.

ನಗರದಲ್ಲಿ ಮಾ. 12 ರಂದು ರೇಣುಕಾಚಾರ್ಯರ ಜಯಂತಿಯನ್ನು ಅದ್ದೂರಿ ಹಾಗೂ ಅರ್ಥಪೂರ್ಣವಾಗಿ ಆಚರಿಸುವ ಬಗ್ಗೆ ಸಭೆಯಲ್ಲಿ ಚರ್ಚೆ ನಡೆಯಲಿದೆ. ಸರ್ವ ಸಮಾಜಗಳ ಪ್ರಮುಖರು ಸಭೆಗೆ ಹಾಜರಾಗಿ, ಜಯಂತಿ ಆಚರಣೆ ಸಂಬಂಧ ತಮ್ಮ ಸಲಹೆ ನೀಡಬೇಕು ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ ಅಧ್ಯಕ್ಷ ವೈಜಿನಾಥ ಕಮಠಾಣೆ, ಕಲ್ಯಾಣ ಕರ್ನಾಟಕ ಜಂಗಮ ಅಭಿವೃದ್ಧಿ ಸಂಸ್ಥೆಯ ಅಧ್ಯಕ್ಷ ಸಿದ್ರಾಮಯ್ಯ ಸ್ವಾಮಿ, ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಆಚರಣೆ ಸಮಿತಿಯ ಪ್ರಧಾನ ಕಾರ್ಯದರ್ಶಿ ಶಿವಯ್ಯ ಸ್ವಾಮಿ ಹಾಗೂ ಮುಖಂಡ ವರದಯ್ಯ ಸ್ವಾಮಿ ಮನವಿ ಮಾಡಿದ್ದಾರೆ.

# ನಾಳೆ ಸಕಲ ಮರಾಠಾ ಸಮಾಜದಿಂದ

## ಸಾಗರ ಖಂಡ್ರೆ, ಎಂ.ಜಿ ಮುಳೆಗೆ ಸತ್ಕಾರ: ಕಣಜಿಕರ್



ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 28 : ನಾಳೆ (ಮಾರ್ಚ್ 2ರಂದು) ಬೆಳಿಗ್ಗೆ 10.30 ಗಂಟೆಗೆ ನಗರದ ಪ್ರತಾಪನಗರ ಬಡಾವಣೆಯಲ್ಲಿರುವ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಸಮುದಾಯ ಭವನದಲ್ಲಿ ಸಕಲ ಮರಾಠಾ ಸಮಾಜದಿಂದ ಬೀದರ್ ಲೋಕಸಭೆ ಸದಸ್ಯರಾದ ಸಾಗರ ಖಂಡ್ರೆ ಹಾಗೂ ವಿಧಾನ ಸಭೆ ಸದಸ್ಯರಾದ ಎಂ.ಜಿ ಮುಳೆ ಅವರ ಭವ್ಯ ಸತ್ಕಾರ ಸಮಾರಂಭ ಆಯೋಜಿಸಲಾಗಿದೆ ಎಂದು ಸತ್ಕಾರ ಸಮಿತಿ ಅಧ್ಯಕ್ಷ ಅಶೋಕ ಪಾಟೀಲ ಕಣಜಿಕರ್ ಹೇಳಿದರು. ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಸಮಾರಂಭದಲ್ಲಿ ಜಗದ್ಗುರು ವೇದಾಚಾರ್ಯ ಮಂಜುನಾಥ ಭಾರತಿ ಸ್ವಾಮಿಜಿ ಸಾನಿಧ್ಯ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಜಿಲ್ಲಾ ಉಸ್ತುವಾರಿ ಸಚಿವರು, ಪೌರಾಡಳಿತ ಸಚಿವರು, ನಗರ ಸಭೆ ಅಧ್ಯಕ್ಷರು, ಬೂಡಾ ಅಧ್ಯಕ್ಷರು, ಹಿರಿಯ ಅಧಿಕಾರಿಗಳು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಈ ಸತ್ಕಾರ ಕಾರ್ಯಕ್ರಮದಲ್ಲಿ ಸಂಸದ ಸಾಗರ ಖಂಡ್ರೆ ಹಾಗೂ ವಿಧಾನ ಪರಿಷತ್ ಸದಸ್ಯರಾದ ಎಂ.ಜಿ ಮುಳೆ ಅವರನ್ನು ವೈಭವವಾಗಿ ಸತ್ಕರಿಸಲಾಗುತ್ತಿದೆ ಎಂದರು. ನಾವು ಕನ್ನಡಿಗರು: ಬೆಳಗಾವಿ ಘಟನೆ ದುರದೃಷ್ಟಕರ: ಮೆಹೆಂದೆ ನಾವು ಕರ್ನಾಟಕದಲ್ಲಿದ್ದು, ನಮ್ಮ ಹುಟ್ಟು, ಬದುಕು ಹಾಗೂ ಸಾವು ಕರ್ನಾಟಕದಲ್ಲಿಯೇ. ಹಾಗಾಗಿ ನಾವು ಎಲ್ಲಿರುತ್ತೇವೆಯೋ ಅಲ್ಲಿಯ ನಾಡು, ಭಾಷೆ ಬಗ್ಗೆ ಅಭಿಮಾನ ಇರಬೇಕು. ಒಕ್ಕೂಟ ವ್ಯವಸ್ಥೆಯಲ್ಲಿ ನಾವಿದ್ದು, ನಾವೆಲ್ಲ ಭಾರತೀಯರು. ಹಾಗಾಗಿ ಭಾಷೆ, ಜನಾಂಗಗಳ ಮಧ್ಯ ಕದನ ಒಳ್ಳೆಯ ಬೆಳವಣಿಗೆ ಇಲ್ಲ ಎಂದು ಮರಾಠಾ ಕ್ರಾಂತಿ ಮೋರ್ಚಾ ಸಂಯೋಜಕರು ಹಾಗೂ ಸತ್ಕಾರ ಸಮಿತಿ ಕಾರ್ಯದರ್ಶಿಗಳಾದ ವೆಂಕಟೇಶ ಮೆಹೆಂದೆ ಪ್ರತಿಕ್ರಿಯಿಸಿದರು.

ಕರ್ನಾಟಕ ಕ್ಷೇತ್ರಿಯ ಮರಾಠಾ ಪರಿಷತ್ ಅಧ್ಯಕ್ಷರಾದ ಡಿಗಂಬರರಾವ ಮಾನಕಾರಿ, ಸಕಲ ಮರಾಠಾ ಸಮಾಜದ ಪ್ರಮುಖರಾದ ಜನಾರ್ಧನ ಬಿರಾದಾರ, ಶಂಕರರಾವ ಬಿರಾದಾರ, ಪಂಚಶೀಲ ಪಾಟೀಲ, ತಾತ್ಯಾರಾವ ಪಾಟೀಲ, ವಿದ್ಯಾವಾನ ಪಾಟೀಲ, ರಂಜೀತ ಪಾಟೀಲ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

# ರಾಜ್ಯಮಟ್ಟದ ಆದರ್ಶ ದಂಪತಿ, ಉತ್ತಮ ಸೇವಾ ರತ್ನ ಪ್ರಶಸ್ತಿ ಪ್ರದಾನ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 28 : ಭಾಲ್ಕಿ ತಾಲ್ಲೂಕಿನ ಧನ್ನೂರ (ಎಸ್) ಗ್ರಾಮದಲ್ಲಿ ಗಣೇಶ್ವರ ಅವಧೂತರ ಪಲ್ಲಕ್ಕಿ ಶೋಭಾಯಾತ್ರೆ, ಮಹಾ ಶಿವರಾತ್ರಿ ಪ್ರಯುಕ್ತ ಹಮ್ಮಿಕೊಂಡಿದ್ದ ಸಪ್ತಾಹ ಸಮಾರೋಪ, ರಾಜ್ಯ ಹಾಗೂ ಜಿಲ್ಲಾಮಟ್ಟದ ಪ್ರಶಸ್ತಿ ಪ್ರದಾನ ಸಮಾರಂಭ ಈಚೆಗೆ ನಡೆಯಿತು. ಗ್ರಾಮದಲ್ಲಿ ಬಾಲಯೋಗಿನಿ ಸುವರ್ಣ ಮಾತಾಜಿ ಸಮಾಜೋಧಾರ್ಮಿಕ ಕಾರ್ಯಗಳಲ್ಲಿ ತೊಡಗಿಸಿಕೊಂಡಿದ್ದಾರೆ. ಸಾಮಾಜಿಕ ಪರಿವರ್ತನೆಗೆ ಶ್ರಮಿಸುತ್ತಿದ್ದಾರೆ. ಗಣೇಶ್ವರ ಅವಧೂತರ ಅನುಯಾಯಿ ಆಗಿರುವ ಅವರು, ಲೋಕ ಕಲ್ಯಾಣಕ್ಕಾಗಿ ಅನುಷ್ಠಾನ ಕೈಗೊಂಡಿದ್ದರು ಎಂದು ಕಾರ್ಯಕ್ರಮ ಉದ್ಘಾಟಿಸಿದ ಧಾಮಾಜಿ ಮಹಾರಾಜ ಬಣ್ಣಿಸಿದರು. 25 ದಂಪತಿಗೆ ರಾಜ್ಯಮಟ್ಟದ ಆದರ್ಶ ದಂಪತಿ, ವಿವಿಧ ಕ್ಷೇತ್ರಗಳ 21 ಮಂದಿ ಸಾಧಕರಿಗೆ ರಾಜ್ಯಮಟ್ಟದ ಉತ್ತಮ ಸೇವಾ ರತ್ನ ಹಾಗೂ 21 ಜನರಿಗೆ ಜಿಲ್ಲಾಮಟ್ಟದ ಉತ್ತಮ ಸೇವಾ ರತ್ನ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಬಾಲಯೋಗಿನಿ ಸುವರ್ಣ ಮಾತಾಜಿ ಸಾನಿಧ್ಯ ವಹಿಸಿದ್ದರು. ಕಲ್ಯಾಣ ಕರ್ನಾಟಕ ಪ್ರೌಢಶಾಲಾ ಶಿಕ್ಷಕರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಪಾಂಡುರಂಗ ಬೆಲ್ದಾರ್ ಅಧ್ಯಕ್ಷತೆ ವಹಿಸಿದ್ದರು.

ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಶಿವರಾಜ ಹಾಸನಕರ್, ಹುಮನಾಬಾದ್ ಕ್ಷೇತ್ರ ಶಿಕ್ಷಣಾಧಿಕಾರಿ ವೆಂಕಟೇಶ್ ಎಸ್. ಗುಡಾಳಸ, ಪ್ರಮುಖರಾದ ಚಂದ್ರಕಾಂತ ಬನ್ನಾಳೆ, ಮನೋಹರ ಹೋಳ್ಕರ್, ಜಗನ್ನಾಥ ಮೂರ್ತಿ, ಸತೀಶ್, ವಿಶ್ವರಾಧ್ಯ, ರಮೇಶ ಹಲಗೆ, ಡಿ. ಝೂಕೀರ್ ಹುಸೇನ್, ಎನ್. ಭಾಸ್ಕರ್ ಕಾಶೆಂಪುರ, ರಾಜಪ್ಪ ಪಾಟೀಲ, ಸಂಜೀವಕುಮಾರ ಸ್ವಾಮಿ, ನಾಗಭೂಷಣ ಮಾಮಡಿ, ಸೂರ್ಯಕಾಂತ ಸುಂಟೆ, ಗೋವಿಂದ ಪೂಜಾರಿ, ಬಾಲಾಜಿ ಕಾಂಬಳೆ, ಭೀಮಣ್ಣ ಕೊಂಕಣೆ, ಕೀರ್ತಿಲತಾ ಹೊಸಾಳೆ, ಸರಿತಾ ಗಾಯಕವಾಡ್, ರಾಣಿ ಸತ್ಯಮೂರ್ತಿ, ಅಶೋಕ ಹೊಸಮನಿ, ಕುಪೇಂದ್ರ ಜಗಶೆಟ್ಟಿ, ಅಂದಾನ ಗೌಡ, ವೈಜಿನಾಥ ಸಾಳೆ, ಇಂದ್ರಕಾಂತ, ಬಳವಂತರಾವ್ ರಾಠೋಡ್, ಗಿಪ್ಪನ್ ಕೋಟೆ, ತಾತ್ಯಾರಾವ್ ಕಾಂಬಳೆ, ವೀರಭದ್ರಪ್ಪ ಚಟ್ನಾಳೆ, ಸತೀಶ್ ಸಿದ್ಧೇಶ್ವರ, ತುಕಾರಾಮ ಬೆಲ್ದಾರ್, ಪರಮೇಶ್ವರ ಕುರಕುಂಟಾ, ಪಲ್ಹಾದ್, ತಾಜುದ್ದಿನ್ ಮತ್ತಿತರರು ಇದ್ದರು. ಕಲ್ಯಾಣ ಕರ್ನಾಟಕ ಪ್ರೌಢಶಾಲಾ ಶಿಕ್ಷಕರ ಸಂಘದ ಜಿಲ್ಲಾ ಘಟಕ ಹಾಗೂ ಪೂಜ್ಯ ಬಾಲಯೋಗಿನಿ ಸುವರ್ಣ ಮಾತಾಜಿ ಚಾರಿಟಬಲ್ ಟ್ರಸ್ಟ್ ವತಿಯಿಂದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

# ರಾಜ್ಯದ ಅಭಿವೃದ್ಧಿ ಕಾಂಗ್ರೆಸ್‌ನಿಂದ ಮಾತ್ರ ಸಾಧ್ಯ:ಸಚಿವ ಈಶ್ವರ ಖಂಡ್ರೆ



ತಾಲೂಕಿನ ಹೊನ್ನಳ್ಳಿ ಗ್ರಾಮದ ನೂರಾರು ಹಿರಿಯರು, ಯುವಕರು ಕಾಂಗ್ರೆಸ್ ಪಕ್ಷ ಸೇರ್ಪಡೆ ಆಗಿರುವುದು ಸಂತಸ ತರಿಸಿದೆ. ಎಲ್ಲ ಹಿರಿಯರು, ಮುಖಂಡರು ಕಾಂಗ್ರೆಸ್ ಸರಕಾರದ ಸಾಧನೆಗಳನ್ನು ಜನರಿಗೆ ಮನುವರಿಕೆ ಮಾಡಿಕೊಟ್ಟು ಗ್ರಾಮೀಣ ಭಾಗದಲ್ಲಿ ಪಕ್ಷ ಬಲಪಡಿಸಬೇಕು.

**-ಈಶ್ವರ ಖಂಡ್ರೆ ಜಿಲ್ಲಾ ಉಸ್ತುವಾರಿ ಸಚಿವರು ಬೀದರ್**

ಗಡಿ ಜಿಲ್ಲೆ ಬೀದರ್ ಸೇರಿ ರಾಜ್ಯದ ಅಭಿವೃದ್ಧಿಗೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಹಗಲಿರುಳು ಶ್ರಮಿಸುತ್ತಿದ್ದಾರೆ. ಕಳೆದ ಎರಡು ದಶಕಗಳಿಂದ ಈಶ್ವರ ಖಂಡ್ರೆ ಅವರು ಶಾಸಕ, ಸಚಿವರಾಗಿ ಜನರ ಸೇವೆಯಲ್ಲಿ ತೊಡಗಿಸಿಕೊಂಡಿದ್ದಾರೆ. ಕಾಂಗ್ರೆಸ್ ಪಕ್ಷದ ಸಿದ್ಧಾಂತ ಮತ್ತು ಸಚಿವ ಈಶ್ವರ ಖಂಡ್ರೆ ಅಭಿವೃದ್ಧಿ ಕಾಳಜಿ ಮೆಚ್ಚಿಕೊಂಡು ಬಿಜೆಪಿ ತೊರೆದು ಕಾಂಗ್ರೆಸ್ ಪಕ್ಷ ಸೇರ್ಪಡೆ ಆಗಿದ್ದೇನೆ.

**-ಸುರೇಶ ಬಿರಾದಾರ್ ವಕೀಲರು ಭಾಲ್ಕಿ**

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಫೆ.28:ತಾಲೂಕು, ಜಿಲ್ಲೆ ಸೇರಿ ರಾಜ್ಯದ ಸರ್ವಾಂಗೀಣ ಅಭಿವೃದ್ಧಿ ಕಾಂಗ್ರೆಸ್ ಪಕ್ಷದಿಂದ ಮಾತ್ರ ಸಾಧ್ಯ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು. ಪಟ್ಟಣದ ಜಿಲ್ಲಾ ಉಸ್ತುವಾರಿ ಸಚಿವರ ಗೃಹ ಕಚೇರಿಯಲ್ಲಿ ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಸುರೇಶ ಬಿರಾದಾರ್ ಸೇರಿದಂತೆ ಹೊನ್ನಳ್ಳಿ ಗ್ರಾಮದ ಹಿರಿಯರು, ಯುವಕರನ್ನು ಕಾಂಗ್ರೆಸ್ ಪಕ್ಷಕ್ಕೆ ಬರಮಾಡಿಕೊಂಡು ಮಾತನಾಡಿದರು.

ಕಾಂಗ್ರೆಸ್ ಪಕ್ಷ ಬಸವಣ್ಣನವರ ತತ್ವ ಸಿದ್ಧಾಂತದ ಮೇಲೆ ನಡೆಯುತ್ತಿದೆ. ರಾಜ್ಯದಲ್ಲಿ ನುಡಿದಂತೆ ನಡೆಯುವ ಏಕೈಕ ಪಕ್ಷ ಕಾಂಗ್ರೆಸ್. ಚುನಾವಣೆ ಪೂರ್ವದಲ್ಲಿ ನೀಡಿದ ಎಲ್ಲ ಭರವಸೆಗಳನ್ನು ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರುತ್ತಲೇ ಈಡೇರಿಸಿದೆ. ಅಭಿವೃದ್ಧಿ ಕಾರ್ಯಗಳ ಜತೆಗೆ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದು ಮಹಿಳೆಯರು, ದುರ್ಬಲ ವರ್ಗದವರು, ಬಡವರನ್ನು ಆರ್ಥಿಕವಾಗಿ ಸದೃಢರನ್ನಾಗಿ ಮಾಡುವ ಕೆಲಸ ಮಾಡಲಾಗುತ್ತಿದೆ.

ಕಾಂಗ್ರೆಸ್ ಪಕ್ಷ ದಶಕಗಳ ಇತಿಹಾಸ ಹೊಂದಿದೆ. ದೇಶದ ಸಂಸ್ಕೃತಿ, ಪರಂಪರೆ ಉಳಿಸಿ ಬೆಳೆಸುವಲ್ಲಿ ಕಾಂಗ್ರೆಸ್ ಪಕ್ಷದ ಕೊಡುಗೆ ದೊಡ್ಡದಿದೆ. ಇಂತಹ ಪಕ್ಷದ ತತ್ವ ಸಿದ್ಧಾಂತಗಳನ್ನು ಒಪ್ಪಿ ಬರುವವರನ್ನು ಕಾಂಗ್ರೆಸ್ ಪಕ್ಷ ಸದಾ ಸ್ವಾಗತಿಸುತ್ತದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ತಾಲೂಕು ಕಾಂಗ್ರೆಸ್ ಪಕ್ಷದ ಅಧ್ಯಕ್ಷ ಹಣಮಂತರಾವ ಚವ್ಹಾಣ, ರಾಜು ಬಿರಾದಾರ್, ಉಮಾಕಾಂತ ಬಿರಾದಾರ್, ಡಾ.ಸೋಮಶೇಖರ ಮೈನಾಳೆ ಇದ್ದರು. ಸೇರ್ಪಡೆಯಾದವರ ವಿವರ : ಗ್ರಾಪಂ ಮಾಜಿ ಅಧ್ಯಕ್ಷ ಬಸವರಾಜ ಬಿರಾದಾರ್, ಆನಂದ ಸ್ವಾಮಿ, ಬಂಡೆಪ್ಪ ಬಿರಾದಾರ್, ದಿಲೀಪ ಮೈನಾಳೆ, ಕಮಲಾಕರ ಬಿರಾದಾರ್, ಸುಧಾಕರ ದೇಗಲವಾಡೆ, ಸುಧಾಕರ ಬಿರಾದಾರ್, ಸುನಿಲ ಧುಮ್ಮನಸೂರೆ, ಬಲರಾಜ ಬಿರಾದಾರ್, ಪ್ರಭು ಬಿರಾದಾರ್, ಕಲ್ಲಪ್ಪ ಮೇತ್ರೆ, ಸತೀಶ ಮೂಲಗೆ, ಸಹಾದೇವ ಮೇತ್ರೆ, ಬಸವರಾಜ ಏಲ್ಲೂರೆ, ಸಹಾದೇವ ಏಲ್ಲೂರೆ, ವೀರಶೆಟ್ಟಿ ಬಿರಾದಾರ್, ಅನಿಲ ಮೇತ್ರೆ, ಮಲ್ಲಿಕಾರ್ಜುನ ಬಿರಾದಾರ್, ಬಾಬು ಮೈನಾಳೆ ಸೇರಿದಂತೆ ಹಲವರು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು.

# ಯತ್ನಾಳ ಮೀಸಲಾತಿ ಹೇಳಿಕೆ ಖಂಡನೀಯ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 28 : ಚುನಾವಣೆ ಅಂಚಿನಲ್ಲಿ ಬೊಮ್ಮಾಯಿ ಸರ್ಕಾರ ಮೀಸಲಾತಿ ನೀಡುವ ಮೂಲಕ ಚುನಾವಣಾ ಕಣವನ್ನು ಸಜ್ಜಾಗಿದರಿಂದ ರಾಜ್ಯದಲ್ಲಿ ಬಿಜೆಪಿ ಸೋತಿದೆ ಎನ್ನುವ ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ ಹೇಳಿಕೆಗೆ ಮಾದಿಗ ಸಮುದಾಯ ಮುಖಂಡ ಜಾನ್ಸನ್ ಘೋಡೆ ಖಂಡಿಸಿದ್ದಾರೆ. ಈ ಕುರಿತು ಶುಕ್ರವಾರ ಪತ್ರಿಕಾ ಪ್ರಕಟಣೆ ನೀಡಿದ ಅವರು, ಯತ್ನಾಳ ಈ ಹೇಳಿಕೆಯಿಂದ ಸಮುದಾಯಗಳ ನಡುವೆ ಜಾತಿಯ ವಿಷ ಬೀಜ ಬಿತ್ತಿದಂತಾಗಿದೆ. ಜವಾಬ್ದಾರಿ ಸ್ಥಾನದಲ್ಲಿರುವ ಶಾಸಕ ಯತ್ನಾಳ ಹೇಳಿಕೆಗೆ ರಾಜ್ಯಾದ್ಯಂತ ತೀವ್ರ ವಿರೋಧ ವ್ಯಕ್ತವಾಗುತ್ತಿದೆ. ಕೂಡಲೇ ಯತ್ನಾಳ ತಮ್ಮ ಹೇಳಿಕೆ ಹಿಂಪಡೆದು ಸಮುದಾಯದ ಜನರಿಗೆ ಕ್ಷೇಮೆಯಾಚಿಸಬೇಕು ಇಲ್ಲವಾದಲ್ಲಿ ಎಲ್ಲ ಕಡೆಯಲ್ಲಿಯೂ ಪ್ರತಿಭಟನೆ ನಡೆಸಲಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ. ಬಿಜೆಪಿ ಪಕ್ಷದಲ್ಲಿನ ಅನೇಕರು ನಮ್ಮ ಸಮುದಾಯದ ಮತಗಳಿಂದ ಗೆಲುವು ಸಾಧಿಸಿದ್ದಾರೆ. ಆದರೆ ಯತ್ನಾಳ ಒಳ ಮೀಸಲಾತಿ ವಿರೋಧ ಮಾಡುವುದು ಅವರ ನೈತಿಕತೆ ಎತ್ತಿ ತೋರಿಸುತ್ತಿದೆ. ಯತ್ನಾಳ ಜಾತಿಗಳ ಮಾತುಗಳು ಬಿಟ್ಟರೇ ಬೇರೆ ಮಾತನಾಡುವುದಿಲ್ಲ. ಈಗ ಒಳ ಮೀಸಲಾತಿ ಬಗ್ಗೆ ಕೆದಕುತ್ತಿದ್ದಾರೆ. ಕೂಡಲೇ ಇವರನ್ನು ಶಾಸಕ ಸ್ಥಾನದಿಂದ ವಜಾಗೊಳಿಸಬೇಕು ಎಂದು ಪ್ರಕಟಣೆಯಲ್ಲಿ ಒತ್ತಾಯಿಸಿದ್ದಾರೆ.

# ಎಸ್ಸಿ, ಎಸ್ಟಿ ಅನುದಾನ ಗ್ಯಾರಂಟಿಗೆ ಬಳಸಿಕೊಳ್ಳದಿರಿ:ಅರುಣ ಶಹಾಪೂರ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.28- ಪರಿಶಿಷ್ಟ ಜಾತಿ, ಜನಾಂಗದ ಅಭಿವೃದ್ಧಿಗೆ ಮೀಸಲಿಟ್ಟ ಅನುದಾನವನ್ನು ರಾಜ್ಯದ ಕಾಂಗ್ರೆಸ್ ಸರ್ಕಾರ ದುರ್ಬಳಕೆ ಮಾಡಿಕೊಂಡು ದಲಿತರಿಗೆ ದ್ರೋಹನೀತಿ ಅನುಸರಿಸುತ್ತಿದೆ ಎಂದು ವಿಧಾನ ಪರಿಷತ್ ಮಾಜಿ ಸದಸ್ಯ ಅರುಣ ಶಹಾಪೂರ ಹೇಳಿದರು. ಶುಕ್ರವಾರ ನವನಗರದ ಬಿಜೆಪಿ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದೆರಡು ಬಜೆಟ್‌ದಲ್ಲಿ ದಲಿತರ ಉದ್ಧಾರಕ್ಕಾಗಿ ತೆಗೆದಿರಿಸಲಾದ ಅನುದಾನದಲ್ಲಿ ಸುಮಾರು 25 ಸಾವಿರ ಕೋಟಿ ರೂ.ಗಳನ್ನು ಗ್ಯಾರಂಟಿ ಯೋಜನೆಗೆ ಬಳಸಿಕೊಂಡಿದ್ದು ಬರುವ ಬಜೆಟ್‌ದಲ್ಲಿಯೂ ಸುಮಾರು 14 ಸಾವಿರ ಕೋಟಿ ರೂ. ಗಳನ್ನು ಗ್ಯಾರಂಟಿಗಾಗಿ ಬಳಸಿಕೊಳ್ಳುವ ಹುನ್ನಾರ ನಡೆದಿದೆ. ಸರ್ಕಾರ ತನ್ನ ಈ ನೀತಿಯನ್ನು ಕೈಬಿಟ್ಟು ದಲಿತರ ಅಭಿವೃದ್ಧಿಗೆ ಇರಿಸಿದ ಅನುದಾನ ಯಾವುದೇ ಕಾರಣ-ಕ್ಕೂ ಬೇರೆ ಯೋಜನೆಗೆ ಬಳಸಿಕೊಳ್ಳಬಾರದು ಎಂದು ಒತ್ತಾಯಿಸಿದರು. ರಾಜ್ಯದಲ್ಲಿ ಎಲ್ಲಾ ನಿಗಮಗಳಿಗೆ ಸರ್ಕಾರ ಅನುದಾನ ಸ್ಥಗಿತಗೊಳಿಸಿದೆ. ಶಿಕ್ಷಣಕ್ಕಾಗಿ ಹಾಗೂ ಸ್ಕಾಲರ್ ಶಿಪ್‌ಗಳಿಗೆ ಯಾವುದೇ ಹಣ ನೀಡುತಿಲ್ಲ. ಎಸ್ಸಿ, ಎಸ್ಟಿ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯ ಒದಗಿಸಿಲ್ಲ ಎಂದು ಅರುಣ ಶಹಾಪೂರ ದೂರಿದರು.



ಸುದ್ದಿಗೋಷ್ಠಿಯಲ್ಲಿ ಸಂಸದ ಪಿ.ಸಿ.ಗದ್ದಿಗೌಡರ, ಶಾಸಕ ಸಿದ್ದು ಸವದಿ, ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಜು ನಾಯ್ಕರ, ಬಸವರಾಜ ಯಂಕಂಚಿ, ಮುತ್ತಣ್ಣ ಬೆಣ್ಣೂರ, ಓಂಕಾರ, ರಾಮಣ್ಣ, ಬಳ್ಳಾರಿ, ಹನಮಂತಪ್ಪ, ಶಿವಾನಂದ ಸುರಪುರ ಮತ್ತಿತರರು ಇದ್ದರು.

# ವೈಭವದ ಲೋಕೇಶ್ವರ ರಥೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.27– ಜಿಲ್ಲೆಯ ಮುಧೋಳ ತಾಲೂಕಿನ ಲೋಕಾಪೂರದಲ್ಲಿ ಗುರುವಾರ ಸ್ಥಳೀಯ ಆರಾಧ್ಯ ದೈವ ಲೋಕೇಶ್ವರ ದೇವರ ಮಹಾರಥೋತ್ಸವ ವೈಭವದಿಂದ ಜರುಗಿತು.

ಸಹಸ್ರಾರು ಜನ ಭಕ್ತರ ಹರ್ಷೋದ್ಗಾರ, 'ಹರ ಹರ ಮಹಾದೇವ' ಎನ್ನುವ ಘೋಷಣೆಯೊಂದಿಗೆ ರಥೋತ್ಸವ ಸಂಭ್ರಮದಿಂದ ನಡೆಯಿತು. ಲೋಕೇಶ್ವರ ದೇವಸ್ಥಾನದಿಂದ ಪ್ರಾರಂಭವಾದ ರಥೋತ್ಸವ ಬಸ್ ನಿಲ್ದಾಣದ ಬಳಿಯಿರುವ ರಾಮಲಿಂಗೇಶ್ವರ ದೇವಸ್ಥಾನದವರೆಗೆ ಸಾಗಿತು.

ಮಾರ್ಗದುದ್ದಕ್ಕೂ ರಸ್ತೆಯ ಇಕ್ಕೆಲಗಳಲ್ಲಿ ನಿಂತಿದ್ದ ಭಕ್ತ ಸಮೂಹ ರಥ ಸಾಗಿ ಬರುತ್ತಿದ್ದಂತೆ ಉತ್ತತ್ತಿ, ಬಾಳೆಹಣ್ಣು, ಹೂವು ಎಸೆದು ಭಕ್ತಿ ಸಮರ್ಪಿಸಿದರು. ರಥ ಲೋಕೇಶ್ವರ ದೇವಸ್ಥಾನಕ್ಕೆ ಮರಳುತ್ತಿದ್ದಂತೆ ಭಕ್ತರ ಸಂಭ್ರಮ ಮುಗಿಲು ಮುಟ್ಟಿತು. ಜಾತ್ರೆಯ ಅಂಗವಾಗಿ ಲೋಕೇಶ್ವರ ದೇವಸ್ಥಾನ ವಿದ್ಯುತ್ ದೀಪಗಳಿಂದ ಕಂಗೊಳಿಸುತ್ತಿತ್ತು.

# ಶಾಂತಿನಿಕೇತನ ಶಾಲೆಯಲ್ಲಿ 7ನೇ ತರಗತಿ ವಿದ್ಯಾರ್ಥಿಗಳ ಬಿಳ್ಕೊಡುಗೆ ಕಾರ್ಯಕ್ರಮ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆಯ ಮಂಗಳೂರು ಗ್ರಾಮದ ಶ್ರೀ ಮಂಗಳೇಶ್ವರ ಶಿಕ್ಷಣ ಸಂಸ್ಥೆ(ರಿ) ಶಾಂತಿನಿಕೇತನ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 7ನೇ ತರಗತಿ ವಿದ್ಯಾರ್ಥಿಗಳ ಬಿಳ್ಕೊಡುಗೆ ಸಮಾರಂಭ ಹಾಗೂ ಸರಸ್ವತಿ ಪೂಜಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷರ ವೀಂದ್ರನಾಥ ಕೊಟ್ರಪ್ಪ ತೋಟದ, ಕಾರ್ಯದರ್ಶಿ ಮೇಘನಾ ರವೀಂದ್ರನಾಥ ತೋಟದ, ಮುಖ್ಯಗುರುಗಳು ದೇವಣ್ಣ ದೇಸಾಯಿ, ಶಿಕ್ಷಕರಾದ ಶರಣಪ್ಪ ಗೊಂಡಬಾಳ, ವಿರೇಶ ಕುಂಬಾರ, ಗಾಯತ್ರಿ ತೊಂಡಿಹಾಳ, ದೀಪಾ ಬಾರಕೇರ, ಶಾರದಾ ಕೆಂಚನಗೌಡ್ರ, ನಾಗರತ್ನ, ಫರ್ವಿನ್, ಆಯಾ ಮುದಕಮ್ಮ ಹಡಪದ, ಪಾಲಕರ ಪ್ರತಿನಿಧಿ ವಿರೇಶ ಉಮಚಗಿ, ನಾಗನಗೌಡ್ರ ಪೋಪಾಟೀಲ, ಮುದ್ದು ಮಕ್ಕಳು ಹಾಜರಿದ್ದರು.

# ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಿ–ಪಾಟೀಲ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.27– ಪಾಲಕರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣವನ್ನು ಕೊಡಿಸಲು ಮುಂದಾಗಬೇಕೆಂದು ಕಾಳಿದಾಸ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಜಿ.ಎಸ್.ಪಾಟೀಲ ಹೇಳಿದರು.




ನವನಗರದ ಕಾಳಿದಾಸ ಕಲ್ಯಾಣ ಮಂಟಪದಲ್ಲಿ ನಡೆದ ಕಾಳಿದಾಸ ಅಂತರಾಷ್ಟ್ರೀಯ ಪಬ್ಲಿಕ್ ಶಾಲೆಯಲ್ಲಿ ಕ್ರೀಡೆ ಮತ್ತು ಸಾಂಸ್ಕೃತಿಕ ಚಟುವಟಿಕೆಗಳ ಸ್ಪರ್ಧೆಯಲ್ಲಿ ಭಾಗವಹಿಸಿ ಜಯಿಸಿದ ವಿದ್ಯಾರ್ಥಿಗಳಿಗೆ ನಡೆದ ಪ್ರಶಸ್ತಿ ವಿತರಣಾ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಉತ್ತಮ ಶಿಕ್ಷಣದಿಂದ ವಿದ್ಯಾರ್ಥಿಗಳ ಭವಿಷ್ಯವನ್ನು ಉತ್ತಮವಾಗಿ ರೂಪಿಸಬಹುದು ಎಂದರು.


ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಕಾಳಿದಾಸ ಶಿಕ್ಷಣ ಸಂಸ್ಥೆಯ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಡಿ.ಬಿ.ಪೂಜಾರ ಮಾತನಾಡಿ, ಮೊದಲ ಪ್ರಯತ್ನದಲ್ಲೇ ಸಿಬಿಎಸ್ಇ ಮಾನ್ಯತೆ ಪಡೆಯುವುದು ಸುಲಭದ ಮಾತಲ್ಲ ಇದನ್ನು ನಮ್ಮ ಕಾಳಿದಾಸ ಪಬ್ಲಿಕ್ ಶಾಲೆ ಮಾಡಿ ತೋರಿಸಿದ್ದು ಇದಕ್ಕೆ ಸಂಸ್ಥೆಯ ಆಡಳಿತ ಮಂಡಳಿ, ಸಿಬ್ಬಂದಿಯ ಶ್ರಮವೇ ಕಾರಣ ಎಂದರು.

ಸಂಸ್ಥೆಯ ಕಾರ್ಯದರ್ಶಿ ಟಿ.ಬಿ.ಕುರುಬರ, ಸದಸ್ಯ ಡಿ.ಆರ್. ಮೇಟಿ, ಆಡಳಿತಾಧಿಕಾರಿ ಅನಿಲ್ ದೇಸಾಯಿ, ಹೈಸ್ಕೂಲ್ ವಿಭಾಗದ ಪ್ರಾಂಶುಪಾಲ ಎಂ.ಬಿ.ವಿರಕ್ತಿಮಠ, ಕಾಳಿದಾಸ ಪಬ್ಲಿಕ್ ಶಾಲೆಯ ಪ್ರಾಂಶುಪಾಲ ಮೇಲ್ವಿನ್ ಬ್ವಾಬಿ ಮರ್ಜಿ, ಶಿಕ್ಷಕರಾದ ಜ್ಯೋತಿ ದೇಸಾಯಿ, ಶ್ರೀಶೈಲ ಬೋಳರೆಡ್ಡಿ, ಪುಷ್ಪಾ, ಕಾಂಚನಾ, ಆಶಾ, ವಾಸಂತಿ, ತೇಜಶ್ರೀ, ಭವ್ಯ, ಸುರೇಖಾ, ವಿದ್ಯಾ, ಕವಿತಾ, ಸುಮಿತ್ರಾ, ಪೂಜಾ, ಸೀತಾರಾ, ಕೀರ್ತಿ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ವಿವಿಧ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಜಯಿಸಿದ ವಿದ್ಯಾರ್ಥಿಗಳಿಗೆ ಮುಖ್ಯ ಅತಿಥಿಗಳು ಪ್ರಶಸ್ತಿ ಪ್ರದಾನ ಮಾಡಿದರು.

# ಪ್ರತಿ ವರ್ಷ 20 ವಿದ್ಯಾರ್ಥಿಗಳಿಗೆ ಸಹಾಯ

## ಮೆಡಿಕಲ್ ಕಾಲೇಜಿನಲ್ಲಿ ಓದುವ ಬಡ ವಿದ್ಯಾರ್ಥಿಗಳಿಗೆ ನೆರವು



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.27–ನಗರದ ಬಿ.ವಿ.ವಿ.ಸಂಘದ ಮೆಡಿಕಲ್ ಕಾಲೇಜಿನಲ್ಲಿ ಓದುತ್ತಿರುವ ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳಿಗೆ ಪ್ರತಿವರ್ಷ ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳಿಗೆ ಅವರ ಶೈಕ್ಷಣಿಕ ಓದಿಗೆ ಅಗತ್ಯವಾದ ಎಲ್ಲ ನೆರವು ಒದಗಿಸಿ ಪ್ರೋತ್ಸಾಹಿಸಲಾಗುತ್ತಿದೆ ಎಂದು ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ ಹೇಳಿದರು.

ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಬೀಳೂರು ಗುರುಬಸವ ಉತ್ಸವ ಸಮಿತಿಯಿಂದ ಆರ್ಥಿಕವಾಗಿ ಹಿಂದುಳಿದ ಹಾಗು ಸರ್ಕಾರಿ ಕೋಟಾದಡಿಯಲ್ಲಿ ವ್ಯಾಸಾಂಗ ಮಾಡುತ್ತಿರುವ ಪ್ರಥಮ ವರ್ಷದ ಎಮ್.ಬಿ.ಬಿ.ಎಸ್. ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಪರಿಕರಗಳನ್ನು ತೆಗೆದುಕೊಳ್ಳಲು ಆರ್ಥಿಕ ನೆರವು ನೀಡುವ ಚೆಕ್‌ಗಳನ್ನು ವಿತರಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳ ಪ್ರತಿಭೆಯನ್ನು ಗುರುತಿಸಿ ಬೆಳೆಸಲು ಅಗತ್ಯವಾದ ಎಲ್ಲ ಪೂರಕವಾದ ವಾತಾವರಣವನ್ನು ಕಲ್ಪಿಸಲು ಬಿ.ವಿ.ವಿ ಸಂಘದ ಎಲ್ಲ ಶೈಕ್ಷಣಿಕ ಸಂಸ್ಥೆಗಳು ಶ್ರಮಿಸುತ್ತಿವೆ. ದೇಶದ ಸರ್ವತೋಮುಖ ಅಭಿವೃದ್ಧಿಯ ನಿರ್ಮಾಣದಲ್ಲಿ ವಿದ್ಯಾರ್ಥಿಗಳ ಪಾತ್ರ ಅತ್ಯಂತ ಮುಖ್ಯವಾಗಿದೆ. ಈ ದಿಸೆಯಲ್ಲಿ ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳಿಗೆ ಅವರ ವಿದ್ಯಾಭ್ಯಾಸಕ್ಕೆ ತಮಗೆ ಅಗತ್ಯವಾದ ಶೈಕ್ಷಣಿಕ ಸಾಮಗ್ರಿಗಳನ್ನು ತೆಗೆದುಕೊಳ್ಳಲು ಅನುಕೂಲವಾಗಲೆಂದು ಆರ್ಥಿಕ ನೆರವನ್ನು ನೀಡಲಾಗುತ್ತಿದೆ ಎಂದರು.

ಕಾಲೇಜಿನಲ್ಲಿ ಎಮ್.ಬಿ.ಬಿ.ಎಸ್ ವ್ಯಾಸಾಂಗ ಮಾಡುತ್ತಿರುವ ಪ್ರಥಮ ವರ್ಷದ 20 ವಿದ್ಯಾರ್ಥಿಗಳಿಗೆ ಬೀಳೂರು ಶ್ರೀ ಗುರುಬಸವ ಉತ್ಸವ ಸಮಿತಿಯಿಂದ ಚೆಕ್‌ಗಳನ್ನು ವಿತರಿಸಲಾಯಿತು. ಬೀಳೂರು ಶ್ರೀ ಗುರುಬಸವ ಉತ್ಸವ ಸಮಿತಿಯು ವೈದ್ಯಕೀಯ ಮಹಾವಿದ್ಯಾಲಯಕ್ಕೆ ನೀಡಿದ 4.20 ಲಕ್ಷ ರೂಪಾಯಿಗಳ ಒಟ್ಟಾರೆ ಹಣದಲ್ಲಿ, ಪ್ರತಿ ವಿದ್ಯಾರ್ಥಿಗೆ 21 ಸಾವಿರ ರೂಪಾಯಿಗಳಂತೆ ಶೈಕ್ಷಣಿಕ ಸಾಮಗ್ರಿಗಳನ್ನು ತೆಗೆದುಕೊಳ್ಳಲು ಚೆಕ್‌ಗಳನ್ನು ನೀಡಲಾಯಿತು.

ಕಾರ್ಯಕ್ರಮದಲ್ಲಿ ಬಿ.ವ್ಹಿ.ವ್ಹಿ ಸಂಘದ ಗೌರವ ಕಾರ್ಯದರ್ಶಿ ಮಹೇಶ ಎನ್. ಅಥಣಿ, ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಎಮ್.ಸಜ್ಜನ (ಬೇವೂರ), ಆಡಳಿತಾಧಿಕಾರಿ ವ್ಹಿ.ಆರ್.ಶಿರೋಳ, ಮೆಡಿಕಲ್ ಕಾಲೇಜಿನ ಪ್ರಾಚಾರ್ಯೆ ಡಾ.ಭುವನೇಶ್ವರಿ ಯಳಮಲಿ, ಅಧೀಕ್ಷಕ ಡಾ.ಶ್ರೀರಾಮ ಕೋರಾ, ಬೀಳೂರು ಶ್ರೀ ಗುರುಬಸವ ಉತ್ಸವ ಸಮಿತಿಯ ಕಾರ್ಯದರ್ಶಿ ಡಾ.ಅರುಣ ಹೂಲಿ ಮತ್ತು ಕಾಲೇಜಿನ ವಿವಿಧ ವಿಭಾಗದ ಮುಖ್ಯಸ್ಥರು ಬೋಧಕ ವೃಂದ ಉಪಸ್ಥಿತರಿದ್ದರು.

# ಅದ್ದೂರಿಯಾಗಿ ಜರುಗಿದ ಶ್ರೀ ವೀರಭದ್ರೇಶ್ವರ ಪಂಚಕಳಸ ಮಹಾ ರಥೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಕುಕನೂರು : ತಾಲೂಕಿನ ಮಂಡಲಗೇರಿ ಗ್ರಾಮದ ಶ್ರೀ ವೀರಭದ್ರೇಶ್ವರನ ಪಂಚ ಕಳಸ ಮಹಾರಥೋತ್ಸವ ಶುಕ್ರವಾರ ಸಾಯಂಕಾಲ 6.50ರ ಸುಮಾರಿಗೆ ನೆರೆದ ಸಹಸ್ರಾರು ಭಕ್ತಾಧಿಗಳ ಜಯ ಘೋಷದೊಂದಿಗೆ ಅದ್ದೂರಿಯಾಗಿ ಜರುಗಿತು.

ರಥೋತ್ಸವಕ್ಕೆ ಗ್ರಾಮದ ಸುತ್ತಮುತ್ತಲಿನ ಸಹಸ್ರಾರು ಭಕ್ತಾಧಿಗಳು ಆಗಮಿಸಿ, ವೀರಭದ್ರೇಶ್ವರನ ಮಹಾ ರಥೋತ್ಸವಕ್ಕೆ ಭಕ್ತರು ಉತ್ತತ್ತಿ, ಸಮರ್ಪಿಸಿ ಭಕ್ತಿ ಮೆರೆದರು. ಈ ಜಾತ್ರೋತ್ಸವದ ಸಾನಿಧ್ಯವನ್ನು ಶ್ರೀ ಶಿವಶರಣಯ್ಯ ಹಿರೇಮಠ ಮಂಡಲಗೇರಿಯ

ಸ್ವಾಮೀಜಿಗಳು ವಹಿಸಿದ್ದರು. ನಂತರ ಮಾತನಾಡಿ ಜಾತ್ರೆ ಉತ್ಸವಗಳೆಂದರೇ ಸರ್ವ ಸಮಾಜವನ್ನು ಒಂದುಗೂಡಿಸಿ ಭಾವೈಕ್ಯತೆಯಿಂದ ರಥೋತ್ಸವ ನೆರವೇರಿಸಿ ಬಂಧು, ಭಾಂದವರೊಂದಿಗೆ ಸಂಭ್ರಮ ಹಂಚಿಕೊಂಡು ಎಲ್ಲರೂ ಒಂದಾಗಿ ಬಾಳಲು, ಹಿಂದೆ ಹಿರಿಯರು ಹಾಕಿಕೊಟ್ಟ ಮಾರ್ಗವೇ ಈ ಜಾತ್ರೆ ಉತ್ಸವಗಳಾಗಿವೆ ಎಂದರು. ಶ್ರೀ ವೀರಭದ್ರೇಶ್ವರ ದೇವಸ್ಥಾನದ ಸೇವಾ ಸಮಿತಿಯ ಸರ್ವ ಪದಾಧಿಕಾರಿಗಳು ಗ್ರಾಮ ಪಂಚಾಯಿತಿಯ ಅಧ್ಯಕ್ಷರು ಉಪಾಧ್ಯಕ್ಷರು ಸರ್ವ ಸದಸ್ಯರು.

ಗ್ರಾಮದ ಗುರು ಹಿರಿಯರು ಯುವಕ ಮಿತ್ರರು ಸುತ್ತಮುತ್ತಲಿನ ಗ್ರಾಮದ ಸದ್ಭಕ್ತರು ಪಾಲ್ಗೊಂಡಿದ್ದರು.

# ಮಾ. 12ಕ್ಕೆ ಜಗದ್ಗುರು ಶ್ರೀ ರೇವಣ್ಣಸಿದ್ದೇಶ್ವರ ನೂತನ ರಥೋತ್ಸವ





> ಪಟ್ಟಣದ ಜಗದ್ಗುರು ಶ್ರೀ ರೇವಣ್ಣಸಿದ್ದೇಶ್ವರ ದೇವಸ್ಥಾನದಲ್ಲಿ ಮಾರ್ಚ್ 11ರವರೆಗೆ ಪ್ರತಿದಿನ ಸಂಜೆ 7 ರಿಂದ 9ರವರೆಗೆ ಮಾಡಿವಾಳಯ್ಯಾ ಶಾಸ್ತ್ರೀಗಳು ಜೇರಟಗಿ ಮತ್ತು ಅವರ ತಂಡದವರಿಂದ ಮಹಾ ದಾಸೋಹಿ ಶ್ರೀ ಶರಣಬಸವೇಶ್ವರರ ಮಹಾಪುರಾಣ ಜರುಗುತ್ತದೆ. ಮಾರ್ಚ್ 12ರಂದು ಸಂಜೆ 6.30ಕ್ಕೆ ಜಗದ್ಗುರು ಶ್ರೀ ರೇವಣ್ಣಸಿದ್ದೇಶ್ವರರ ನೂತನ ಮಹಾ ರಥೋತ್ಸವ ಜರುಗುತ್ತದೆ. ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ದೇವರ ದರ್ಶನ ಪಡೆದುಕೊಳ್ಳಿ.
>
> **–ವಿಜಯಕುಮಾರ್ ಬೊಮ್ಮಣಿ**
> **ಅಧ್ಯಕ್ಷರು**
> **ಜಗದ್ಗುರು ಶ್ರೀ ರೇವಣ್ಣಸಿದ್ಧೇಶ್ವರ ಟ್ರಸ್ಟ್ ಚಿಟಗುಪ್ಪ.**



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಪಟ್ಟಣದ ಕೋಡಂಬಲ್ ರಸ್ತೆ ಪಕ್ಕದಲ್ಲಿರುವ ಜಗದ್ಗುರು ಶ್ರೀ ರೇವಣ್ಣಸಿದ್ದೇಶ್ವರರ ದೇವಸ್ಥಾನದ ನೂತನ ರಥೋತ್ಸವದ ಉದ್ಘಾಟನೆ ಮಾರ್ಚ್ 12ರಂದು ಶ್ರೀ ಮದ್ ರಂಭಾಪುರಿ ಜಗದ್ಗುರುಗಳ ಸಾನಿಧ್ಯದಲ್ಲಿ ಜರುಗಲಿದೆ. ಮಾ.11ರವರೆಗೆ ಪ್ರತಿದಿನ ಸಂಜೆ 7ಘಂಟೆಯಿಂದ 9ಘಂಟೆವರೆಗೆ ಮಾಡಿವಾಳಯ್ಯಾ ಶಾಸ್ತ್ರಿಗಳು ಜೇರಟಗಿ ಮತ್ತು ಅವರ ತಂಡದವರಿಂದ ಮಹಾ ದಾಸೋಹಿ ಶ್ರೀ ಶರಣ ಬಸವೇಶ್ವರರ ಮಹಾಪುರಾಣ ಕಾರ್ಯಕ್ರಮ ಜರುಗಲಿವೆ. ಮಾರ್ಚ್ 2ರಂದು ಮಧ್ಯಾಹ್ನ 3ಕ್ಕೆ ಶ್ರೀ 1008 ಜಗದ್ಗುರು ಪ್ರಸನ್ನ ರೇಣುಕಾ ಡಾ.ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದರ ಭವ್ಯ ಅಡ್ಡಪಲ್ಲಕ್ಕಿ ಉತ್ಸವ ಪಟ್ಟಣದ ಶ್ರೀ ಗಣೇಶ ದೇವಸ್ಥಾನದಿಂದ ಜಗದ್ಗುರು ಶ್ರೀ ರೇವಣ್ಣಸಿದ್ದೇಶ್ವರ ದೇವಸ್ಥಾನದವರೆಗೆ ನಡೆಯಲಿದೆ. ರಾತ್ರಿ ಧರ್ಮ ಸಭೆ ಜರುಗಲಿದೆ. ಮಾರ್ಚ್ 12ರಂದು ಬೆಳಿಗ್ಗೆ ಜಗದ್ಗುರು ಶ್ರೀ ರೇವಣ್ಣಸಿದ್ದೇಶ್ವರನಿಗೆ ಮಹಾ ರುದ್ರಾಭಿಷೇಕ. ಸಂಜೆ 6 30ಕ್ಕೆ ನೂತನ ಮಹಾ ರಥೋತ್ಸವ ಜರುಗುತ್ತದೆ. ನಾಡಿನ ವಿವಿಧ ಮಠಾಧೀಶರು, ರಾಜಕೀಯ ಧುರೀಣರು ಭಾಗವಹಿಸಲಿದ್ದಾರೆ ಆದ ಕಾರಣ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಿ, ತನು, ಮನ, ಧನದಿಂದ ಸೇವೆ ಸಲ್ಲಿಸಿ ದೇವರ ಕೃಪೆಗೆ ಪಾತ್ರರಾಗಬೇಕೆಂದು ದೇವಸ್ಥಾನ ಟ್ರಸ್ಟ್ ನ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಪತ್ರಿಕಾ ಪ್ರಕಟಣೆಯ ಮೂಲಕ ಮನವಿ ಮಾಡಿದ್ದಾರೆ.

# ' ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಾಗುವ ದೌರ್ಜನ್ಯ ನಿಯಂತ್ರಣ ಕಾಯ್ದೆ ಕುರಿತು ಅರಿವು ಹೊಂದಿ, ಲೈಂಗಿಕ ದೌರ್ಜನ್ಯ ನಿಯಂತ್ರಣಕ್ಕೆ ನಿಗಾವಹಿಸಿ' ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ.



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಫೆ:27–ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ನಡೆಯುವ ಲೈಂಗಿಕ ಕಿರುಕುಳ ತಡೆ ಕಾಯಿದೆ– 2013ರ ಕುರಿತು ಅರಿವು ಮೂಡಿಸುವ ಜೊತೆಗೆ, ಪ್ರತಿಯೊಂದು ಇಲಾಖೆ ವ್ಯಾಪ್ತಿಯಲ್ಲಿ 300 ಕ್ಕೂ ಹೆಚ್ಚು ಆಂತರಿಕ ದೂರು ಸಮಿತಿಗಳನ್ನು ರಚಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಸುಶೀಲಾ.ಬಿ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ವಿವಿಧ ಸಮನ್ವಯ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಮಿಷನ್ ಶಕ್ತಿ ಯೋಜನೆ ಅಡಿ ಬೇಟಿ ಬಚಾವೋ ,ಬೇಟಿ ಪಡಾವೋ ಯೋಜನೆ ಹಾಗೂ ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ನಡೆಯುವ ಲೈಂಗಿಕ ಕಿರುಕುಳ ತಡೆ ಕಾಯ್ದೆ– 2013 ಹಾಗೂ ಆಂತರಿಕ ದೂರು ಸಮಿತಿ ಕುರಿತು ಎಲ್ಲಾ ಜಿಲ್ಲಾ ಮತ್ತು ತಾಲೂಕ ಮಟ್ಟದ ಅಧಿಕಾರಿಗಳಿಗೆ, ಸಿಬ್ಬಂದಿಗಳಿಗೆ ಏರ್ಪಡಿಸಲಾಗಿದ್ದ ಜಾಗೃತಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯ ಪ್ರತಿ ಇಲಾಖೆಯಲ್ಲಿ 10 ಅಥವಾ ಹತ್ತಕ್ಕಿಂತ ಹೆಚ್ಚು ಸಿಬ್ಬಂದಿ ಇರುವ ಕಚೇರಿಗಳಲ್ಲಿ ಆಂತರಿಕ ದೂರು ಸಮಿತಿಗಳನ್ನು ರಚಿಸಿ ಜಿಲ್ಲಾ ಮಟ್ಟದಲ್ಲಿಯೂ ಸಮಿತಿಯನ್ನು ರಚಿಸಲಾಗಿದೆ. ಮಹಿಳೆಯರಿಗೆ ಕೆಲಸದ ಸ್ಥಳದಲ್ಲಿ ರಕ್ಷಣೆ ಒದಗಿಸುವ ದಿಶೆಯಲ್ಲಿ ಈ ಸಮಿತಿಗಳನ್ನು ರಚಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಜಿಲ್ಲೆಯ ವಿವಿಧ ಇಲಾಖೆಗಳ ವ್ಯಾಪ್ತಿಯಲ್ಲಿ 300ಕ್ಕೂ ಹೆಚ್ಚು ಆಂತರಿಕ ದೂರು ಸಮಿತಿಗಳನ್ನು ರಚಿಸಲಾಗಿದೆ. ಮಹಿಳೆಯರಿಗೆ ರಕ್ಷಣೆ ಒದಗಿಸುವುದು ಕಾಯ್ದೆಯ ಮುಖ್ಯ ಉದ್ದೇಶವಾಗಿರುವುದರಿಂದ ದೂರು ಬಂದ ಸಂದರ್ಭದಲ್ಲಿ ಪಾರದರ್ಶಕವಾಗಿ ಪರಿಶೀಲನೆ ಆಗಬೇಕು. ಅದರಂತೆ ಸುಳ್ಳು ದೂರುಗಳ ಬಗ್ಗೆಯೂ ಗಂಭೀರವಾಗಿ ಪರಿಗಣಿಸಿ ತಪ್ಪಿತಸ್ಥರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲು ಮೇಲಾಧಿಕಾರಿಗಳಿಗೆ ಶಿಫಾರಸ್ಸು ಮಾಡುವಂತೆಯೂ ಅಧಿಕಾರಿಗಳಿಗೆ ಅವರು ತಿಳಿಸಿದರು.

ಸರ್ಕಾರದ ವಿವಿಧ ಇಲಾಖೆಗಳ ವ್ಯಾಪ್ತಿಯಲ್ಲಿ ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ ನಡೆಯದಂತೆ ನೋಡಿಕೊಳ್ಳಬೇಕು. ಮೇಲಾಧಿಕಾರಿಗಳಿಂದ ಕೆಳವರ್ಗದ ಸಿಬ್ಬಂದಿಗಳವರೆಗೆ ಪರಸ್ಪರ ಸಹಬಾಳ್ವೆಯೊಂದಿಗೆ ತಮ್ಮ ಕೆಲಸ ಕಾರ್ಯಗಳನ್ನು ನಿರ್ವಹಿಸಬೇಕು. ಲೈಂಗಿಕ ದೂರುಗಳು ಬಂದ ಸಂದರ್ಭದಲ್ಲಿ ಅಧಿಕಾರಿಗಳು ಕಾಲಕಾಲಕ್ಕೆ ಪರಿಶೀಲನೆ ನಡೆಸಿ ಸರಿಯಾಗಿ ಇತ್ಯರ್ಥ ಪಡಿಸುವಂತೆಯು ಅವರು ಸಲಹೆ ನೀಡಿದರು.

ಮುಖ್ಯ ಅತಿಥಿಗಳಾಗಿ ಮಾತನಾಡಿದ ಜಿಲ್ಲಾ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಶ್ರೀ ಮರಿಯಪ್ಪ ಅವರು, ಮಹಿಳಾ ಸುರಕ್ಷತಾ ಹಾಗೂ

ಲೈಂಗಿಕ ದೌರ್ಜನ್ಯ ತಡೆ ಕಾಯ್ದೆಗಳ ಬಗ್ಗೆ ಪ್ರತಿ ಮಹಿಳೆಯರಿಗೆ ಅರಿವು ಇರಬೇಕು. ಪುರುಷ ಪ್ರಧಾನ ಸಮಾಜದಲ್ಲಿ ತಮ್ಮನ್ನು ತಾವು ಸಂರಕ್ಷಿಸುವಂತಹ ಕಾಯ್ದೆಗಳ ಬಗ್ಗೆ ಜ್ಞಾನ ಹೊಂದಬೇಕು. ಮಹಿಳೆಯರು ಶೋಷಣೆಯ ವಸ್ತುಗಳಲ್ಲ ಎಂಬುದರ ಬಗ್ಗೆ ತಮ್ಮನ್ನು ತಾವು ಅರಿತುಕೊಂಡಾಗ ಮಾತ್ರ ದೌರ್ಜನ್ಯ ನಿಯಂತ್ರಣ ಸಾಧ್ಯ. ಮಹಿಳೆಯರು ದೌರ್ಜನ್ಯ ಮೆಟ್ಟಿ ನಿಲ್ಲಲು ಮಹಿಳಾ ಸುರಕ್ಷತಾ ಕಾನೂನುಗಳ ಬಗ್ಗೆ ಜ್ಞಾನ ಹೊಂದುವಂತೆ ಕರೆ ನೀಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಮಹೇಶ್ ಬಿರಾದಾರ್ ಅವರು ಸರ್ಕಾರವು ಮಹಿಳೆಯರಿಗೆ ಪ್ರತಿಯೊಂದು ಕ್ಷೇತ್ರದಲ್ಲಿ ಮುಂಚೂಣಿಗೆ ತರಲು ಅವಕಾಶ ಕಲ್ಪಿಸುತ್ತಿದ್ದು, ಮಹಿಳಾ ಸಬಲತೆಗೆ ಒತ್ತು ನೀಡುತ್ತಿದೆ. ಮಹಿಳಾ ಸುರಕ್ಷತಾ ಕಾಯ್ದೆಗಳು, ಪ್ರಸವ ಪೂರ್ವ ಭ್ರೂಣಲಿಂಗ ಪತ್ತೆ ನಿಷೇಧ ಕಾಯ್ದೆ ಸಹ ಜಾರಿಯಲ್ಲಿದೆ ಎಂದು ಹೇಳಿದರು.

ಸಂಪನ್ಮೂಲ ವ್ಯಕ್ತಿಗಳಾಗಿ ಕಲ್ಬುರ್ಗಿ, ಸಿದ್ದಾರ್ಥ ಕಾನೂನು ಪದವಿ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಎಸ್ ಚಂದ್ರಶೇಖರ್ ಅವರು ಮಾತನಾಡಿದರು.

ಕಾರ್ಯಾಗಾರದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ವೀರಣಗೌಡ ಅವರು, ಮಾನ್ಯ ಜಿಲ್ಲಾಧಿಕಾರಿಗಳ ನಿರ್ದೇಶನದ ಅನ್ವಯ ಜಿಲ್ಲಾ, ತಾಲೂಕ ಹಾಗೂ ಗ್ರಾಮ ಮಟ್ಟಗಳವರೆಗೆ ವಿವಿಧ ಇಲಾಖೆಗಳಲ್ಲಿ ಸುಮಾರು 314 ಕ್ಕೂ ಹೆಚ್ಚು ಆಂತರಿಕ ದೂರು ಸಮಿತಿಗಳನ್ನು ರಚಿಸಲಾಗಿದೆ. ಈ ದೂರು ಸಮಿತಿ ಕರ್ತವ್ಯಗಳ ಬಗ್ಗೆ ತಿಳಿಹೇಳಲು ಕಾರ್ಯಾಗಾರ ಏರ್ಪಡಿಸಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಶ್ರೀ ಧರ್ನೇಶ್.ಎಸ್, ಡಿ ಡಿ ಪಿ ಐ ಚನ್ನಬಸಪ್ಪ ಮುಧೋಳ, ಉಪಸ್ಥಿತರಿದ್ದರು. ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಪ್ರೇಮ್ ಮೂರ್ತಿ ವಂದಿಸಿದರು.

# ಹಕ್ಕಿಜ್ವರದ ಬಗ್ಗೆ ಭಯ ಬೇಡ ಎಚ್ಚರವಿರಲಿ: ಡಿ.ಸಿ.ಪ್ರಶಾಂತ್ ಕುಮಾರ್ ಮಿಶ್ರಾ



ಬಳ್ಳಾರಿ,ಫೆ.28–ರಾಜ್ಯದ ಕೆಲವು ಸ್ಥಳಗಳಲ್ಲಿ ವರದಿಯಾಗಿರುವ ಹಕ್ಕಿ ಜ್ವರ (ಬರ್ಡ್ ಫ್ಲೂ) ಪ್ರಕರಣದ ಹಿನ್ನಲೆಯಲ್ಲಿ ಜಿಲ್ಲೆಯಲ್ಲಿ ವ್ಯಾಪಕ ಮುಂಜಾಗ್ರತೆ ವಹಿಸಲಾಗಿದ್ದು, ಸಾರ್ವಜನಿಕರು ಯಾವುದೇ ಆತಂಕಕ್ಕೆ ಒಳಗಾಗಬೇಡಿ ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಪಶುಸಂಗೋಪನ ಇಲಾಖೆ, ಬಿಎಮ್‌ಆರ್‌ಸಿ, ಮಹಾನಗರ ಪಾಲಿಕೆ, ಜಿಲ್ಲಾ ಸರ್ವೇಕ್ಷಣಾ ಘಟಕ ಹಾಗೂ ಮಾಹಿತಿ ಶಿಕ್ಷಣ ಸಂವಹನ ವಿಭಾಗದ ಸಹಯೋಗದಲ್ಲಿ ಶುಕ್ರವಾರ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಆಯೋಜಿಸಿದ್ದ ಹಕ್ಕಿಜ್ವರ ಕುರಿತು ಸೇರಿದಂತೆ ಅಂತರ ಇಲಾಖೆ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹಕ್ಕಿ ಜ್ವರವು (ಹಕ್ಕಿಗಳಿಗೆ ಸಂಬಂಧಿಸಿದ) ವೈರಾಣುಗಳಿಂದ (ವೈರಸ್) ಉಂಟಾಗಿದ್ದು, ಸೋಂಕು ತಗುಲಿದ ಹಕ್ಕಿಗಳಿಂದಾಗುವ ವಿಸರ್ಜನೆ, ಶ್ವಾಸೋಚ್ಛ್ವಾಸ ಕ್ರಿಯೆ ಮತ್ತು ರಕ್ತದಿಂದ ಹರಡುತ್ತದೆ. ಸೋಂಕು ತಗುಲಿದ ಕೋಳಿ ಮರಿಗಳ ಪುಕ್ಕಗಳನ್ನು ತರಿಯುವ ಮತ್ತು ವಧೆಗೈಯುವ ಕಾರ್ಯಗಳಲ್ಲಿ ನಿರತರಾದ ವಯಸ್ಕರಲ್ಲಿ ಹೆಚ್ಚಾಗಿ ಈ ಸೋಂಕು ಸಂಭವಿಸುತ್ತದೆ ಎಂದರು.

ಸೋಂಕು ತಗಲಿದ ಅಥವಾ ಸಾಯುವ ಹಂತದಲ್ಲಿರುವ ಕೋಳಿಗಳಿರುವ ವಾತಾವರಣದಲ್ಲಿ ಕ್ರೀಡಾನಿರತರಾದ ಮಕ್ಕಳಿಗೂ ಈ ಸೋಂಕು ಹರಡುತ್ತದೆ. ಈ ಹಿನ್ನಲೆಯಲ್ಲಿ ಜನತೆಗೆ ಜಾಗೃತಿ ನೀಡುವ ಮೂಲಕ ಸೋಂಕು ಹರಡದಂತೆ ಕ್ರಮವಹಿಸಲು ಸೂಚಿಸಿದರು.

**ಮುನ್ನೆಚ್ಚರಿಕೆ ಕ್ರಮಗಳು:**

ಹಕ್ಕಿಗಳ ಅಸಹಜ ಸಾವು ಕಂಡಬಂದಲ್ಲಿ ತಕ್ಷಣ ಪಶು ಇಲಾಖೆಗೆ ತಿಳಿಸಬೇಕು. ವ್ಯಾದಿಗೊಳಗಾದ ಅಥವಾ ಆಕಸ್ಮಿಕವಾಗಿ ಮರಣ ಹೊಂದಿದ ಹಕ್ಕಿಗಳನ್ನು ಕೈಯಿಂದ ಮುಟ್ಟಬಾರದು.

ಮನೆಯಲ್ಲಿ ಸೋಂಕು ತಗುಲಿದ ಹಕ್ಕಿಗಳ ಪುಕ್ಕಗಳನ್ನು ತೆಗೆಯಬಾರದು, ಕೊಲ್ಲಬಾರದು ಅಥವಾ ಕೈಯಿಂದ ಮುಟ್ಟಬಾರದು.

ಮನೆಯಲ್ಲಿ ಸೋಂಕು ತಗುಲಿದ ಹಕ್ಕಿಗಳ ಪುಕ್ಕಗಳನ್ನು ತೆಗೆಯಬಾರದು ಅಥವಾ ಕೈಯಿಂದ ಮುಟ್ಟಬಾರದು.

ಹಕ್ಕಿಗಳು ವೈರಾಣು ಸೋಂಕನ್ನು ಹೊಂದಿರಬಹುದಾಗಿರುವುದರಿಂದ ಮಕ್ಕಳನ್ನು ಅಂತಹ ಹಕ್ಕಿಗಳನ್ನು ಸ್ಪರ್ಶ ಮಾಡುವುದಕ್ಕಾಗಲಿ ಅಥವಾ ಅವುಗಳೊಂದಿಗೆ ಆಟ ಆಡುವುದಕ್ಕಾಲಿ ಅಥವಾ ಸಾಗಿಸುವುದಕ್ಕಾಗಲಿ ಬಿಡಬಾರದು.

ಹಕ್ಕಿ ಜ್ವರ ತಲೆದೂರಿರುವ ಪ್ರದೇಶದಲ್ಲಿ ನೀವು ವಾಸಿಸುತ್ತಿರುವುವರಾದರೆ ಎಲ್ಲಿ ಜೀವಂತ ಹಕ್ಕಿಗಳನ್ನು ಮಾರುತ್ತಾರೋ ಅಥವಾ ಮಾಂಸಕ್ಕಾಗಿ ವಧಿಸುತ್ತಾರೋ ಅಂತಹ ಸ್ಥಳಗಳಿಗೆ ನೀವು ಹೋಗಬೇಡಿ ಕೋಳಿಗಳ ಯಾವುದೇ ವಿಸರ್ಜನೆಗಳನ್ನು ಗೊಬ್ಬರವನ್ನಾಗಿ ಉಪಯೋಗಿಸಬಾರದು.

*ಮುಂಜಾಗೃತಾ ಕ್ರಮ ಮಾಡಬೇಕಾಗಿರುವುದು:*

ಹಕ್ಕಿಗಳನ್ನು ಕೈಯಿಂದ ಮುಟ್ಟಿದ ನಂತರ ಕೈಗಳನ್ನು ಸಾಬೂನಿಂದ ಮತ್ತು ನೀರಿನಿಂದ ತೊಳೆದುಕೋಳ್ಳಬೇಕು.

ಕೋಳಿ ಮರಿಗಳನ್ನು ಕೈಗಳಿಂದ ಮುಟ್ಟುವಾಗ ಮೂಗು ಮತ್ತು ಬಾಯಿಗೆ ದಪ್ಪ ಬಟ್ಟೆಯ ಮುಸುಕು ಹಾಕಿಕೊಳ್ಳಿ. ಹಕ್ಕಿಗಳನ್ನು ಮುಟ್ಟಿದ ನಂತರ ಕೈಗಳಿಂದ ಕಣ್ಣು, ಮೂಗು ಅಥವಾ ಬಾಯಿಯನ್ನು ಉಜ್ಜಿಕೊಳ್ಳದಂತೆ ಎಚ್ಚರವಹಿಸಿ.

ಕೋಳಿ ಮಾಂಸ ಮತ್ತು ಮೊಟ್ಟೆಗಳನ್ನು ತಿನ್ನಲು ಚೆನ್ನಾಗಿ ಬೇಯಿಸಿ ಸೇವಿಸಬೇಕು.

ಮುಂಜಾಗೃತಾ ಕ್ರಮವಾಗಿ ಎಲ್ಲ ಕೋಳಿ ಸಾಕಾಣಿಕೆ ಫೌಲ್ಟ್ರಿಗಳಲ್ಲಿ ನಿಗಾವಹಿಸುವಂತೆ ಪಶು ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಕೋಳಿ ಸಾಕಾಣಿಕೆ ಫೌಲ್ಟ್ರಿಗಳಲ್ಲಿ ಕೆಲಸನಿರ್ವಹಿಸುವ ಕಾರ್ಮಿಕರಿಗೆ ವೈಯಕ್ತಿಕ ಕಾಳಜಿವಹಿಸುವ ಕುರಿತು ಜಾಗೃತಿ ನೀಡಲು ಅಗತ್ಯವೆನಿಸಿದಲ್ಲಿ ಚಿಕಿತ್ಸೆಗೆ ಯಾವುದೆ ಔಷಧಿಗಳ ಕೊರತೆಯಾಗದಂತೆ ಕ್ರಮವಹಿಸಲು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು. ಇದಕ್ಕಾಗಿ ಗ್ರಾಮ ಪಂಚಾಯಿತಿಗಳ ಸಹಕಾರ ಪಡೆಯುವಂತೆ ತಿಳಿಸಿದರು.

ಇದೇ ವೇಳೆ ಹಕ್ಕಿಜ್ವರದ ಜಾಗೃತಿ ಕುರಿತು ಭಿತ್ತಿಪತ್ರ ಬಿಡುಗಡೆ ಮಾಡಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ಯಲ್ಲಾ ರಮೇಶಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ ಎನ್.ಬಸರೆಡ್ಡಿ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಮರಿಯಂಬಿ ವಿ.ಕೆ, ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕ ಡಾ.ವಿನೋದಕುಮಾರ, ಬಿಮ್ಸ್ ಮೈಕ್ರೋಬಯಾಲಜಿ ವಿಭಾಗದ ಡಾ. ಕೃಷ್ಣ, ವೈದ್ಯಕೀಯ ಅಧಿಕ್ಷಕಿ ಡಾ.ಇಂದುಮತಿ, ಜಿಲ್ಲಾ ಮಲೇರಿಯ ನಿಯಂತ್ರಣಾಧಿಕಾರಿ ಡಾ.ಅಬ್ದುಲ್ಲಾ, ಉಪವಲಯ ಅರಣ್ಯಾಧಿಕಾರಿ ಸುನೀಲ್‌ಕುಮಾರ, ಪಶು ಇಲಾಖೆ ಸಹಾಯಕ ನಿರ್ದೇಶಕರಾದ ಡಾ.ಕೆ.ಆರ್ ಶ್ರೀನಿವಾಸ, ಡಾ.ವಲಿಭಾಷಾ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಸೇರಿದಂತೆ ತಾಲ್ಲೂಕು ಆರೋಗ್ಯಾಧಿಕಾರಿಗಳು, ವೈದ್ಯಾಧಿಕಾರಿಗಳು ಸರ್ವೇಕ್ಷಣಾ ವಿಭಾಗದ ಸಿಬ್ಬಂಧಿಯವರು ಇನ್ನಿತರರು ಉಪಸ್ಥಿತರಿದ್ದರು.

# ವಿಜ್ಞಾನದಿಂದ ವೈಯಕ್ತಿಕ ಅಭಿವೃದ್ಧಿ ಜೊತೆಗೆ ದೇಶದ ಅಭಿವೃದ್ಧಿ: ಜಿಲ್ಲಾ ಪಂಚಾಯತ್ ಸಿಇಒ ಮಹಮ್ಮದ್ ಹಾರಿಸ್ ಸುಮೇರ್




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.28–ವಿಜ್ಞಾನ ಮತ್ತು ತಂತ್ರಜ್ಞಾನ ನಮ್ಮ ಜೀವನದಲ್ಲಿ ಬಹಳ ಪ್ರಮುಖವಾದದ್ದು, ವಿದ್ಯಾರ್ಥಿಗಳು ದೈನಂದಿನ ಜೀವನದಲ್ಲಿ ಅಳವಡಿಸಿಕೊಂಡರೆ ದೇಶದ ಅಭಿವೃದ್ಧಿಯು ಹೊಂದುತ್ತದೆ ಎಂದು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರಿಸ್ ಸುಮೇರ್ ಅವರು ಹೇಳಿದರು.

ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ ಹಾಗೂ ಜಿಲ್ಲಾ ಪಂಚಾಯತ್ ಸಹಯೋಗದಲ್ಲಿ ಮೋಕಾದ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಶುಕ್ರವಾರ ಆಯೋಜಿಸಿದ್ದ ರಾಷ್ಟ್ರೀಯ ವಿಜ್ಞಾನ ದಿನಾಚರಣೆ 2025 ಕಾರ್ಯಕ್ರಮವನ್ನು ಸಿ.ವಿ.ರಾಮನ್ ರವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ದಿನನಿತ್ಯ ಜೀವನದಲ್ಲಿ ವಿಜ್ಞಾನದ ಮಹತ್ವವನ್ನು ಅರಿತು ಅನೇಕ ಮಹಾನ್ ವಿಜ್ಞಾನಿಗಳು ಸಾಧನೆಗೈದಿದ್ದಾರೆ. ನಾವು ಸಹ ನಮ್ಮ ದಿನನಿತ್ಯದ ಜೀವನದಲ್ಲಿ ವಿಜ್ಞಾನದ ಮಹತ್ವ ಅಳವಡಿಸಿಕೊಳ್ಳಬೇಕು ಎಂದರು.

ಕೃತಕಬುದ್ಧಿಮತ್ತೆ, ರೋಬೋಟಿಕ್ಸ್, ಸಾಮಾಜಿಕ ಜಾಲತಾಣಗಳಾದ ಯುಟ್ಯೂಬ್, ಇನ್‌ಸ್ಟಾಗ್ರಾಮ್‌ನಲ್ಲಿ ಸಿಗುವಂತಹ ವಿಜ್ಞಾನದ ಮಹತ್ವದ ಮಾಹಿತಿಗಳನ್ನು ಬಳಸಿಕೊಂಡು ಉತ್ತಮ ವಿದ್ಯಾಭ್ಯಾಸದ ಕಡೆ ಗಮನ ನೀಡಬೇಕು. ವಿಜ್ಞಾನದಿಂದ ವೈಯುಕ್ತಿಕ ಅಭಿವೃದ್ಧಿ ಅಲ್ಲದೆ ದೇಶದ ಅಭಿವೃದ್ಧಿಯು ಸಹ ಸಾಧ್ಯ ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು. ಕಾರ್ಯಕ್ರಮದಲ್ಲಿ ರಾಷ್ಟ್ರೀಯ ವಿಜ್ಞಾನ ದಿನದ ಅಂಗವಾಗಿ ಸರ್ಕಾರದ ಆದೇಶದಂತೆ ವಿಜ್ಞಾನ ಪ್ರತಿಜ್ಞಾ ವಿಧಿಯನ್ನು ಬೋಧಿಸಲಾಯಿತು.

ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕಿ ಬಿ.ಉಮಾದೇವಿ ಅವರು ಮಾತನಾಡಿ, ಪ್ರೌಢ ಹಂತದಿಂದಲೇ ವಿಜ್ಞಾನದ ಕಡೆಗೆ ಆಸಕ್ತಿ ತೋರಿಸಿ ವೈಜ್ಞಾನಿಕ ಮನೋಭಾವ ಬೆಳೆಸಿಕೊಂಡು ವಿದ್ಯಾಭ್ಯಾಸದ ಬಗ್ಗೆ ಹೆಚ್ಚಾಗಿ ಗಮನ ನೀಡಬೇಕು ಎಂದರು.

ಕರ್ನಾಟಕ ಪಬ್ಲಿಕ್ ಶಾಲೆಯ ಉಪ ಪ್ರಾಂಶುಪಾಲರಾದ ಜೆ.ಭಾರತಿ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಇಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳ ಜೀವನದಲ್ಲಿ ಬದಲಾವಣೆ ತರಲು ಹಾಗೂ ಆಸಕ್ತಿಕರ ವಿಷಯಗಳ ಬಗ್ಗೆ ತಿಳಿದುಕೊಳ್ಳಲು ಸಹಾಯಕವಾಗುತ್ತವೆ ಎಂದು ಹೇಳಿದರು. ಸಂಪನ್ಮೂಲ ವ್ಯಕ್ತಿಗಳಾದ ಎಚ್ ಪೀರ್ ಭಾಷಾ ಅವರು ಮಾತನಾಡಿ, ವಿಜ್ಞಾನ ತಂತ್ರಜ್ಞಾನ ಬದುಕನ್ನು ಹಸನಗೊಳಿಸುತ್ತದೆ. ತಂತ್ರಜ್ಞಾನವು ಕೃಷಿ ಆರೋಗ್ಯ ಮತ್ತು ವೈದ್ಯಕೀಯ ಕ್ಷೇತ್ರದ ಅಭಿವೃದ್ಧಿಗೆ ಸಹಾಯಕವಾಗಿದೆ. ವಿಜ್ಞಾನ ನಮ್ಮೆಲ್ಲರ ಜೀವನದಲ್ಲಿ ಬಹಳ ಪ್ರಾಮುಖ್ಯತೆಯನ್ನು ಪಡೆದಿದೆ ಹಾಗೂ ಸಿ.ವಿ.ರಾಮನ್ ಅವರ ಜೀವನ ಅವರ ಬಾಲ್ಯ ವಿದ್ಯಾಭ್ಯಾಸದ ಬಗ್ಗೆ ವಿವರವಾಗಿ ಪಿಪಿಟಿ ಮುಖಾಂತರ ತಿಳಿಸಿದರು.

ಮತ್ತೋರ್ವ ಸಂಪನ್ಮೂಲ ವ್ಯಕ್ತಿಗಳಾದ ಎಸ್.ಎಂ.ಹಿರೇಮಠ್ ಮಾತನಾಡಿ, ಸಿ.ವಿ ರಾಮನ್ ಅವರ ಜೀವನದಲ್ಲಿ ನಡೆದ ಘಟನೆಗಳನ್ನು ವಿದ್ಯಾರ್ಥಿಗಳಿಗೆ ತಿಳಿಸಿ ಅವರ ಆದರ್ಶ ಹಾಗೂ ಸಿದ್ಧಾಂತಗಳನ್ನು ವಿದ್ಯಾರ್ಥಿಗಳು ಅಳವಡಿಸಿಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಗಣಿತ ವಿಷಯದ ಪರಿವೀಕ್ಷಕರಾದ ಬಸವರಾಜ್, ನೋಡಲ್ ಅಧಿಕಾರಿಗಳಾದ ರಾಮಚಂದ್ರರೆಡ್ಡಿ.ಜಿ ಸೇರಿದಂತೆ ಶಾಲಾ ಶಿಕ್ಷಕರು, ಶಾಲಾ ವಿದ್ಯಾರ್ಥಿಗಳು ಇನ್ನಿತರರು ಉಪಸ್ಥಿತರಿದ್ದರು.

# ಜಲ ಜೀವನ್ ಮಿಷನ್ ಹಾಗೂ ಸ್ವಚ್ಛ ಭಾರತ್ ಮಿಷನ್ ಅರಿವು ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ.ಫೆ.28–ಜಲಜೀವನ್ ಮಿಷನ್ ಹಾಗೂ ಸ್ವಚ್ಛ ಭಾರತ್ ಮಿಷನ್ ಯೋಜನೆಗಳ ಕುರಿತು ಗ್ರಾಮೀಣ ಜನರಲ್ಲಿ ಅರಿವು ಮೂಡಿಸಲು ಸುರಭಿ ಸಂಸ್ಥೆಯ ಮೂಲಕ ವಿವಿಧ ಮಾಹಿತಿ, ಶಿಕ್ಷಣ ಮತ್ತು ಸಂವಹನ ಚಟುವಟಿಕೆ ಕಾರ್ಯಕ್ರಮವನ್ನು ಶುಕ್ರವಾರ ತಾಲ್ಲೂಕು ಪಂಚಾಯತಿ ಸಭಾಂಗಣದಲ್ಲಿ ನಡೆಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಪಂಚಾಯತಿ ಮುಖ್ಯ ಯೋಜನಾಧಿಕಾರಿಗಳಾದ ವಾಗೇಶ್ ಶಿವಾಚಾರ್ಯ ಅವರು ವಹಿಸಿಕೊಂಡಿದ್ದರು.

ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಮಡಗಿನ ಬಸಪ್ಪ, ರಾಜ್ಯ ಗ್ರಾಮೀಣಾ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸಂಪನ್ಮೂಲ ವ್ಯಕ್ತಿ ಡಾ.ಅಚಿತ್ ರಾವ್, ಮೈಸೂರಿನ ಎಸ್‌ಐಆರ್‌ಡಿ ಕೃಷ್ಣ ಕುಮಾರ್ ಅವರು ಸೇರಿದಂತೆ ಸಹಾಯಕ ಲೆಕ್ಕಾಧಿಕಾರಿಗಳು, ಪ್ರಭಾರೆ ಸಹಾಯಕ ನಿರ್ದೇಶಕರು(ಪಂ.ರಾಜ್), ಗಿಘಾಖಅ/ಗ್ರಾಮ ಪಂಚಾಯತಿ ಅಧ್ಯಕ್ಷರು, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ತಾಲ್ಲೂಕು ಪಂಚಾಯತಿ ಇತರೇ ಅಧಿಕಾರಿ/ಸಿಬ್ಬಂದಿಗಳು ಉಪಸ್ಥಿತರಿದ್ದರು.

# ವ್ಯಕ್ತಿ ನಾಪತ್ತೆ: ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.28–ನಗರದ ಶ್ರೀರಾಂಪುರ ಕಾಲೋನಿ, 3ನೇ ವಾರ್ಡ್ ಏರಿಯಾದ ನಿವಾಸಿ ಬಾಬು.ಬಿ ಎನ್ನುವ 25 ವರ್ಷದ ವ್ಯಕ್ತಿಯು ಫೆ.27 ರಂದು ಕಾಣೆಯಾಗಿದ್ದು, ಈ ಕುರಿತು ಬ್ರೂಸ್‌ಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಪೋಲಿಸ್ ಸಬ್ ಇನ್ಸ್‌ಪೆಕ್ಟರ್ ಅವರು ತಿಳಿಸಿದ್ದಾರೆ.

ಚಹರೆ ಗುರುತು:

ಅಂದಾಜು 5.2 ಅಡಿ ಎತ್ತರ, ಕೋಲುಮುಖ, ಕಪ್ಪು ಮೈಬಣ್ಣ, ತೆಳುವಾದ ಮೈಕಟ್ಟು, ಕಪ್ಪು ಕೂದಲು ಮತ್ತು ಮುಖದಲ್ಲಿ ಚಿಕ್ಕದಾಗಿ ಮೀಸೆ ಹಾಗೂ ಗಡ್ಡ ಹೊಂದಿರುತ್ತಾನೆ. ಕಾಣೆಯಾದ ಸಂದರ್ಭದಲ್ಲಿ ಹಳದಿ ಬಣ್ಣದ ಟೀ ಶರ್ಟ್ ಮತ್ತು ನೀಲಿ ಬಣ್ಣದ ಜೀನ್ಸ್ ಪ್ಯಾಂಟ್ ಧರಿಸಿರುತ್ತಾನೆ.

ವ್ಯಕ್ತಿಯ ಬಗ್ಗೆ ಸುಳಿವು ಸಿಕ್ಕಲ್ಲಿ ಬ್ರೂಸ್‌ಪೇಟೆ ಪೊಲೀಸ್ ಠಾಣೆಯ ದೂ.08392–272022 ಅಥವಾ ಪಿಐ ಮೊ.9480803045,9480803081 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾ.01 ರಂದು ವಿವಿಧ ಮಹನೀಯರ ಜಯಂತಿಯ ಪೂರ್ವಭಾವಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.28–ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಜಿಲ್ಲಾ ಕೇಂದ್ರದಲ್ಲಿ ಮಾ.12 ರಂದು ರೇಣುಕಾಚಾರ್ಯ, ಮಾ.14 ರಂದು ಯೋಗಿನಾರೇಯಣ ಯತೀಂದ್ರ ಜಯಂತಿ ಹಾಗೂ ಮಾ.28 ರಂದು ಅಗ್ನಿಬನ್ನಿರಾಯ ಜಯಂತಿ ಆಚರಣೆ ಕುರಿತು ಮಾ.01 ರಂದು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಏರ್ಪಡಿಸಲಾಗಿದೆ.

ಮಾ.01 ರಂದು ಮದ್ಯಾಹ್ನ 01 ಗಂಟೆಗೆ ರೇಣುಕಾಚಾರ್ಯ ಜಯಂತಿ, 01.15 ಗಂಟೆಗೆ ಯೋಗಿನಾರೇಯಣ ಯತೀಂದ್ರ ಜಯಂತಿ, 01.30 ಗಂಟೆಗೆ ಅಗ್ನಿಬನ್ನಿರಾಯ ಜಯಂತಿ ಆಚರಣೆ ಕುರಿತು ಪೂರ್ವಭಾವಿ ಸಭೆ ನಡೆಯಲಿದೆ.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು ಅಧ್ಯಕ್ಷತೆ ವಹಿಸುವರು.

ಸಭೆಗೆ ಸಮುದಾಯದ ಮುಖಂಡರು, ಜಿಲ್ಲಾ ಮಟ್ಟದ ಅಧಿಕಾರಿಗಳು ತಪ್ಪದೇ ಹಾಜರಾಗಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಅವರು ತಿಳಿಸಿದ್ದಾರೆ.

# ಮೆಡಿಕಲ್ ಕಾಲೇಜಿನ ಶಿವಾಲಯದಲ್ಲಿ ಮಹಾಶಿವರಾತ್ರಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.27–ನಗರದ ಬಿ.ವಿ.ವಿ.ಸಂಘದ ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಹಾನಗಲ್ಲ ಕುಮಾರೇಶ್ವರ ಆಸ್ಪತ್ರೆಯ ಆವರಣದಲ್ಲಿರುವ ಶಿವಾಲಯದಲ್ಲಿ ಮಹಾಶಿವರಾತ್ರಿ ನಿಮಿತ್ಯ ಬಿ.ವಿ.ವಿ.ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಸಿ. ಚರಂತಿಮಠ ಅವರು ಮಹಾಪೂಜೆ ನೆರವೇರಿಸಿದರು.

ಪರಮಾತ್ಮ ಸಕಲರಿಗೂ ಸನ್ಮಂಗಳವನ್ನುಂಟು ಮಾಡಲಿ ಮತ್ತು ನಾಡಿನಲ್ಲಿ ಶಾಂತಿ, ಸೌಹಾರ್ದತೆ ನೆಲೆಸಲೆಂದು ಇಂದು ಶಿವಾಲಯದಲ್ಲಿ ಮಹಾಪೂಜೆಯನ್ನು ನೆರವೇರಿಸಲಾಯಿತು. ಈ ದಿನ ಸಾವಿರಾರು ಭಕ್ತರು ಶಿವಾಲಯಕ್ಕೆ ಆಗಮಿಸಿ ಶಿವನ ದರ್ಶನ ಪಡೆದು ಪುನೀತರಾದರು.

ಕಳೆದ ಅನೇಕ ವರ್ಷಗಳಿಂದ ವೈದ್ಯಕೀಯ ಮಹಾವಿದ್ಯಾಲಯದ ಶಿವಾಲಯದಲ್ಲಿ ಪ್ರತಿ ಮಹಾಶಿವರಾತ್ರಿಯಂದು ಮಹಾಪೂಜೆ ಮತ್ತು ಸಂಗೀತ ಶಿವರಾತ್ರಿ ಕಾರ್ಯಕ್ರಮಗಳನ್ನು ನಡೆಸಿಕೊಂಡು ಹೋಗಲಾಗುತ್ತಿದೆ ಎಂದು ಹೇಳಿದರು.

ಮಹಾಶಿವರಾತ್ರಿ ನಿಮಿತ್ತ ಶಿವಾಲಯದಲ್ಲಿ ಶಿವನಮೂರ್ತಿಗೆ ಮಾಡಿದ ವಿಶೇಷ ಅಲಂಕಾರ ಕಣ್ಮನ ಸೆಳೆಯುವಂತಿತ್ತು. ನಗರದ ಸಾರ್ವಜನಿಕರು ಸರತಿ ಸಾಲಿನಲ್ಲಿ ಬಂದು ಶಿವನ ದರ್ಶನ ಪಡೆದರು.

ಶಿವಾಲಯದಲ್ಲಿ ನಡೆದ ಮಹಾಪೂಜೆಯ ಸಂದರ್ಭದಲ್ಲಿ ಬಿ.ವಿ.ವಿ ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ, ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಎಮ್. ಸಜ್ಜನ (ಬೇವೂರ), ಸಂಘದ ಸದಸ್ಯರಾದ ಮಹೇಶ ಅಂಗಡಿ, ರಾಜು ಪಾಟೀಲ, ಕುಮಾರ ಜಿಗಜಿನ್ನಿ, ಮೆಡಿಕಲ್ ಕಾಲೇಜ್ ಪ್ರಾಚಾರ್ಯೆ ಡಾ. ಭುವನೇಶ್ವರಿ ಯಳಮಲಿ, ವೈದ್ಯಕೀಯ ಅಧೀಕ್ಷಕ ಡಾ.ಶ್ರೀರಾಮ ಕೋರಾ, ಕಾಲೇಜಿನ ವಿವಿಧ ವಿಭಾಗದ ಮುಖ್ಯಸ್ಥರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ಶ್ರೀಲಂಕಾ ಪ್ರವಾಸಕ್ಕೆ ತೆರಳಿದ್ದ ಇಂಜಿನಿಯರ್ ಸಾವು

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಫೆ.20:ಶ್ರೀಲಂಕಾ ಪ್ರವಾಸಕ್ಕೆ ತೆರಳಿದ್ದ ಜಿಲ್ಲೆಯ ಜೇವರ್ಗಿ ಮೂಲದ ಸಾಫ್ಟ್‌ವೇರ್ ಇಂಜಿನಿಯರ್ ಈಜು ಕೊಳದಲ್ಲಿ ತಲೆಗೆ ಪೆಟ್ಟು ಬಡಿದು ಸಾವನ್ನಪ್ಪಿದ ಘಟನೆ ನಡೆದಿದೆ.

ಜೇವರ್ಗಿ ತಾಲ್ಲೂಕಿನ ಕಲ್ಲೂರ್ (ಕೆ) ಗ್ರಾಮದ ಸಂತೋಷ್ ಮಲ್ಲೆದ್ (34)



ಹೀಗೆ ದುರಂತ ಸಾವಿಗೆ ತುತ್ತಾದ ಇಂಜಿನಿಯರ್ ಎಂದು ತಿಳಿದುಬಂದಿದೆ.

# ಮಾ.02 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.28–ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–1 ರ ವ್ಯಾಪ್ತಿಯ 220/110/11ಕೆ.ವಿ ಅಲ್ಲಿಪುರ ವಿದ್ಯುತ್ ಉಪ–ಕೇಂದ್ರದಲ್ಲಿ ವಿದ್ಯುತ್ ತುರ್ತು ನಿರ್ವಹಣೆ ಕಾರ್ಯ ಕೈಗೊಳ್ಳುತ್ತಿರುವುರಿಂದ ಮಾ.02 ರಂದು ಬೆಳಿಗ್ಗೆ 09 ಗಂಟೆಯಿಂದ ಸಂಜೆ 05 ಗಂಟೆಯವರೆಗೆ ಎಫ್–72 ಫೀಡರ್ ಮಾರ್ಗದ ಸೂರ್ಯ ಕಾಲೋನಿ, ರಹಿಮಬಾದ್ ಕಾಲೋನಿ, ನಂದಿ ಕಾಲೋನಿ, ಹೆಚ್.ಆರ್.ಜಿ ಕಾಲೋನಿ ಸೇರಿದಂತೆ ಮುಂತಾದ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ವಿದ್ಯುತ್ ಗ್ರಾಹಕರು ಮತ್ತು ಸಾರ್ವಜನಿಕರು ಸಹಕರಿಸಬೇಕು ಎಂದು ನಗರ ಉಪ–ವಿಭಾಗ–1 ಜೆಸ್ಕಾಂನ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭಕ್ತರ ಕಲ್ಪತರು ಮಂತ್ರಮಹರ್ಷಿ ಗುರೂಜಿ

ಕಲ್ಯಾಣ ನಾಡಿನ ಬೀದರ ಜಿಲ್ಲೆಯ ಪುಟ್ಟ ಗ್ರಾಮ ಔರಾದ (ಸಿರ್ಸಿ ).

ಶಂಭುಲಿಂಗ ಅಜ್ಜನವರು ಓಡಾಡಿದನೆನಪಿನ ಹೆಜ್ಜೆಯತಾಣ ಪವಿತ್ರ ಸ್ಥಾನ ಔರಾದ ಹಳ್ಳಿ.

ಕಾರಣ ಪವಾಡ ಪುರುಷ ಶಂಭುಲಿಂಗಅಜ್ಜನವರವಾಸಸ್ಥಳ ರೇಕುಳಗಿ ಗ್ರಾಮದಿಂದ ಔರಾದ ಸುಮಾರು 3ಕಿಲೋಮೀಟರ ಅಂತರವಿದ್ದು ಅಜ್ಜನವರು ಅವಾಗವಾಗ ಊರಿಗೆ ಬಂದು ಭಕ್ತರ ಮನೆಯಲ್ಲಿ ವಾಸಮಾಡಿ ತಮ್ಮ ದರುಶನ ನೀಡುತ್ತಿದ್ದರು. ಹೀಗಾಗಿ ಗ್ರಾಮದ ಜನರಲ್ಲಿ ಅಜ್ಜನವರ ಬಗ್ಗೆ ಪೂಜ್ಯ ಭಾವನೆ ಹಾಗು ಅವರ ದರುಶನದ ಫಲದಿಂದ ಸಮಸ್ಯೆಗಳಿಗೆ ಪರಿಹಾರ ಕೊಡುವ ಆರಾಧ್ಯ ಧೈವರಾಗಿದ್ದು ಶಂಭುಲಿಂಗಪ್ಪ ನೆಂದರೆ ಗ್ರಾಮಸ್ಥರಿಗೆ ಅಪರಭಕ್ತಿ ಇಂತ ಭಕ್ತಸಮೂಹದ ಕೆಲ ಮನೆತನದಲ್ಲಿ ಮಲ್ಲರೆಡ್ಡಿಯವರ ಮನೆತನ ಕೂಡ ವಂದು.

**ವ್ಯಕ್ತಿ ವಿಶೇಷತೆ**

ಮಲ್ಲರೆಡ್ಡಿ ಔರಾದ ಗ್ರಾಮದ ರೆಡ್ಡಿ ಮನೆತನದ ಪ್ರಮುಖರು. ಸುಂಸ್ಕೃತ ಮನೆತನದ ಇವರು ಆಚಾರ ವಿಚಾರದಲ್ಲಿ ತುಂಬಾ ಸಾತ್ವಿಕ ಸ್ವಭಾವದ ಸಂಸ್ಕಾರವನ್ನುಳ್ಳ ನಡತೆಯ ಸರಳವಂತಿಕೆಯಿಂದಾಗಿ ಊರಲ್ಲಿ ಎಲ್ಲರ ಗೌರವಕ್ಕೆ ಪಾತ್ರರಾಗಿದ್ದು ಎಲ್ಲರಿಗೂ ಬೇಕಾದ ವ್ಯಕ್ತಿಯಾಗಿದ್ದರು.

ಇವರಿಗೆ ಈರಮ್ಮ ಎನ್ನುವ ಮಗಳು ಕೂಡ ಅಷ್ಟೇ ಅಪ್ಪ ಅಮ್ಮನ ಸಂಸ್ಕಾರದಿಂದ ಗುಣವಂತೆಯಾಗಿಬೆಳೆದರು. ಇವರು ಬೆಳೆದು ದೊಡ್ಡವರಾದಂತೆ ಮಗಳ ಮದುವೆ ಮಾಡುವ ಚಿಂತೆಯಲ್ಲಿ ಮಲ್ಲರೆಡ್ಡಿವರು ಮಗಳಿಗೆ ತಕ್ಕ ವರ ಹುಡುಕಲು ಶುರು ಹಚ್ಚಿಕೊಂಡರು.

**ಈರಮ್ಮಳ ವಿವಾಹ**

ಹೀಗೆ ಮಲ್ಲರೆಡ್ಡಿಯವರು ಮಗಳ ಮದುವೆ ಮಾಡಲು ಹಲವು ಕಡೆ ವರಾನ್ವೇಷಣೆಯಲ್ಲಿ ತೊಡಗಿದ ಸಂಧರ್ಭದಲ್ಲಿ ಚಿಪ್ಪಿನಲ್ಲಿರುವ ಮುತ್ತಿನಂತಿರುವ ಮಗಳಿಗೆ ತಕ್ಕ ವರ ಸಿಕ್ಕೆಬಿಟ್ಟಿತು.

ಮುಂದೆ ಕಲ್ಬುರ್ಗಿ ಜಿಲ್ಲೆಯ ಚಿಂಚೋಳಿ ತಾಲೂಕು ಸುಲೇಪೇಟ ಗ್ರಾಮದ ರೆಡ್ಡಿ ಮನೆತನದ ಕುವರನಾದ ಭೀಮರೆಡ್ಡಿಯವರ ಜೊತೆ ಮಗಳ ವಿವಾಹವನ್ನು ಬಲು ವಿಜೃಂಭಣೆಯಿಂದ ಮಾಡಿ ಮುಗಿಸಿ ಬಹಳ ಮಲ್ಲರೆಡ್ಡಿ ಹಾಗು ಅವರ ಕುಟುಂಬದವರು ಬಹಳ ಸಂತೋಷಗೊಂಡರು.

ಹೀಗೆ ದಿನಗಳು ಕಳೆದಂತೆ ಸುಲೇಪೇಟ ಗ್ರಾಮದಲ್ಲಿ ನೀರಿನ ಪ್ರಭಾವದಿಂದ ಊರಲ್ಲಿ ನಾರುರೋಗ ಹರಡಿತು. ಇತ್ತ ಮಲ್ಲರೆಡ್ಡಿಯವರು ರೋಗ ಹರಾಡುವಿಕೆ ಸುದ್ದಿ ಕೇಳಿ ಚಿಂತಾಕ್ರತರಾದರು.

ಒಂದು ದಿನ ಅಳಿಯನವರಾದ ಭೀಮರೆಡ್ಡಿಯವರಿಗೆ ತಮ್ಮ ಊರಲ್ಲಿ ನಾರುರೋಗ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು ನಮ್ಮನ್ನು ಚಿಂತೆ–ಗೀಡು ಮಾಡಿದೆ ಆದಕಾರಣ ತಾವು ನಮ್ಮಲ್ಲಿಯೇ ಉಳಿದು ಹೊಲದಲ್ಲಿ ಉಳಿಮೆ ಮಾಡಿ ಉಪಜೀವನ ಮಾಡಬಹುದಲ್ಲಾ ವೆಂದು ಸಲಹೆ ನೀಡಿದರು. ಭೀಮರೆಡ್ಡಿಯವರು ಕೂಡ ಸ್ವಲ್ಪ ಯೋಚನೆ ಮಾಡಿ ತಂದೆ ಹಾಗು ತಾಯಿಯವರ ಜೊತೆ ಸಮಾಲೋಚನೆ ಮಾಡಿ ಔರಾದ ಊರಿಗೆ ಬಂದು ನೆಲಸಿದರು.

ಭೀಮರೆಡ್ಡಿಯವರ ಬಗ್ಗೆ ಹೇಳಬೇಕಾದರೆ ಸರಳ ನಿಷ್ಠಾವಂತ ಕಾಯಕ ಜೀವಿಗಳು ಊರಲ್ಲಿ ಎಲ್ಲರೊಡನೆ ಬೆರೆಯುವ ನಯವಿನಯದಿಂದ ಕೂಡಿದ ವ್ಯಕ್ತಿಯಾಗಿದ್ದು ದೇವರ ಬಗ್ಗೆ ಭಕ್ತಿಯುಳ್ಳವಾರಗಿದ್ದು ತುಳಜಾಪುರ ಭವಾನಿ ಮಾತೆಯನ್ನು ಆರಾಧಿಸುವರು.

ಮುಂದೆ ಅವರ ಮಾವನ ಆತ್ಮೀಯ ಗೆಳೆಯರಾದ ಗುಂಡುಭಟ್ಟ ಜೋಷಿಯವರ ಪರಿಚಯವಾಗಿ ಅವರ ಅನುಭಾವದ ನುಡಿಗಳು ದೇವರ ಮೇಲಿನ ಭಕ್ತಿಯ ಪರಕಾಷ್ಟೆಯ ಫಲವಾಗಿ ಹಾಗು ಮೇಲಿಂದ ಮೇಲೆ ಇಬ್ಬರೂ ತಮ್ಮ ಕಷ್ಟ –ಸುಖಗಳನ್ನು ವಿಚಾರ ವಿನಿಮಯ ಮಾಡಿಕೊಳ್ಳುವ ಜೊತೆಗೆ ಅವರ ಗೆಳೆತನ ಘಾಡವಾಯಿತಲ್ಲದೆ ಜೋಷಿಯವರು ಒಂದು ಹೆಜ್ಜೆ ಮುಂದುಹೋಗಿ ಅವರ ಹೊಲವನ್ನು ಕೂಡ ಉಳಿಮೆ ಮಾಡಲು ಭೀಮರೆಡ್ಡಿಯವರಿಗೆ ಒಪ್ಪಿಸಿದರು.

ಭೀಮರೆಡ್ಡಿಯವರು ಕೂಡ ಅಷ್ಟೇ ಅವರು ಇಟ್ಟ ನಂಬಿಕೆಯನ್ನು ಅವರು ಶಿರಸಾವಹಿಸಿ ಪಾಲಿಸಿದರು.

ತನ್ನ ಪಾಲಿನ ಪಾಲನ್ನು ತೆಗೆದುಕೊಂಡು ಉಳಿದಿದ್ದನು ಅತ್ಯಂತ ಪ್ರಾಮಾಣಿಕತೆಯಿಂದ ಜೋಶಿಯವರಿಗೆ ಒಪ್ಪಿಸುತ್ತಿದ್ದರು. ಇವರ ಪ್ರಾಮಾಣಿಕತೆಯನ್ನು ಕಂಡು ಊರಿನ ರೇವಣ್ಣಪ್ಪಾ ಹಾಗು ನೇಮಿನಾಥ ಬೋಗಾರ ಇನ್ನೂ ಹಲವರು ತಮ್ಮ ಭೂಮಿಯನ್ನು ಉಳಿಮೆ ಮಾಡಲು ಇವರಿಗೆ ಕಡ್ತಿ ಕೊಟ್ಟರು.

ಭೀಮರೆಡ್ಡಿಯವರು ಕೂಡ ಪಾಲುದಾರರು ಇಟ್ಟ ವಿಶ್ವಾಸಕ್ಕೆ ಚ್ಯುತಿ ತರದೆ ನಿಷ್ಠಾವಂತರಾಗಿ ತಮ್ಮ ಕಾಯಕ ನಿಷ್ಠೇಯನ್ನು ತಮ್ಮ ಗರಿಮೆಯನ್ನಾಗಿಸಿ ಊರ ಗೌರವವುಳ್ಳ ವ್ಯಕ್ತಿ ಎನಿಸಿಕೊಂಡರು.

ಹೀಗೆ ತನ್ನ ಹೊಲದ ಜೊತೆ ಜೊತೆಗೆ ಪಾಲಿನ ಹೊಲವನ್ನು ಉಳಿಮೆ ಮಾಡುತ್ತ ಸುಮಾರು ವರುಷಗಳೇ ಕಳೆದು ಹೋದವು.

ಆ ಸಮಯದಲ್ಲಿ ಸರ್ಕಾರದ ಆದೇಶದಂತೆ ಉಳುವವನೆ ಭೂಮಿ ವಡೆಯ ಕಾನೂನಿನಂತೆ ಅಂದಿನ ತಶೀಲ್ದಾರರು ಪಾಲು ಹಾಕಿಕೊಂಡ ಭೂಮಿಯನ್ನು ಇವರಿಗೆ ಹಸ್ತಾಂತರಿಸಲು ಬಂದಾಗ ""ಛಲ ಬೇಕು ಶರಣರಿಗೆ ಪರರ ಧನ, ಪರರ ಆಸ್ತಿ ವಲ್ಲೆನೆಂಬ ""ಎನ್ನುವ ಶರಣರ ನುಡಿಯನ್ನು ನಡೆಯಾಗಿಸಿದ ಭೀಮರೆಡ್ಡಿಯವರು ಹೀಗೆ ಹೇಳುವರು.

""ನಾನೇನು ಪುಕ್ಕಟೆ ಉಳಿಮೆ ಮಾಡಿಲ್ಲ

ನನ್ನ ಪಾಲನ್ನು ನಾನು ತೆ–ಗೆದುಕೊಂಡು ಉಳಿದಿದನ್ನು ಹೊಲದ ವಡೆಯರಿಗೆ ಒಪ್ಪಿಸಿದ್ದೇನೆ.ಆ ಭೂಮಿಯ ಮೇಲೆ ಭೂಮಾಲೀಕರ ಅಧಿಕಾರ ಹೊರತು ನನ್ನದಲ್ಲವೆಂದು ಅನಾಯಸವಾಗಿ ತನಗೆ ಬರುವ ಆಸ್ತಿಯನ್ನು ನಯವಾಗಿ ನಿರಾಕರಿಸಿದ್ದು ಅವರ ದೊಡ್ಡತನಕ್ಕೆ ಹಿಡಿದ ಕೈಗನ್ನಡಿ ಎನ್ನಬಹುದು.

**ಜಗದೊಧಾರಕ ಧರೆಗಿಳಿದ**

ಜೀವನದ ಮುಖ್ಯ ಉದ್ದೇಶವೇ ದೇವರನ್ನು ಕಾಣುವದು. ಆ ನಿಟ್ಟಿನಲ್ಲಿ, ನಮ್ಮ ಬದುಕನ್ನು ಅರಳಿಸಲು ಅಧ್ಯಾತ್ಮ ಅತ್ಯಂತ ಜರೂರಿಯಾಗಿದೆ.

ಆತ್ಮದ ಅರಿವು ಅರಿಯಬೇಕಾದರೆ ಗುರು ಲಿಂಗ ಜಂಗಮರನ್ನು ನೆನೆದು ಸಾಧನೆ ಛಲದಲ್ಲಿ ಮುಂದು ವರೆಯಬೇಕು, ಅದಕ್ಕಾಗಿ ಭಕ್ತಿ ನಿಷ್ಠೆ ಗಟ್ಟಿಯಾಗಿದ್ದರೆ ಮಾತ್ರ ಆತ್ಮದ ಅರಿವು ಅರಿಯಲು ಸಾಧ್ಯವಾಗುತ್ತದೆ.

ಹೀಗೆ ಭೀಮರೆಡ್ಡಿ ದಂಪತಿಗಳು ತಮ್ಮ ಸಂಸಾರದ ಸಾಗರ ಜೊತೆ ಜೊತೆಗೆ ಕಾಯಕ ನಿಷ್ಠೆ ಹಾಗು ದೇವರ ಬಗ್ಗೆ ಅಪಾರ ಭಕ್ತಿಯ ಕಾರಣಕ್ಕಾಗಿ ಸಾಕ್ಷಾತ್ ಭಗವಂತನೆ ಇವರ ಉದರದ ಮೂಲಕ ಜಗವನ್ನು ಉದ್ದಾರ ಮಾಡಲು ಧರೆಗಿಳಿದರಬಹುದು ಎನ್ನುವದು ನನ್ನ ಭಾವನೆ.

ಹೀಗೆ ದಂಪತಿಗಳು ಒಂದು ದಿನ ಹೊಲದಲ್ಲಿ ದಣಿವಾರಿಸಿಕೊಳ್ಳಲು ವಿಶ್ರಾಂತಿ ತೆಗುದುಕೊಂಡ ಸಂಧರ್ಭದಲ್ಲಿ ಶಿವನು ಬಂದು ನಿಮ್ಮ "ಉದರದಲ್ಲಿ ಜಗ ಬೆಳಗುವ ಮಗ ಹುಟ್ಟುತ್ತಾನೆ""

ಎಂದು ಕನಸಿನಲ್ಲಿ ಹೇಳಿದಂತೆ ಭಸಾವಾಯಿತು. ದಂಪತಿಗಳು ಕನಸು ನನಸಾಗಲೆಂದು ಮನೆಗೆ ಬಂದು ತುಪ್ಪದ ಜ್ಯೋತಿಯನ್ನು ಬೆಳಗಿ ಗುರು ಶಂಭುಲಿಂಗನನ್ನು ಪೂಜಿಸಿ ಪ್ರಾರ್ಥನೆ ಗೈದರು.

ಆ ಶುಭ ಗಳಿಗೆ ಬಂದೆ ಬಿಟ್ಟಿತು.

1947ರ ನವೆಂಬರ್ 1 ರೋಹಿಣಿ ನಕ್ಷತ್ರದಲ್ಲಿ ತೇಜೋ ಮುಖದ ಮಗನು ಭೀಮರೆಡ್ಡಿ ದಂಪತಿಗಳಿಗೆ ಜನಸಿದನು ಜನಸಿದನು.

ಭೀಮರೆಡ್ಡಿಯವರು ಮಗನ ನಾಮಕರಣವನ್ನು ಊರಿಗೆ ಊಟ ಕೊಡವ ಮೂಲಕ ಬಹು ವಿಜೃಂಭಣೆಯಿಂದ ನೆರವೇರಿಸಿದರು.



ಮಗನಿಗೆ ನಾರಾಯಣವೆಂದು ಹೆಸರಿಟ್ಟು ಬರ ಬರುತ್ತಾ ನರಸಪ್ಪ, ನರಸಾರೆಡ್ಡಿ ಎಂದು ಎಲ್ಲರೂ ಕರೆಯುವ ಕಾರಣ ನರಸಾರೆಡ್ಡಿ ಎನ್ನುವದೇ ರೂಢಿಯಾಯಿತು.

ಯಾವ ಭೂಮಿಯಲ್ಲಿ ಎಂಥ ಚಿನ್ನದ ಚಿಪ್ಪೋ,

ಯಾವ ಸಾಗರದಲ್ಲಿ ಎಂಥ ಬೆಲೆ ಬಾಳುವ ಮುತ್ತೋ,

ಯಾವ ಮನೆಯಲ್ಲಿ ಎಂಥ ಶಿವನ ಪ್ರತಿರೂಪವೋ ಬಲ್ಲವರಾರು, ಎಲ್ಲವೂ ದೈವಿ ಕ್ರಪೆ ಎನ್ನುವಂತೆ ಈ ಧರೆಯನ್ನು ಪಾವನಗೈಯಲು ಬಂದ ಶಿವನ ಪ್ರತಿರೂಪವೆ ನರಸಡ್ಡಿ ಎನ್ನಬಹುದು.

**ನಡೆದಾಡುವ ದೇವರು**

ನರಸರೆಡ್ಡಿ ಬಾಲ್ಯದಿಂದಲೇ ಬಲು ತುಂಟ. ಒಂದು ಕ್ಷಣ ಒಂದು ಕಡೆ ಕೂಡದೆ ಸದಾ ಯಾವುದಾದರೂ ಆಟ ಆಡುವದರಲ್ಲಿ ತಲ್ಲಿನನಾಗಿರುತಿದ್ದ.

ಹಾಗೆ ಬೆಳೆಯುತ್ತ ಸಾಗಿದ ನರಸರೆಡ್ಡಿ ಒಂದೊಂದು ಸಲ ಹಸಿವು ನೀರಡಿಕೆ ಪರಿವೆ ಇಲ್ಲದೆ ಧ್ಯಾನದಲ್ಲಿ ಕುಳಿತು ಬಿಡುವ ಹುಡುಗ.

ಭೀಮರೆಡ್ಡಿಯವರಿಗೆ ಸಾದು ಸಂತರೆಂದರೆ ಬಲು ಪ್ರೀತಿ. ಹೀಗಾಗಿ ಅವರ ಮನೆಗೆ ಯಾವಾಗಲು ಸಾಧುಗಳು ಮಹಾತ್ಮರು ಬಂದು ಆತಿಥ್ಯವನ್ನು ಸ್ವೀಕರಿಸಿ ಆಶೀರ್ವಾದ ನೀಡಿ ಹೋಗುತ್ತಿದ್ದರು.ಹೀಗಾಗಿ ನರಸರೆಡ್ಡಿಯವರ ಅಧ್ಯಾತ್ಮ ಕಡೆ ವಲವು ಹೆಚ್ಚಾಗಲು ಸಾಧು ಮಹಾತ್ಮರ ಆಶೀರ್ವಾದ ಕೂಡ ಕಾರಣವಾಯಿತು.

ಸಾಧು ಮಹಾತ್ಮರು ಕೂಡ ಇವರ ಮೇಲೆ ದ್ರಷ್ಟಿ ಬೀರಿ "ನಿಮ್ಮ ಮಗನ ಭವಿಷ್ಯ ಉಜ್ವಲವಿದ್ದು ಸಾಕ್ಷಾತ್ ಪರಮ ಅವತಾರಿ""ಎಂದು ಹರಸಿದರು.

ಮಹಾತ್ಮರ ನುಡಿ ಸುಳ್ಳಾಗಿಸದೆ ಮಗ ನರಸರೆಡ್ಡಿಯವರು ನಡೆದು ಸತ್ಯವಾಗಿಸುವ ಕಡೆ ಹೆಜ್ಜೆ ಇಟ್ಟರು.

ನರಸರೆಡ್ಡಿಯವರನ್ನು ಒಂದರ್ಥದಲ್ಲಿ ಕಲ್ಯಾಣ ಕರ್ನಾಟಕ ಭಾಗದ ನಡೆದಾಡುವ ದೇವರೆನ್ನಬಹುದು.

ನರಸರೆಡ್ಡಿಯವರಿಗೆ ಓದಿನಲ್ಲಿ ಅಷ್ಟಕಷ್ಟೆ ಆಸಕ್ತಿ ತಂದೆ ತಾಯಿಯವರ ಒತ್ತಾಸೆಗೆ ಮಣಿದು ಹಾಗು ಹೀಗೂ ಒಂಬತ್ತನೆ ತರಗತಿವರೆಗೂ ಓದನ್ನು ಮುಗಿಸಿದರು.

ಮುಂದೆ ನರಸರೆಡ್ಡಿಯವರು ಕೃಷಿ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡರು.

ಹೀಗೆ ದಿನಗಳು ಕಳೆದಂತೆ ಅವರ ಆಧ್ಯಾತ್ಮಿಕತೆ ಕಡೆ ಅವರ ವಲವು ಹೆಚ್ಚಾಯಿತು.

ಬರಬರುತ್ತಾ ಹೊಲದಲ್ಲೇ ಧ್ಯಾನ, ಜಪತಪ,ಮಾಡಲಾರಂಭಿಸಿದರು.

ಜೊತೆ ಜೊತೆಗೆ ಹೊಲದ ಸುತ್ತಲಿನಲ್ಲಿ ಇರುವ ಜನರನ್ನು ಕುಳ್ಳರಿಸಿ ಭಗವಂತನ ಲೀಲೆ ಹಾಗು ಜೀವನದ ಸತ್ಯ, ದೈವತ್ವ, ಕಾಯಕ ನಿಷ್ಠೆಯ ಬಗ್ಗೆ ಪ್ರವಚನ ಭೋದಿಸಲು ಪ್ರಾರಂಭ ಮಾಡಿದರು.

ಈ ವಿಷಯದ ಬಗ್ಗೆ ಊರಲೆಲ್ಲ ಚರ್ಚೆಯಾಯಿತು.

ಊರಿನ ಜನರು ಕೂಡ ಇವರಲ್ಲಿಗೆ ಬಂದು ತಮ್ಮ ಕಷ್ಟಸುಖಗಳನ್ನು ಹೇಳಿಕೊಂಡು ಸಮಸ್ಯೆಗೆ ಪರಿಹಾರ ಕೊಂಡುಕೊಳ್ಳಲು ಪ್ರಾರಭಿಸಿದರು.

ಹೀಗೆ ಒಂದು ದಿನ ಹೊಲದಿಂದ ಅಣತಿ ಅಂತರದಲ್ಲಿರುವ ನದಿ ದಂಡೆಯಲ್ಲಿ ಸ್ನಾನ ಮಾಡಿ ಹೊರಗಡೆ ಬರುವಾಗ ಅವರ ದಿವ್ಯ ದ್ರಷ್ಟಿ 3ಕಿ.ಮೀ. ಅಂತರದಲ್ಲಿರುವ ಶಂಭುಲಿಂಗಪ್ಪನವರ ಸನ್ನಿದಿ ಮೇಲೆ ಬಿತ್ತು. ಅವಾಗ ಅವರ ಅಂತರ ಜ್ಯೋತಿ ಪ್ರಜ್ವಲಿಸಿ ನರಸರೆಡ್ಡಿಯವರ ಹೃದಯ ಜ್ಯೋತಿಯಲ್ಲಿ ಶಂಭುಲಿಂಗಪ್ಪನವರ ಆತ್ಮಜ್ಯೋತಿ ಪ್ರತಿಷ್ಠಾಪನೆಯಾಯಿತು.

**ರಾಜಸ್ಥಾನಕ್ಕೆ ಶ್ರೀಗಳ ಪಯಣ.**

ನರಸರೆಡ್ಡಿಯವರು ಸದಾ ಧ್ಯಾನಸ್ತರಾಗಿರುವದು ಏಕಾಂಗಿಯಾಗಿರುವದು, ಯಾರ ಜೊತೆ ಬೆರೆಯದೆ ಶಿವಧ್ಯಾನದಲ್ಲಿ ತೊಡಗಿರುತ್ತಿದ್ದರು.

ಒಂದು ದಿನ ಇದ್ದಕಿದ್ದಂತೆ ಯಾರಿಗೂ ಹೇಳದೆ ಊರನ್ನು ತೊರೆದು ಬಹೂ ದೂರವಿರುವ ಹೊರ ರಾಜ್ಯವಾದ ರಾಜಸ್ತಾನದ ಬಾಪಾಪುರ್ ಗ್ರಾಮಕ್ಕೆ ಆಗಮಿಸಿ ಅಲ್ಲಿರುವ ಶಿವ ಮಂದಿರದಲ್ಲಿ ಧ್ಯಾನ, ಜಪ, ತಪಗಳಲ್ಲಿ ತೆ–ೂಡಗಿ ಅಲ್ಲಿನ ಜನರಿಗೆ ಅಧ್ಯಾತ್ಮ ಬೋಧನೆ ಮಾಡುತ್ತಲೆ ಮಂತ್ರ ಮಹರ್ಷಿ ಗುರೂಜಿಯಾಗಿ ಅಪಾರ ಭಕ್ತರ ಮನದಲ್ಲಿ ನೆಲೆಯೂರಿದರು.

ಹೀಗೆ ಕೆಲವು ತಿಂಗಳಗಳು ಕಳೆದ ಮೇಲೆ ಮತ್ತೆ ಗುರುಗಳಿಗೆ ತಮ್ಮ ಊರಿನ ನೆನಪಾಗಿ ಊರಿಗೆ ಹಿಂದುರಿಗಿದರು.

ಇತ್ತ ಮಗನಬರುವಿಕೆಗಾಗಿ ಕಾಯಿದು ಕುಳಿತ ಭೀಮರೆಡ್ಡಿ ಹಾಗು ಅವರ ತಾಯಿಗೆ ಮಗನನ್ನು ಕಂಡ ತಕ್ಷಣ ಅಪ್ಪಿಕೊಂಡು ಆನಂದಭಾಷ್ಪವನ್ನು ಸುರಿಸಿದರು.

**ಗುರೂಜಿ ಮದುವೆ**

ಇತ್ತ ಭೀಮರೆಡ್ಡಿಯವರು ಮಗನಿಗೆ ಹೀಗೆ ಬಿಟ್ಟರೆ ಜಪ ಧ್ಯಾನ ಎನ್ನುತ್ತಾ ಏಕಾಂಗಿಯಾಗಿ ಓಡಾಡವನೆಂದು ಯೋಚನೆ ಮಾಡಿ ಮಗನ ಮದುವೆ ಮಾಡಿದರೆ ಸರಿ ಹೋಗತ್ತನೆಂದು ತಿಳಿದು ಮಗನಿಗಾಗಿ ಕನ್ಯೆ ಹುಡುಕತೊಡಗಿದರು.

ಹೀಗೆ ಪಕ್ಕದ ಸಂಬಂಧಿಕರ ಪರಿಚಯದ ಮೇರೆಗೆ ಕಲ್ಬುರ್ಗಿ ಜಿಲ್ಲೆಯ ಕಮಲಾಪುರ್ ಹತ್ತಿರದ ಕಲ್ಮೋಢ ಗ್ರಾಮದ ಕಮಲ ಎನ್ನುವವರ ಜೊತೆ 1972ರಲ್ಲಿ ಗುರೂಜಿಯವರ ವಿವಾಹ ನೆರವೇರಿಸಿದರು.

ಕಾಲ ಉರಳ ತೊಡಗಿತು, ಪ್ರಾರಂಭದಲ್ಲಿ ಕಮಲಾರವರಿಗೆ ಗುರೂಜಿಯವರ ನಡೆ ಸ್ವಭಾವ ವಿಚಿತ್ರ ಎನಿಸಿದರೂ ಪತಿಯೇ ದೇವರೆಂದು ನಂಬಿದ ಅವರು ಹಾಗೆ ಅನುಸರಿಸಿಕೊಂಡು ಅತ್ತೆ–ಮಾವನಿಗೆ ವಿಧೇಯರಾಗಿ, ಪತಿ ಗುರುಜಿಯವರ ಜೊತೆ ಸಂಸಾರದ ನೊಗ ಹೊತ್ತು ಸಾಗಿದರು.

ವರುಷಗಳ ಕಳೆದ ತರುವಾಯ ಗುರೂಜಿ ದಂಪತಿಗಳಿಗೆ ಗಂಡು ಮಗು ಹುಟ್ಟಿತು. ಮಗುವಿನ ಹೆಸರು ಸಂತೋಷವೆಂದು ನಾಮಕರಣ ಮಾಡಿದರು.

**ಗುರೂಜಿ ಉದ್ಯೋಗ**

ತಂದೆ ಭೀಮರೆಡ್ಡಿವರಿಗೆ ವಯಸ್ಸಾಗುತ್ತಾ ಬಂತು. ಹೀಗಿರುವಾಗ ಶ್ರೀ ಗುರೂಜಿಯವರಿಗೆ ನೀರಾವರಿ ಇಲಾಖೆ ಅಧಿಕಾರಿಗಳಾದ ಶ್ರೀ ಜಿ. ಆರ್. ಹುಯಿಲಗೋಳ ಅವರ ಸಹಾಯದಿಂದ ನೀರು ಸರಬರಾಜು ಮಾಡುವ ಇಲಾಖೆಯಲ್ಲಿ ನಿರೀಕ್ಷಣ ಅಧಿಕಾರಿಗಳಾಗಿ ಕೆಲವು ದಿವಸ ಧಾರವಾಡ, ಕಲ್ಬುರ್ಗಿ,ಬೀದರನಲ್ಲಿ ಸರಕಾರಿ ಕಾರ್ಯ ನಿರ್ವಹಿಸುವ ಜೊತೆ ಜೊತೆಗೆ ಗುರೂಜಿಯವರ ಆದ್ಯಾತ್ಮಿಕ ವ್ಯಕ್ತಿತ್ವದ ಪರಿಚಯ ಕೂಡ ಇವರ ಸಹೋದ್ಯೋಗಿಗಳಿಗೆ ಆಗುತ್ತ ಹೋಯಿತು. ಗುರೂಜಿಯವರ ಒಂದೊಂದು ವಾಣಿಗಳು ನಿಜವಾಗುವದನ್ನು ಕಂಡು ಎಲ್ಲರು ಅವರನ್ನು ಭಕ್ತಿ ಭಾವದಿಂದ ಕೊಂಡಾಡ ತೊಡಗಿದರು.

ಒಂದು ವೇಳೆ ಅವರು ಕಚೇರಿಗೆ ಗೈರಾದರು ಕೂಡ ಅವರಿಗೆ ಯಾರು ವಿಚಾರಿಸುವ ಗೋಜಿಗೆ ಹೋಗುತ್ತಿರಲಿಲ್ಲ.

**ಪವಾಡ ಪುರುಷ ಗುರೂಜಿ**

ಹೀಗೆ ದಿನಗಳು ಉರುಳಿದಂತೆ ಪೂಜ್ಯ ಗುರೂಜಿಯವರು ತಮ್ಮ ಪವಾಡ ಹಾಗು ತಪಸ್ಸು ಸಿದ್ದಿಯ ಫಲವಾಗಿ ರಾಜ್ಯ ಹಾಗು ರಾಷ್ಟ್ರದ್ಯಂತ ಪ್ರಸಿದ್ಧರಾಗುತ್ತಾ ಹೋದರು.

ಅಪಾರ ಭಕ್ತರು ತಮ್ಮ ಸಮಸ್ಯಗಳನ್ನು ಹೊತ್ತು ಪೂಜ್ಯ ಗುರುಗಳ ಸನ್ನಿಧಿಗೆ ಬಂದು ಅಶ್ರಿವಾದ ಪಡೆದು ಪುನೀತರಾಗುತ್ತಿದ್ದರು.

ಯಾವುದೇ ಕಾವಿ,ಆಡಂಬರ ಉಡಿಗೆತೊಡದ ಗುರೂಜಿಯವರು ಶುಭ್ರ ಬಿಳಿ ಬಟ್ಟೆ ಉಡುವವರು.

ಮಠ–ಮಂದಿರಗಳನ್ನು ಕಟ್ಟದೆ ಭಕ್ತರ ಮನಸು ಗೆದ್ದವರು.

ಬಡವ–ಬಲ್ಲಿದ ಭೇದವ ತೋರದೆ, ಹಿರಿಯ–ಕಿರಿಯ ತಾರತಮ್ಯ ಮಾಡದೆ ಎಲ್ಲರನ್ನೂ ಸಮನಾಗಿ ಕಾಣುವ ಶ್ರೀಗಳು.

ಸುಮಾರು 194ಕ್ಕಿಂತ ಹೆಚ್ಚು ಪುಣ್ಯಸ್ಥಳಗಳಲ್ಲಿ ತಪಸ್ಸು ಮಾಡಿ ಶ್ರೀಗಳು ಬೀದರ ಜಿಲ್ಲೆಯ ನಡೆದಾಡುವ ದೇವರೆಂದರೆ ಹೆಮ್ಮೆಯ ವಿಷಯ.

ಅದೆ ರೀತಿ ಅನೇಕ ರಾಜಕೀಯ ಗಣ್ಯರು ಬಂದು ಇವರಿಂದ ಆಶೀರ್ವಾದ ಪಡೆದು ತಮ್ಮ ರಾಜಕೀಯ ಜೀವನದಲ್ಲಿ ಉತ್ತುಂಗದ ಸ್ಥಾನಕ್ಕೆ ಏರಿರಿವದು ಗುರೂಜಿಯವರು ಶಂಭುಲಿಂಗಪ್ಪನ ಅವತಾರಿ ಎನ್ನಬಹುದು.

1)ಮಾಜಿ ರಾಷ್ಟಪತಿ ಪ್ರಣವ್ ಮುಖರ್ಜಿ, 2)ಶ್ರೀ ಹರಿಕೃಷ್ಣ ಶಾಸ್ತ್ರೀ 3)ಶ್ರೀ ಸಿದ್ದರಾಮಯ್ಯ (ಮಾಜಿ ಮುಖ್ಯ ಮಂತ್ರಿ ) 4) ರಾಜೀವ ಗಾಂಧಿ 5)ಶ್ರೀಮತಿ ಮೋಟಮ್ಮ 6)ಶ್ರೀ ಶ್ರೀ ರಾಮಲು 7)ಪಿ. ಜಿ. ಆರ್. ಸಿಂಧ್ಯ 8) ಜಿ. ಪರಮೇಶ್ವರ 9)ಟಿ. ಎನ್. ಚತುರ್ವೇದಿ(ಮಾಜಿ ರಾಜ್ಯಪಾಲರು) 10)ವಿ. ಸೋಮಣ್ಣ 11)ಮನಮೋಹನ್ ಸಿಂಗ. 12)ಪ್ರತಿಭಾ ಪಾಟೀಲ 13)ಸೋನಿಯಾ ಗಾಂಧಿ 14)ಬಿ. ಎಸ್. ಯಡಿಯೂರಪ್ಪ(ಮುಖ್ಯ ಮಂತ್ರಿಗಳು) 15)ಧರ್ಮಸಿಂಗ್ 16)ರಾಜೇಶ್ ಖನ್ನ (ಸಿನಿಮಾ ನಟ) 17)ಮನೋಜ್ ಕುಮಾರ್ (ಸಿನಿಮಾ ನಟ )ಅಲ್ಲದೆ ಅನೇಕ ದಿಗ್ಗಜರು ಶ್ರೀಗುರೂಜಿಯವರನ್ನು ಸಂದರ್ಶಿಸಲು ಬಂದಿರುವದು ಗುರೂಜಿಯವರು ಇಲ್ಲಿ ಅವತಾರ ಎತ್ತಿರುವದು ಬೀದರ ನೆಲದ ಪುಣ್ಯ.

ಗುರೂಜಿಯವರು ಗುಜುರಾತ್, ವಾರಾಣಸಿ, ಪಾಂಡಿಚೇರಿ,ರಮೇಶ್ವರ್, ಮಧ್ಯಪ್ರದೇಶ ಮುಂತಾದ ಪುಣ್ಯ ಕ್ಷೇತ್ರಗಳಲ್ಲಿ ತಪಸ್ಸನು ಗೈದ ಶ್ರೀಗಳು ಎಲ್ಲಡೆ ಅಪಾರ ಭಕ್ತಗಣವನ್ನು ಹೊಂದಿದ್ದು ವರ್ಷಕೊಮ್ಮೆ ಶ್ರಾವಣಮಾಸದ ಜೋಕಮಾರ ಪೂರ್ಣಿಮೆಗೆ ತಮ್ಮ ಗ್ರಾಮವಾದ ಔರಾದ(ಸಿರ್ಸಿ)ಯಿಂದ ರೇಖುಳಗಿ ಶಂಭುಲಿಂಗೇಶ್ವರ ದೇವಸ್ಥಾನದವರೆಗೂ ಪಾದಯಾತ್ರೆ ಆರಂಭಿಸುತ್ತಾರೆ.

ಮೊದಲಿಗೆ ಇವರ ಪಾದಯಾತೆ–ಗೆ ಬೆರಳಣಿಕೆ ಭಕ್ತರು ಮಾತ್ರ ಇವರ ಜೊತೆ ಪಾದಯಾತ್ರೆ ಗೈಯುತ್ತಿದ್ದರು.

ಬರಬರುತ್ತಾ ಪಾದ ಯಾತ್ರೆ ಮಾಡುವ ಭಕ್ತಗಣ ಹೆಚ್ಚುತ್ತಲೇ ಹೋಯಿತು. ಹೀಗೆ ಜಿಲ್ಲೆ ಹಾಗು ಹೊರ ರಾಜ್ಯದ ಭಕ್ತರು ಕೂಡ ಪಾದಯಾತ್ರೆಯಲ್ಲಿ ಭಾಗವಹಿಸಿ ಪುನೀತರಾಗುತ್ತಿರುವರು.


ಪಾದಯಾತ್ರೆ ನೋಡುವದೇ ಒಂದು ರೀತಿ ಹಬ್ಬದಂತೆ

ಕಾರುಗಳ ಸಾಲು, ಒಂದು ಕಡೆ ಹೆಣ್ಣುಮಕ್ಕಳು, ಮತ್ತೊಂದು ಕಡೆ ಗಂಡು ಮಕ್ಕಳ ಸಾಲು, ದಾರಿಯಲ್ಲಿ ಕೆಲವು ಭಕ್ತರಿಂದ ಚಹಾ,ನೀರು ಪ್ರಾಸದ ವೆವಸ್ಥೆ ಹೀಗೆ ತಮ್ಮ ಇಚನುಸಾರ ಸೇವೆಗೈಯುತ್ತಾರೆ.

ಹೀಗೆ ಮನ್ನಾಯೆಖೇಳ್ಳಿ, ನೀಡವಂಚ,ಬೊಂಬುಳ್ಗಿ ಕೊನೆಗೆ ರೆಕುಳಗಿ ಶಂಭುಲಿಂಗಪ್ಪನ ಸನ್ನಿದಿಗೆ ಬಂದು ಭಕ್ತರು ಪ್ರಸಾದ ಸ್ವೀಕಾರ ಮಾಡಿ ಪುನೀತರಾಗುವರು.

{ಶ್ರೀ ಗಳ ಬಗ್ಗೆ ಪೂರ್ಣ ಲೇಖನವನ್ನು ಡಾ. ಎಂ. ಜಿ. ದೇಶಪಾಂಡೆಯವರು ""ಮಂತ್ರ ಮಹರ್ಷಿ ಶ್ರೀ} {ಸದ್ಗುರುಜಿ ""ಲೇಖನದಲ್ಲಿ ಪರಿಚಯಿಸಿರುವರು.}

ವಾರಾಣಸಿಯ ಶ್ರೀ ಪರಮಹಂಸ ಸಂಸ್ಕೃತ ಮಹಾವಿದ್ಯಾಲಯದ ವತಿಯಿಂದ ಗೌರವ ಪಾತ್ರಕ್ಕೆ ಸನ್ಮಾನವಾದ ಗುರೂಜಿಯವರು ಈಗಲೂ ನಿರಂತರ ತಪಸ್ಸಿನ ದಾರಿಯಲ್ಲಿದ್ದು, ಗುರುಗಳ ಶ್ರೀ ರಕ್ಷೆ ನಾಡಿನ ಭಕ್ತರ ಮೇಲೆ ಸದಾ ಇರಲೆಂದು ನನ್ನ ಬರಹವನ್ನು ಶ್ರೀ ಗುರೂಜಿಯವರ ಚರಣಕ್ಕೆ ಅರ್ಪಿಸುತ್ತೇನೆ.



**ಓಂಕಾರ ಪಾಟೀಲ**
**(ಕಾರ್ಯದರ್ಶಿ :**
**–ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ ಬೀದರ)**

# ರಾಷ್ಟ್ರೀಯ ವಿಜ್ಞಾನ ದಿನ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ನಾರಾಯಣಪುರು : ನಾನು ಭಾರತೀಯ ಸಂವಿಧಾನದ 51 ೦ (೧) ವಿಧಿಯ ಅನ್ವಯ ವೈಜ್ಞಾನಿಕಮನೋಭಾವನೆಮತ್ತುವೈಚಾರಿಕತೆಯನ್ನು ಬೆಳೆಸಿಕೊಳ್ಳುತ್ತೇನೆ.

ನಾನು ಪ್ರಶ್ನೆ ಮಾಡದೇ ಯಾವುದೇ ತರ್ಕ ಒಪ್ಪುವುದಿಲ್ಲ ಹಾಗೂ ಸಂವಿಧಾನದ ಮೂಲಭೂತ ಕರ್ತವ್ಯದ ಆಶಯದಂತೆ ಮೌಢ್ಯತೆ ಮತ್ತು ಅಂಧಕಾರವನ್ನು ನಿರ್ಮೂಲನೆ ಮಾಡಿ ಜೀವ ಜಗತ್ತಿಗೆ ಪೂರಕವಾದ ಬದುಕನ್ನು ರೂಪಿಸಿಕೊಳ್ಳುತ್ತೇನೆಂದು ಈ ಮೂಲಕ 'ರಾಷ್ಟ್ರೀಯ ವಿಜ್ಞಾನ ದಿನ'ದಂದು ಪ್ರತಿಜ್ಞೆ ಮಾಡುತ್ತೇನೆ. ಎಂದು ರಾಷ್ಟ್ರೀಯ ವಿಜ್ಞಾನ ದಿನ ನಾರಾಯಣಪುರ ಕೃಷ್ಣ ಭಾಗ ಜಲ ನಿಗಮ ಅಧಿಕಾರಿಗಳು ಪ್ರತಿಜ್ಞಾ ವಿಧಿಯನ್ನು ಮಾಡಿದರು

ಇದೆ ಸಂದರ್ಭದಲ್ಲಿ ಅಡಮ ಶಫಿ ರಿಜಿಸ್ಟರ್ , ಆದಪ್ಪ ಮ್ಯಾನೇಜರ್, ಮಹೇಶ್ವರಿ. ಕೆ. ಪತ್ತಾರ್, ಸ್ಟೇನೋಗ್ರೋಪರ್ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರು ಇದ್ದರು.

# ಉಚಿತ ಆರೋಗ್ಯ ಶಿಬಿರ ಉದ್ಘಾಟನಾ ಸಮಾರಂಭದಲ್ಲಿ ನಾವದಗಿ ಶ್ರೀ ಡಾ.ಪ್ರಭುಗೌಡ ಲಿಂಗದಳ್ಳಿ ಅವರ ವೈದ್ಯಕೀಯ ಸೇವೆ ಅನನ್ಯ

ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಕಳೆದ 30 ವರ್ಷಗಳಿಂದ ಕಣ್ಣಿನ ತಜ್ಞ ವೈದ್ಯರಾಗಿ ವೈದ್ಯಕೀಯ ಕ್ಷೇತ್ರದಲ್ಲಿ ಸೇವೆಯನ್ನು ಸಲ್ಲಿಸುತ್ತಿರುವ ಡಾ.ಪ್ರಭುಗೌಡ ಲಿಂಗದಳ್ಳಿ ಅವರ ಸೇವೆ ಅನನ್ಯ ಹಾಗೂ ಅನುಕರಣೀಯ ವಾಗಿದೆ ಎಂದು ನಾವದಗಿ ಬ್ರಹನ್ಮಠದ ಪೂಜ್ಯಶ್ರೀ ರಾಜಗುರು ರಾಜೇಂದ್ರ ಒಡೆಯರ್ ಶಿವಾಚಾರ್ಯರು ಹೇಳಿದರು. ತಾಲೂಕಿನ ನಾವದಗಿ ಗ್ರಾಮದ ಶ್ರೀಮದ್ ಉಜ್ಜಯಿನಿ ಸದ್ಧರ್ಮ ಪೀಠದ ಶಾಖಾ ಮಠ ಬ್ರಹನ್ಮಠದಲ್ಲಿ ಗುರು ಪಟ್ಟಾಧಿಕಾರ ಮಹೋತ್ಸವದ ವಾರ್ಷಿಕೋತ್ಸವದ ಅಂಗವಾಗಿ ಶನಿವಾರ ಅನುಗ್ರಹ ಕಣ್ಣಿನ ಆಸ್ಪತ್ರೆ ವಿಜಯಪುರ, ಜಿಲ್ಲಾ ಅಂದತ್ವ ನಿವಾರಣಾ ಸಂಸ್ಥೆ



ವಿಜಯಪುರ ಹಾಗೂ ಬ್ರಹನ್ಮಠ ನಾವದಗಿ ಇವರ ಸಹಯೋಗದಲ್ಲಿ ಹಮ್ಮಿಕೊಂಡ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಕಳೆದ ವರ್ಷದಲ್ಲಿಯೂ ಡಾ.ಪ್ರಭುಗೌಡರ ಅನುಗ್ರಹ ಆಸ್ಪತ್ರೆ ಸಿಬ್ಬಂದಿಗಳು ಶಿಬಿರದಲ್ಲಿ ತಮ್ಮ ಸೇವೆಯನ್ನು ನೀಡಿದ್ದರು ಎಂದ ಅವರು ಈ ಶಿಬಿರದಲ್ಲಿ ಕಣ್ಣು,ಹೃದಯ ಕಾಯಿಲೆಗೆ, ಬೆನ್ನು ಮೂಳೆಗೆ ಸಂಬಂಧಿಸಿದ ಕಾಯಿಲೆಗಳ ತಪಾಸಣೆ ನಡೆಸಲಾಗುವುದು, ಇಂಥಹ ಉಚಿತ ಆರೋಗ್ಯ ಶಿಬಿರಗಳಿಂದ ಸಮಾಜದಲ್ಲಿರುವ ಬಡವರಿಗೆ ತುಂಬಾ ಅನುಕೂಲವಾಗುತ್ತದೆ. ಈ ಶಿಬಿರದಲ್ಲಿ ಶಸ್ತ್ರಚಿಕಿತ್ಸೆಗೆ ಆಯ್ಕೆಯಾದವರನ್ನು ಸಂಪೂರ್ಣ ಉಚಿತವಾಗಿ ಶಸ್ತ್ರಚಿಕಿತ್ಸೆ ಮಾಡಲಾಗುವುದು ಗ್ರಾಮಸ್ಥರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದರು. ಶಿಬಿರದಲ್ಲಿ ಕಣ್ಣಿಗೆ ಸಂಬಂಧಿಸಿದ ಕಾಯಿಲೆಗೆ 130 ಜನರು ತಪಾಸಣೆ ಮಾಡಿಸಿಕೊಂಡರು, ಇದರಲ್ಲಿ 25 ಜನರನ್ನು ಶಸ್ತ್ರಚಿಕಿತ್ಸೆಗೆ ಆಯ್ಕೆ ಮಾಡಲಾಯಿತು. ಅದೇ ರೀತಿ ಹೃದಯ ಹಾಗೂ ಬೆನ್ನು ಮೂಳೆಗೆ ಸಂಬಂಧಿಸಿದ ಕಾಯಿಲೆಗಳಿಗೆ ಸುಮಾರು 175 ಜನರು ತಪಾಸಣೆ ಮಾಡಿಸಿಕೊಂಡು. ಉದ್ಘಾಟನಾ ಕಾರ್ಯಕ್ರಮದಲ್ಲಿ ಡಾ.ಕರಬಸಯ್ಯ ಹಿರೇಮಠ,ಡಾ. ರಾಜಕುಮಾರ್ ಗುರಲಿಂಗಯ್ಯ ಹಿರೇಮಠ, ಡಾ. ಶಿವರಾಜ್ ಹಿರೇಮಠ ಸಿಂಧನೂರ,ಡಾ. ಆರಿಫ್ ಮನಿಯಾರ,ಡಾ. ಪ್ರವೀಣ್ ಹಿರೇಮಠ, ಮಹಾಂತೇಶ ಹಾಗೂ ಅನುಗ್ರಹ ಕಣ್ಣಿನ ಆಸ್ಪತ್ರೆ ಸಿಬ್ಬಂದಿಗಳು ಇದ್ದರು. ನಿವೃತ್ತ ಶಿಕ್ಷಕ ಬಸವರಾಜ ಗೊರಜಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ಕಾರು-ಟ್ರಕ್ ಡಿಕ್ಕಿ: ಚಾಲಕನಿಗೆ ಗಂಭೀರ ಗಾಯ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.28–ಮುಂದೆ ಹೊರಟಿದ್ದ ವಾಹನವನ್ನು ಓವರಟೇಕ್ ಮಾಡಲು ಹೋಗಿ ಎದುರಿಗೆ ಬಂದ ಲಾರಿಗೆ ಕಾರು ಢಿಕ್ಕಿ ಹೊಡಿಸಿದ ಚಾಲಕ ಗಂಭೀರವಾಗಿ ಗಾಯಗೊಂಡಿರುವ ಘಟನೆ ಶುಕ್ರವಾರ ಮುಂಜಾನೆ ಮನ್ನಿಕಟ್ಟಿ ಕ್ರಾಸ್ ಹತ್ತಿರ ನಡೆದಿದೆ. ತಾಲೂಕಿನ ಭಗವತಿಯ ಡಿಸಿಸಿ ಬ್ಯಾಂಕ್ ಶಾಖೆಯ ವ್ಯವಸ್ಥಾಪಕ ಅಣ್ಣಪ್ಪ ಬೇವಿನಹಳ್ಳಿ ಅವರು ಮುಂಜಾನೆ 10 ಗಂಟೆಯ ವೇಳೆಗೆ ಬಾಗಲಕೋಟೆಯಿಂದ ಭಗವತಿಗೆ ಕಾರಿನಲ್ಲಿ ತೆರಳುತ್ತಿದ್ದ ಸಮಯದಲ್ಲಿ ಬಾಗಲಕೋಟೆ–ಆಲಮಟ್ಟಿ ರಸ್ತೆಯಲ್ಲಿ ಮನ್ನಿಕಟ್ಟಿ ಕ್ರಾಸ್ ಬಳಿ ಕಾರು ಟ್ರಕ್‌ಗೆ ಢಿಕ್ಕಿ ಹೊಡೆದಿದ್ದು, ಅಣ್ಣಪ್ಪ ಅವರ ಕಾಲು, ಕೈಗೆ ತೀವ್ರತರ ಪೆಟ್ಟಾಗಿದ್ದು, ನಗರದ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಕಾರು ನುಜ್ಜುಗುಜ್ಜಾಗಿದ್ದು, ಟ್ರಕ್‌ನ ಎಕ್ಸಲ್ ಮುರಿದು ಮುಂದಿನ ಎರಡೂ ಚಕ್ರಗಳು ಬೇರೆಡೆ ಹೋಗಿ ಬಿದ್ದಿವೆ. ಬಾಗಲಕೋಟೆ ಗ್ರಾಮೀಣ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಅಪಘಾತ:ಕಾರು ಚಾಲಕನಿಗೆ ಶಿಕ್ಷೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.28–ನಿಷ್ಕಾಳಜಿಯಿಂದ ವೇಗವಾಗಿ ಕಾರು ಚಲಾಯಿಸಿ ಮರಕ್ಕೆ ಡಿಕ್ಕಿ ಹೊಡೆಸಿ ಕಾರಿನಲ್ಲಿದ್ದ ಇಬ್ಬರ ಸಾವಿಗೆ ಕಾರಣನಾಗಿದ್ದ ಆರೋಪಿ ಹರೀಶ ರುದ್ರಗೌಡ ಬಿರಾದಾರಗೆ 1 ವರ್ಷ ಶಿಕ್ಷೆ ಹಾಗೂ 6500 ದಂಡ ವಿಧಿಸಿ ಪ್ರಧಾನ ಜೆ.ಎಂ.ಎಫ್.ಸಿ ನ್ಯಾಯಾಲಯ ಆದೇಶಿಸಿದೆ.

ನಗರದ ವಿದ್ಯಾಗಿರಿ ರೂಪಲ್ಯಾಂಡ್ ಕಡೆಯಿಂದ ಹೋಟೆಲ್ ಮಹಾರಾಜ ಗಾರ್ಡನ್ ಕಡೆಗೆ ಅತೀ ವೇಗದಿಂದ ಬಂದು ರಸ್ತೆ ಬದಿಯ ಬೇವಿನಮರಕ್ಕೆ ಡಿಕ್ಕಿ ಹೊಡೆಸಿದ ಪರಿಣಾಮ ಕಾರಿನಲ್ಲಿದ್ದ ಸ್ಮಿತೇಶ ಸಿದ್ರಾಮಪ್ಪ ಕಾಯಿ ಹಾಗೂ ಪವನ ವಿಠಲರಾವ್ ಬಾಸೂತ್ಕರ ಸಾವಿಗೀಡಾಗಿದ್ದರು.

ಈ ಕುರಿತು ಬಾಗಲಕೋಟೆ ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪಿಎಸ್ಐ ಎಸ್.ಜಿ.ರಾಠೋಡ ಹಾಗೂ ತನಿಖಾಧಿಕಾರಿ ಸಂಗನಗೌಡ ಆರೋಪಿ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ಪ್ರಧಾನ ಜೆ.ಎಮ್.ಎಫ್.ಸಿ ನ್ಯಾಯಾಲಯದ ನ್ಯಾಯಾಧೀಶರಾದ ಮುರುಗೇಂದ್ರ ತುಬಾಕೆ, ಆರೋಪಿಯ ವಿರುದ್ಧ ಅಪರಾಧ ಸಾಬೀತಾದ ಹಿನ್ನೆಲೆಯಲ್ಲಿ, ಕಲಂ 279,337, 304(ಎ)ಅಡಿ ಒಂದು ವರ್ಷ ಶಿಕ್ಷೆ, 6500 ರೂಗಳ ದಂಡ ವಿಧಿಸಿ ತೀರ್ಪು ನೀಡಿರುತ್ತಾರೆ. ಸರ್ಕಾರದ ಪರವಾಗಿ ಸರಕಾರಿ ಅಭಿಯೋಜಕರಾದ ಶಾರದಾ ಬದಾಮಿ ವಾದ ಮಂಡಿಸಿದ್ದರು.

# ಕೆಯುಡಬ್ಲ್ಯೂಜೆ ದತ್ತಿನಿಧಿ ವಾರ್ಷಿಕ ಪ್ರಶಸ್ತಿ ಪ್ರಕಟ :ಕೊಪ್ಪಳದಲ್ಲಿ ಮಾ.೯ಕ್ಕೆ ಪ್ರಶಸ್ತಿ ಪ್ರದಾನ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಿಂದ ಕೊಡಮಾಡುವ ಕೆಯುಡಬ್ಲೂಜೆ ದತ್ತಿನಿಧಿ ಪ್ರಶಸ್ತಿಗಳನ್ನು ಪ್ರಕಟ ಮಾಡಲಾಗಿದೆ. ವೃತ್ತಿ ಸೇವೆ, ಸಾಮಾಜಿಕ ಬದ್ಧತೆ ಮತ್ತು ಸಾಧನೆಗಳಿಗಾಗಿ ಕೆಯುಡಬ್ಲ್ಯುಜೆ ದತ್ತಿನಿಧಿ ಪ್ರಶಸ್ತಿಯನ್ನು ನೀಡಲಾಗುತ್ತಿದೆ.

ಕೊಪ್ಪಳದಲ್ಲಿ ಮಾ.9ರಂದು ನಡೆಯಲಿರುವ ದತ್ತಿ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪ್ರಶಸ್ತಿಯನ್ನು ಪ್ರದಾನ ಮಾಡಲಾಗುವುದು ಎಂದು ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅವರು ತಿಳಿಸಿದ್ದಾರೆ.

ಪ್ರಶಸ್ತಿಗಳ ವಿವರ ಇಂತಿದೆ.

ಡಾ.ಬಿ.ಆರ್.ಅಂಬೇಡ್ಕರ್ ಪ್ರಶಸ್ತಿ:ಸುಬ್ಬು ಹೊಲೆಯಾರ್

ಡಿ.ವಿ.ಜಿ.ಪ್ರಶಸ್ತಿ:ರಾಘವೇಂದ್ರ ಗಣಪತಿ, ವಿಜಯವಾಣಿ, ಬೆಂಗಳೂರು

ಎಚ್. ಎಸ್. ದೊರೆಸ್ವಾಮಿ ಪ್ರಶಸ್ತಿ: ಜಿ.ಯು.ಭಟ್, ಉದಯವಾಣಿ, ಹೊನ್ನಾವರ.

ಎಸ್.ವಿ.ಜಯಶೀಲರಾವ್ ಪ್ರಶಸ್ತಿ: ಅನು ಶಾಂತರಾಜು, ಹಿರಿಯ ಫೋಟೋ ಜರ್ನಲಿಸ್ಟ್, ತುಮಕೂರು

ಪಾಟೀಲ್ ಪುಟ್ಟಪ್ಪ(ಪಾಪು) ಪ್ರಶಸ್ತಿ: ಸುಭಾಷ್ ಹೂಗಾರ, ಹಿರಿಯ ಪತ್ರಕರ್ತರು.

ಗೊಮ್ಮಟ ಮಾಧ್ಯಮ ಪ್ರಶಸ್ತಿ: ಎಂ.ಆರ್.ಸತ್ಯನಾರಾಯಣ, ಮೈಸೂರು.

ಸಿ.ಆರ್.ಕೃಷ್ಣರಾವ್ ಪ್ರಶಸ್ತಿ: ಉಗಮ ಶ್ರೀನಿವಾಸ್, ಕನ್ನಡಪ್ರಭ

ಶ್ರೀಮತಿ ಯಶೋದಮ್ಮ ಜಿ. ನಾರಾಯಣ ಪ್ರಶಸ್ತಿ: ಮಂಜುಶ್ರೀ ಎಂ ಕಡಕೊಳ, ಪ್ರಜಾವಾಣಿ.

ಬದರಿನಾಥ ಹೊಂಬಾಳೆ ಪ್ರಶಸ್ತಿ : ಗಂಗಹನುಮಯ್ಯ, ಅಮೃತವಾಣಿ, ತುಮಕೂರು

ಡಾ.ಎಂ.ಎಂ.ಕಲ್ಬುರ್ಗಿ ಪ್ರಶಸ್ತಿ: ಡಾ.ಸಿದ್ಧನಗೌಡ ಪಾಟೀಲ್, ಸಂಪಾದಕರು, ಹೊಸತು

ಕಿಡಿಶೇಷಪ್ಪ ಪ್ರಶಸ್ತಿ: ಮು. ವೆಂಕಟೇಶಯ್ಯ, ಸಿಂಹ ಬೆಂಗಳೂರು

ರವಿ ಬೆಳಗೆರೆ ಪ್ರಶಸ್ತಿ:ಎಂ.ಕೆ.ಹೆಗಡೆ, ಹಿರಿಯ ಪತ್ರಕರ್ತರು, ಬೆಳಗಾವಿ

ಪಿ.ಆರ್.ರಾಮಯ್ಯ ಸ್ಮಾರಕ ಪ್ರಶಸ್ತಿ:ಎಂ.ಯೂಸುಫ್ ಪಟೇಲ್, ಹಿರಿಯ ಪತ್ರಕರ್ತರು.

ಹೆಚ್.ಕೆ.ವೀರಣ್ಣಗೌಡ ಸ್ಮಾರಕ ಪ್ರಶಸ್ತಿ: ಬಸವರಾಜ ಹೆಗ್ಗಡೆ, ಸಂಜೆ ಮಿತ್ರ, ಮಂಡ್ಯ

ರಾಜಶೇಖರ ಕೋಟಿ ಪ್ರಶಸ್ತಿ:ಕೆ.ಕೆ.ಬೋಪಣ್ಣ, ಆಂದೋಲನ, ಕೊಡಗು ಪಿ.ರಾಮಯ್ಯ ಪ್ರಶಸ್ತಿ: ಎಸ್.ಟಿ.ರವಿಕುಮಾರ್, ಸ್ಟಾರ್ ಆಫ್ ಮೈಸೂರು.

ಮಾ. ರಾಮಮೂರ್ತಿ ಸ್ಮಾರಕ ಪ್ರಶಸ್ತಿ: ತಾ.ನಂ.ಕುಮಾರಸ್ವಾಮಿ, ಆನೇಕಲ್

ಮಹದೇವ ಪ್ರಕಾಶ್ ಪ್ರಶಸ್ತಿ: ಪ್ರಭುಲಿಂಗ ನಿಲೂರೆ, ವಿಜಯ ಕರ್ನಾಟಕ, ಕಲಬುರ್ಗಿ

ಶಿವಮೊಗ್ಗ ಮಿಂಚು ಶ್ರೀನಿವಾಸ ಪ್ರಶಸ್ತಿ: ಚಂದ್ರಶೇಖರ ಶೃಂಗೇರಿ, ಶಿವಮೊಗ್ಗ

ಎಚ್.ಎಸ್. ರಂಗಸ್ವಾಮಿ ಪ್ರಶಸ್ತಿ: ಗಿರೀಶ್ ಉಮ್ರಾಯಿ, ಶಿವಮೊಗ್ಗ

ಎಂ.ನಾಗೇಂದ್ರರಾವ್ ಪ್ರಶಸ್ತಿ: ಕೆ.ಬಿ.ಜಗದೀಶ್, ಸಂಜೆವಾಣಿ, ಕೋಲಾರ

ಶ್ರೀಮತಿ ಗಿರಿಜಮ್ಮ, ರುದ್ರಪ್ಪ ತಾಳಿಕೋಟಿ ಪ್ರಶಸ್ತಿ: ಕವಿತ, ಸಂಯುಕ್ತ ಕರ್ನಾಟಕ. ಅಪ್ಪಾಜಿಗೌಡ (ಸಿನಿ)ಪ್ರಶಸ್ತಿ: ಗಣೇಶ್ ಕಾಸರಗೋಡು, ಹಿರಿಯ ಪತ್ರಕರ್ತರು

ಮೂಡಣ, ಹಾವೇರಿ ಪ್ರಶಸ್ತಿ: ಎಂ.ಚಿರಂಜೀವಿ, ಹಿರಿಯ ಪತ್ರಕರ್ತರು, ಹಾವೇರಿ

ಕೆಯುಡಬ್ಲ್ಯೂಜೆ ವಿಶೇಷ ಪ್ರಶಸ್ತಿಗಳು:ರಂಗನಾಥ್ ಎಸ್ ಭಾರದ್ವಾಜ್–ಟಿವಿ9, ರಮಾಕಾಂತ್–ಟಿವಿ5, ಶ್ರೀನಿವಾಸ್–ಬೆಂಗಳೂರು., ಬಿ.ಪಿಳ್ಳರಾಜು, ಕನ್ನಡಪ್ರಭ, ದೇವನಹಳ್ಳಿ, ಬೆಂಗಳೂರು ಗ್ರಾಮಾಂತರ. ಬಾಸ್ಕರ ರೈ ಕಟ್ಟ–ಮಂಗಳೂರು, ಗುರುಶಾಂತ.ಎನ್.–ಬಳ್ಳಾರಿ, ಎಸ್.ಎಂ.ಮನೋಹರ–ಹೊಸಪೇಟೆ, ವಿಜಯನಗರ.

ಸಿ.ಬಿ.ಸುಬೇದಾರ್–ನರಗುಂದ, ಗದಗ, ನಾಗೇಂದ್ರ–ಶಹಾಪುರ, ಯಾದಗಿರಿ, ಡಿ.ಜಿ.ರಾಜಗೋಪಾಲ್–ಹಾಸನ, ಮಂಜುನಾಥ್ ಜೆ–ಚಳ್ಳಕೆರೆ, ಚಿತ್ರದುರ್ಗ

# ಕಾಯಕ ಯೋಗಿ ಬಸವಣ್ಣ ಪ್ರಶಸ್ತಿಗೆ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಆಯ್ಕೆ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಫೆ.28:ನಮ್ಮ ಕರ್ನಾಟಕ ಸೇನೆ ವತಿಯಿಂದ ಕೊಡಮಾಡುವ ಕಾಯಕ ಯೋಗಿ ಬಸವಣ್ಣ ಪ್ರಶಸ್ತಿಗೆ ಬಸವಕಲ್ಯಾಣ ಅನುಭವ ಮಂಟಪದ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಅವರನ್ನು ಆಯ್ಕೆ ಮಾಡಲಾಗಿದೆ ಎಂದು ನಮ್ಮ ಕರ್ನಾಟಕ ಸೇನೆ ಜಿಲ್ಲಾಧ್ಯಕ್ಷ ಗಣೇಶ ಪಾಟೀಲ್ ಹೇಳಿದರು.



ಪಟ್ಟಣದ ಕುಂಬಾರಗುಂಡಯ್ಯ ಕಲ್ಯಾಣ ಮಂಟಪದಲ್ಲಿ ನಮ್ಮ ಕರ್ನಾಟಕ ಸೇನೆ ವತಿಯಿಂದ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು, ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಅವರನ್ನು ಸನ್ಮಾನಿಸಿ, ಆಹ್ವಾನ ಪತ್ರಿಕೆ ನೀಡಿ ಪ್ರಶಸ್ತಿ ಸ್ವೀಕಾರ ಸಮಾರಂಭಕ್ಕೆ ಆಹ್ವಾನಿಸಿ ಅವರು ಮಾತನಾಡಿದರು.

ಗಡಿಭಾಗದಲ್ಲಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಶೈಕ್ಷಣಿಕ, ಧಾರ್ಮಿಕ, ಸಾಮಾಜಿಕ ಕ್ಷೇತ್ರದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸುತ್ತಿದ್ದಾರೆ. ಅವರ ಸಮಾಜಪರ, ಜೀವಪರ ಸೇವೆ ಗುರುತಿಸಿ ನಮ್ಮ ಕರ್ನಾಟಕ ಸೇನೆ ರಾಜ್ಯಾಧ್ಯಕ್ಷ ಎಂ.ಬಸವರಾಜ ಪಡುಕೋಟೆ ಅವರು ಪೂಜ್ಯರನ್ನು ಪ್ರಶಸ್ತಿಗೆ ಆಯ್ಕೆ ಮಾಡಿದ್ದಾರೆ.

ಬರುವ ಏಪ್ರಿಲ್ ತಿಂಗಳಲ್ಲಿ ಬೆಂಗಳೂರಿನಲ್ಲಿ ನಡೆಯಲಿರುವ ಪುಲಕೇಶಿ ಉತ್ಸವ ಮತ್ತು ನಮ್ಮ ಕರ್ನಾಟಕ ಸೇನೆ ಸಂಘಟನೆಯ ಎರಡನೆಯ ವಾರ್ಷಿಕೋತ್ಸವ ಸಮಾರಂಭದಲ್ಲಿ ಪ್ರಶಸ್ತಿ ಫಲಕ, ನಗದು 25 ಸಾವಿರ ರೂ ನೀಡಿ ಗೌರವಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ನಮ್ಮ ಕರ್ನಾಟಕ ಸೇನೆ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂಜು ಯಾದವ, ಜಿಲ್ಲಾ ಪ್ರಧಾನ ಸಂಚಾಲಕ ಸುಧಾಕರ ರಾಠೋಡ, ಯುವ ಘಟಕದ ಜಿಲ್ಲಾಧ್ಯಕ್ಷ ಸುದೀಪ ತೂಗಾಂವೆ, ತಾಲೂಕು ಅಧ್ಯಕ್ಷ ಬಸವರಾಜ ಕಾರಬಾರಿ, ಪ್ರಮುಖರಾದ ಲೋಕೇಶ ಪಾಟೀಲ್, ಭದ್ರೇಶ್ ಸ್ವಾಮಿ, ಕಾಶಿನಾಥ, ಸಂಗಮೇಶ ಹಲಬರ್ಗೆ, ಸಂದೇಶ ಭಾಲ್ಕಿ ಸೇರಿದಂತೆ ಹಲವರು ಇದ್ದರು.

# ಮಾ.೮ ರಂದು ರಾಷ್ಟ್ರೀಯ ಲೋಕ್ ಅದಾಲತ್:

## ರಾಜೀ ಸಂಧಾನದ ಮೂಲಕ ಪ್ರಕರಣಗಳ ಇತ್ಯರ್ಥ:ಎ.ವ್ಹಿ.ಶ್ರೀನಾಥ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.28:ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಬರುವ ಮಾರ್ಚ್ 8 ರಂದು ಕಲಬುರಗಿ ಜಿಲ್ಲೆಯ ಎಲ್ಲಾ ಜಿಲ್ಲಾ ಮತ್ತು ತಾಲೂಕು ಹಂತದ ನ್ಯಾಯಾಲಯಗಳಲ್ಲಿ ರಾಷ್ಟ್ರೀಯ ಲೋಕಾ ಅದಲಾತ್ ನಡೆಯಲಿದ್ದು, ರಾಜೀಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗುವುದು ಎಂದು ಪ್ರಭಾರಿ ಕಲಬುರಗಿ ಜಿಲ್ಲಾ ಪ್ರಧಾನ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಎ.ವ್ಹಿ.ಶ್ರೀನಾಥ ಹೇಳಿದರು.

ಶುಕ್ರವಾರ ಇಲ್ಲಿನ ಕೋರ್ಟ್ ಕಾಂಪ್ಲೆಕ್ಸ್ ಆವರಣದಲ್ಲಿರುವ ಎ.ಡಿ.ಆರ್. ಕಟ್ಟಡದಲ್ಲಿ ಕರೆದ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ನ್ಯಾಯಾಧೀಶರು, ಕಲಬುರಗಿ ಜಿಲ್ಲಾ ನ್ಯಾಯಾಲಯಗಳಲ್ಲಿ ಹೆಚ್ಚಿನ ಪ್ರಕರಣಗಳು ಬಾಕಿ ಇದ್ದು, ಜನತಾ ಅದಾಲತ್ ಮೂಲಕ ರಾಜೀ ಸಂಧಾನದಿಂದ ಗರಿಷ್ಠ ಪ್ರಮಾಣದ ಪ್ರಕರಣಗಳನ್ನು ಇತ್ಯರ್ಥಪಡಿಸುವ ಗುರಿ ಹೊಂದಲಾಗಿದೆ ಎಂದರು.

ಲೋಕ ಅದಾಲತ್‌ನಲ್ಲಿ ಸಿವ್ಹಿಲ್ ವ್ಯಾಜ್ಯಗಳು, ರಾಜೀಯಾಗಬಹುದಾದ ಕ್ರಿಮಿನಲ್ ಪ್ರಕರಣಗಳನ್ನು, ಚೆಕ್ ಅಮಾನ್ಯ ಪ್ರಕರಣಗಳನ್ನು, ಬ್ಯಾಂಕ್ ವಸೂಲಿ ಪ್ರಕರಣಗಳನ್ನು, ಮೋಟಾರು ವಾಹನ ಅಪಘಾತ ಪರಿಹಾರ ಕೇಳಿದ ಪ್ರಕರಣಗಳನ್ನು, ಕಾರ್ಮಿಕ ವ್ಯಾಜ್ಯಗಳನ್ನು, ಕೌಟುಂಬಿಕ ನ್ಯಾಯಾಲಯದಲ್ಲಿನ ಕೆಲವು ಪ್ರಕರಣಗಳನ್ನು ಮತ್ತು ಅಮಲ್‌ಜಾರಿ ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳಬಹುದಾಗಿದ್ದು, ಕಕ್ಷಿದಾರರು ಮತ್ತು ನ್ಯಾಯವಾದಿಗಳು ಇದರ ಲಾಭ ಪಡೆಯಬೇಕೆಂದು ಮನವಿ ಮಾಡಿಕೊಂಡರು.

ಜನತಾ ನ್ಯಾಯಾಲಯದಲ್ಲಿ ಕೊಡುವ ತೀರ್ಪು ನ್ಯಾಯಾಲಯದಲ್ಲಿ ಕೊಡುವ ತೀರ್ಪಿನಷ್ಟೆ ಪರಿಣಾಮಕಾರಿಯಾಗಿರುತ್ತದೆ. ಯಾವುದೇ ಮೇಲ್ಮನವಿ ಅಥವಾ ಖರ್ಚು ವೆಚ್ಚ ಇರುವುದಿಲ್ಲ. ಜನತಾ ನ್ಯಾಯಾಲಯದಲ್ಲಿ ವಕೀಲರ ಮುಖಾಂತರ ಅಥವಾ ನೇರವಾಗಿ ಕಕ್ಷಿದಾರರೇ ಭಾಗವಹಿಸಬಹುದಾಗಿದೆ. ಸೌಹಾರ್ದಯುತವಾಗಿ ಪ್ರಕರಣಗಳನ್ನು ಇತ್ಯರ್ಥಗೊಳ್ಳುವುದರಿಂದ ಪರಸ್ಪರ ಉತ್ತಮ ಬಾಂಧವ್ಯ ಇಟ್ಟುಕೊಳ್ಳಲು ಸಹಕರಿಯಾಗಲಿದೆ ಎಂದು ನ್ಯಾಯಾಧೀಶರು, ರಾಜೀ ಸಂಧಾನದ ಮೂಲಕ ಇತ್ಯರ್ಥಗೊಂಡ ಪ್ರಕರಣಗಳಿಗೆ ಮೇಲ್ಮನವಿಗೆ ಹೋಗಲು ಅವಕಾಶವಿರುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮತ್ತು ಹಿರಿಯ ಸಿವಿಲ್ ನ್ಯಾಯಾಧೀಶ ಶ್ರೀನಿವಾಸ ನವಲೆ ಇದ್ದರು.

# ಮಾ.೩ ರಂದು ರಾಜಭವನಕ್ಕೆ ಮುತ್ತಿಗೆ; ಮಾ. 22 ರಂದು ಕರ್ನಾಟಕ ಬಂದ್



ಬೆಂಗಳೂರು: ಕೆಎಸ್‌ಆರ್‌ಟಿಸಿ ಬಸ್ ಕಂಡಕ್ಟರ್ ಮೇಲೆ ಹಲ್ಲೆ ಖಂಡಿಸಿ ಹಾಗೂ ರಾಜ್ಯ ಸಾರಿಗೆ ಸಂಸ್ಥೆಗಳ ಬಸ್ ಗಳ ಮೇಲೆ ಮರಾಠಿಗರ ದಾಳಿ ಖಂಡಿ ಕನ್ನಡಪರ ಹೋರಾಟಗಾರ ವಾಟಾಳ್ ನಾಗರಾಜ್ ಅವರು ಶುಕ್ರವಾರ ಸಾಲು ಸಾಲು ಪ್ರತಿಭಟನೆಗೆ ಕರೆ ನೀಡಿದ್ದು, ಮಾರ್ಚ್ 3 ರಂದು ರಾಜಭವನಕ್ಕೆ ಮುತ್ತಿಗೆ ಹಾಕುವುದಾಗಿ ಹಾಗೂ ಮಾರ್ಚ್ 22 ರಂದು ಅಖಂಡ ಕರ್ನಾಟಕ ಬಂದ್ ಮಾಡುವುದಾಗಿ ಘೋಷಿಸಿದ್ದಾರೆ. ಇಂದು ಬೆಂಗಳೂರಿನಲ್ಲಿ ವಾಟಾಳ್ ನಾಗರಾಜ್ ನೇತೃತ್ವದಲ್ಲಿ ನಡೆದ ಕನ್ನಡಪರ ಸಂಘಟನೆಗಳ ಸಭೆಯಲ್ಲಿ ಮಾರ್ಚ್ 22 ರಂದು ಕರ್ನಾಟಕ ಬಂದ್ ಗೆ ಕರೆ ನೀಡಲು ನಿರ್ಧರಿಸಲಾಗಿದೆ.

ಮಾರ್ಚ್ 3 ರಂದು ರಾಜಭವನಕ್ಕೆ ಮುತ್ತಿಗೆ ಹಾಗೂ ಮಾರ್ಚ್ 7 ರಂದು ಬೆಳಗಾವಿ ಚಲೋಗೆ ಕರೆ ನೀಡಲಾಗಿದ್ದು, ಇದಕ್ಕೆ ವಿವಿಧ ಕನ್ನಡಪರ ಸಂಘಟನೆಗಳು ಬೆಂಬಲ ಸೂಚಿಸಿವೆ. ಅಲ್ಲದೆ ಮಾರ್ಚ್ 11 ರಂದು ಮೇಕೆದಾಟಿಗಾಗಿ ಅತ್ತಿಬೆಲೆ ತಮಿಳುನಾಡು ಗಡಿ ಬಂದ್, ಮಾ.14 ರಾಮನಗರ ಮಂಡ್ಯ ಮೈಸೂರು ಜಿಲ್ಲಾಧಿಕಾರಿಗಳ ಕಚೇರಿ ಬಳಿ ಪ್ರತಿಭಟನೆ ಮತ್ತು ಮಾ.17 ರಂದು ಹೊಸಕೋಟೆ – ಚೆನ್ನೈ ಹೆದ್ದಾರಿ ಬಂದ್ ಮಾಡಲು ನಿರ್ಧರಿಸಲಾಗಿದೆ.

ಕರ್ನಾಟಕ ಬಂದ್‌ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಂಪೂರ್ಣ ಬೆಂಬಲ ಕೊಡಬೇಕು. ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಅವರು ಇಲಾಖೆಯ ಎಲ್ಲ ಬಸ್?ಗಳನ್ನು ಅಂದು ನಿಲ್ಲಿಸಬೇಕು. ನಮಗೆ ಹೋಟೆಲ್ ಮಾಲೀಕರು, ಸಿನಿಮಾ ರಂಗದವರು, ಸರ್ಕಾರಿ ನೌಕರರು, ದೊಡ್ಡ ಹಾಗೂ ಸಣ್ಣ ವಾಹನಗಳ(ಲಾರಿ, ಖಾಸಗಿ ಬಸ್, ಕಾರು, ವ್ಯಾನ್) ಮಾಲೀಕರು ನಮಗೆ ಬೆಂಬಲ ಸೂಚಿಸಬೇಕು ಎಂದು ವಾಟಾಳ್ ಮನವಿ ಮಾಡಿದ್ದಾರೆ.

ಮರಾಠರಿಗೆ ಸರಿಯಾದ ಪಾಠ ಕಲಿಸಬೇಕಿದೆ. ಹೀಗಾಗಿ ಕರ್ನಾಟಕ ರಾಜ್ಯದ ಎಲ್ಲ ಕನ್ನಡಪರ ಸಂಘಟನೆಗಳು ಹಾಗೂ ರೈತ ಸಂಘಗಳು ಸಂಪೂರ್ಣ ಬೆಂಬಲ ನೀಡಬೇಕು ಎಂದು ವಾಟಳ್ ನಾಗರಾಜ್ ಅವರು ಹೇಳಿದ್ದಾರೆ.

ಬಂದ್ ಹಾಗೂ ಬೆಳಗಾವಿ ಚಲೋ ನಡೆಸುವ ಬಗ್ಗೆ ಆಯೋಜಿಸಿದ್ದ ಸಭೆಯಲ್ಲಿ ವಾಟಾಳ್ ನಾಗರಾಜ್, ಸಾರಾ ಗೋವಿಂದು, ಕರವೇ ಪ್ರವೀಣ್ ಶೆಟ್ಟಿ, ಕನ್ನಡ ಕುಮಾರ್, ಜಯಕರ್ನಾಟಕ ರಾಜ್ಯಾಧ್ಯಕ್ಷ ಜಗದೀಶ್, ಗಿರೀಶ್ ಗೌಡ, ರೂಪೇಶ್ ರಾಜಣ್ಣ ಸೇರಿ ಅನೇಕ ಕನ್ನಡಪರ ಹೋರಾಟಗಾರರು ಭಾಗವಹಿಸಿದ್ದರು.

# ಅಪರಿಚಿತ ವಾಹನ ಡಿಕ್ಕಿ : ಜಿಂಕೆ ಸಾವು



ಮಲ್ಲಮ್ಮ ನುಡಿ ವಾರ್ತೆ

ಬೀದರ.ಫೆ.28:ಹುಲಸೂರ್ ಸಮೀಪದ ರಾಷ್ಟ್ರೀಯ ಹೆದ್ದಾರಿಯ ಪಾಂಡ್ರಿ–ಕೇಸರ ಜವಳಗಾ ಗ್ರಾಮದ ಮಧ್ಯೆ ಗುರುವಾರ ಅಪರಿಚಿತ ವಾಹನ ಡಿಕ್ಕಿ ಹೊಡೆದು ಜಿಂಕೆ ಮೃತಪಟ್ಟಿದೆ. ಜಿಂಕೆಯು 4ರಿಂದ 5 ವರ್ಷಗಳದ್ದಾಗಿದೆ. ಅರಣ್ಯ ಪ್ರದೇಶದಿಂದ ಆಹಾರ ಅರಸಿ ಬಂದ ಜಿಂಕೆಯು ರಸ್ತೆ ದಾಟುತ್ತಿರುವಾಗ ವೇಗವಾಗಿ ಬಂದ ವಾಹನ ಗುದ್ದಿದ್ದು, ಅದರ ರಭಸಕ್ಕೆ ಜಿಂಕೆಯು ರಸ್ತೆ ಬದಿಯಲ್ಲಿ ಬಿದ್ದಿದೆ. ಸ್ಥಳಕ್ಕೆ ಅರಣ್ಯ ಇಲಾಖೆ ಉಪ ವಲಯ ಅರಣ್ಯಾಧಿಕಾರಿ ರವಿ ಕೆ. ಹಾಗೂ ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಅಪಘಾತ ಮಾಡಿರುವ ವಾಹನ ಪತ್ತೆಗೆ ಕ್ರಮ ಕೈಗೊಂಡಿದ್ದಾರೆ.

# ಮಾ.5 ರಂದು ಸಾರ್ವಜನಿಕರ ಅಭಿಪ್ರಾಯ ಪಡೆಯಲು ಪೂರ್ವಭಾವಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.28:ಕಲಬುರಗಿ ಮಹಾನಗರ ಪಾಲಿಕೆಯು 2025–26ನೇ ಸಾಲಿಗೆ ಮುಂಗಡ ಪತ್ರ ತಯ್ಯಾರಿಸುವ ನಿಟ್ಟಿನಲ್ಲಿ ಪೂರ್ವಭಾವಿಯಾಗಿ ಮಾರ್ಚ್ 5 ರಂದು ಬೆಳಿಗ್ಗೆ 11 ಗಂಟೆಗೆ ಇಂದಿರಾ ಸ್ಮಾರಕ ಭವನದಲ್ಲಿ ಸಾರ್ವಜನಿಕರ ಸಲಹೆ–ಸೂಚನೆ ಪಡೆಯಲು ಪೂರ್ವಭಾವಿ ಸಭೆ ಆಯೋಜಿಸಿದೆ ಎಂದು ಪಾಲಿಕೆ ಆಯುಕ್ತ ಅವಿನಾಶ ಶಿಂಧೆ ಸಜ್ಜನ್ ತಿಳೀಸಿದ್ದಾರೆ.

ಇಂದಿರಾ ಸ್ಮಾರಕ ಭವನದಲ್ಲಿ ನಡೆಯುವ ಸಭೆಗೆ ಮಹಾನಗರದ ಸಾರ್ವಜನಿಕರು,

ನೊಂದಾಯಿತ ಸ್ಥಳೀಯ ಕಲ್ಯಾಣ ಸಂಘ, ವ್ಯಾಪಾರ, ಉದ್ಯಮ ನಡೆಸುವ ಸಂಘ–ಸಂಸ್ಥೆಗಳು, ಎನ್.ಜಿ.ಓ ಸಂಘಗಳು ಮತ್ತು ಅದರ ಪ್ರತಿನಿಧಿಗಳು ಆಗಮಿಸಿ ಅಗತ್ಯ ಸಲಹೆ ಸೂಚನೆ ನೀಡುವಂತೆ ಅವರು ಕೋರಿದ್ದಾರೆ.

# ಮಾ.2 ರಂದು ಜಿಲ್ಲಾ ಮಟ್ಟದ ಮಹಿಳಾ ಕ್ರೀಡಾಕೂಟ

ಮಲ್ಲಮ್ಮ ನುಡಿ ವಾರ್ತೆ

ಬೀದರ:ಫೆ.28:ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೀದರ ಇವರ ಸಹಯೋಗದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ 2024–25ನೇ ಸಾಲಿನ ಜಿಲ್ಲಾ ಮಟ್ಟದ ಮಹಿಳಾ ಕ್ರೀಡಾಕೂಟವನ್ನು ಮಾರ್ಚ.2 ರಂದು ಬೆಳಿಗ್ಗೆ 10 ಗಂಟೆಗೆ ಬೀದರ ಜಿಲ್ಲಾ ನೆಹರು ಕ್ರೀಡಾಂಗಣದಲ್ಲಿ ನಡೆಯಲಿದೆ.

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಕಾರ್ಯಕ್ರಮ ಉದ್ಘಾಟನೆ ಮಾಡಲಿದ್ದಾರೆ.

ಪೌರಾಡಳಿತ ಮತ್ತು ಹಜ್ ಸಚಿವರಾದ ರಹೀಂ ಖಾನ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಬೀದರ ಲೋಕಸಭಾ ಸದಸ್ಯರಾದ ಸಾಗರ ಈಶ್ವರ ಖಂಡ್ರೆ, ಔರಾದ (ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ, ಬಸವಕಲ್ಯಾಣ ಶಾಸಕ ಶರಣು ಸಲಗರ, ಬೀದರ ದಕ್ಷಿಣ ಶಾಸಕ ಡಾ.ಶೈಲೇಂದ್ರ ಕೆ.ಬೆಲ್ದಾಳೆ, ಹುಮನಾಬಾದ ಶಾಸಕ ಡಾ.ಸಿದ್ಧಲಿಂಗಪ್ಪ ಎನ್.ಪಾಟೀಲ ಹಾಗೂ ವಿಧಾನ ಪರಿಷತ್ ಸದಸ್ಯರುಗಳಾದ ಡಾ.ಚಂದ್ರಶೇಖರ ಬಿ.ಪಾಟೀಲ, ಶಶೀಲ ಜಿ.ನಮೋಶಿ, ಭೀಮರಾವ ಬಿ.ಪಾಟೀಲ, ಎಂ.ಜಿ.ಮೂಳೆ ಹಾಗೂ ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಮಾಲಾ ನಾರಾಯಣರಾವ, ಬಿದರ ನಗರಸಭೆ ಅಧ್ಯಕ್ಷ ಮಹಮ್ಮದ್ ಗೌಸ್, ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅದ್ಯಕ್ಷರಾದ ಬಸವರಾಜ ಜಾಬಶೆಟ್ಟಿ ಭಾಗವಹಿಸಲಿದ್ದಾರೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.